# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಅಸ್ತಿ ಅಂತಸ್ತಿನ ದರ್ಪದಲಿ ತೇಲಬೇಡ..
ರೂಪವಂತನೆಂದು ಜಂಭ ಪಡಬೇಡ..
ಉನ್ನತಧಿಕಾರಿಯೆಂದು ಮೆರೆಯ ಬೇಡ..
ಮೇಲು ಕೀಳೆಂದು ಬೇದ ಮಾಡಬೇಡ..
ಸಂಸ್ಕಾರ ಸಂಸ್ಕೃತಿಯನ್ನು ತುಳಿಯಬೇಡ..
ರಾಕ್ಷಸನಂತೆ ಎಂದಿಗೂ ನೀ ವರ್ತಿಸಬೇಡ..
ತಾಯಿ ಗರ್ಭದಿ ನೀನು ಬಂದಿರುವೆ..
ಭೂಗರ್ಭಕೆ ಕೊನೆಗೆ ಸೇರುವೆ..
ಯಾವುದು ನಿನ್ನದಲ್ಲದ ಈ ಜಗದಲಿ..
ನಾಲ್ಕು ಹಿಡಿ ಮಣ್ಣು ಮಾತ್ರ ಶಾಶ್ವತ..



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 07-02-2025 to 13-02-2025 ಬೆಲೆ: 7-00 ಸಂಪುಟ–4 ಸಂಚಿಕೆ–33 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






ಗಾಳಿಪಟ ಹಾರಿಸುವುದೆಂದರೆ ಸಾದಾರಣವಾಗಿ ಗಂಡು,ಹೆಣ್ಣು ಅಥವಾ ಮಕ್ಕಳು ವಯಸ್ಕರು ಎನ್ನುವ ಭೇದವಿಲ್ಲದೆ ಎಲ್ಲರಿಗೂ ಇಷ್ಟ. ಅದರಲ್ಲಿ ಕೆಲವು ಕಡೆಗಳಲ್ಲಿ ಮಕರ ಸಂಕ್ರಾಂತಿಗೆ ಗಾಳಿಪಟ ಹಬ್ಬವನ್ನೇ ಆಚರಿಸಲಾಗುತ್ತದೆ. ಹಾಗೆ ಪ್ರಾರಂಭ ಆಗುವ ಗಾಳಿಪಟದ ಹಾರಾಟ ಬೇಸಿಗೆಯಲ್ಲಿ ಅಲ್ಲಲ್ಲಿ ಕಾಣಸಿಗುತ್ತದೆ. ಈ ಗಾಳಿಪಟ ಹಾರಿಸಲು ಮಾಂಜ ಅಂದರೆ ಗಾಜಿನ ಪುಡಿಯನ್ನು ಲೇಪಿಸಿದ ದಾರವನ್ನು ಉಪಯೋಗಿಸಲಾಗುತ್ತಿತ್ತು. ಅದು ಅಪಾಯಕರವಾದ್ದರಿಂದ ಭಹಿಷ್ಕರಿಸಲಾಗಿದೆಯಾದರು, ಗಾಳಿಪಟದ ಪಂದ್ಯಗಳಲ್ಲಿ ಇನ್ನೂ ಕೂಡ ಕೆಲವು ಕಡೆಗಳಲ್ಲಿ ಬಳಸುತ್ತಿದ್ದಾರೆ ಎನ್ನುವುದು ಬೇಸರದ ಸಂಗತಿ. ಅದರ ಜೊತೆ ಕೆಲವರು ನೈಲಾನ್ ದಾರಗಳನ್ನು ಉಪಯೋಗಿಸುತ್ತಾರೆ. ಇಂತಹ ದಾರಗಳು ಅಪಾಯಕರವಾದ್ದರಿಂದ ಉಪಯೋಗಿಸದಿದ್ದರೆ ಉತ್ತಮ.

## ಸರ್ಕಲ್‌ನಲ್ಲಿ ನಿಲ್ಲಿಸಿ ಗುಂಡು ಹಾರಿಸಬೇಕಾಗುತ್ತದೆ:ಸಚಿವ ವೈದ್ಯ



**ಕಾರವಾರ:** ಹಾಲು ಕೊಡುವ ಗೋವನ್ನು ಹತ್ಯೆ ಮಾಡುವುದನ್ನು ಸಹಿಸಲು ಸಾಧ್ಯವಿಲ್ಲ. ಮುಂದೆ ಇಂತಹ ಘಟನೆಗಳು ಮುಂದು ವರಿದಲ್ಲಿ ತಪ್ಪಿತಸ್ಥರಿಗೆ ಸರ್ಕಲ್‌ನಲ್ಲಿ ನಿಲ್ಲಿಸಿ ಗುಂಡು ಹಾರಿಸಬೇಕಾಗುತ್ತದೆ ಎಂದು ಸಚಿವ ಮಂಕಾಳ್ ವೈದ್ಯ ಎಚ್ಚರಿಕೆ ನೀಡಿದ್ದಾರೆ. ಕಾರವಾರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಉತ್ತರ ಕನ್ನಡ ಜಿಲ್ಲೆಯಲ್ಲಿ ಹಸು ಕಳ್ಳತನ ಹಲವು ವರ್ಷಗಳಿಂದ ನಡೆದು ಬಂದಿದೆ. ಇಂತಹ ಕಳ್ಳತನ **3ನೇ ಪುಟಕ್ಕೆ**

## ಆಚರಣೆಗಳಲ್ಲಿ ಬಿಜೆಪಿ ರಾಜಕೀಯ ಹುಡುಕುತ್ತಿದೆ–ಡಿ.ಕೆ.ಶಿ

**ಬೆಂಗಳೂರು:** ಯಾವುದೇ ಧರ್ಮದ ಬಗ್ಗೆ ಶ್ರದ್ಧೆ, ಆಚರಣೆ, ನಂಬಿಕೆಗಳು ಆಯಾಯ ವ್ಯಕ್ತಿಗೆ ಸಂಬಂಧಿಸಿದ ವಿಚಾರಗಳು. ನಾವು ಪ್ರತಿಯೊಂದಕ್ಕೂ ಗೌರವ ನೀಡಬೇಕು. ಆದರೆ ಇವುಗಳನ್ನು ಬಿಜೆಪಿ ತನ್ನ ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತರಾಟೆಗೆ ತೆಗೆದುಕೊಂಡಿದ್ದಾರೆ. ಖಾಸಗಿ ಹೋಟೆಲ್‌ನಲ್ಲಿ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, “ವಿರೋಧ ಪಕ್ಷದ ನಾಯಕ ಅಶೋಕ್ ಅವರ ಹೇಳಿಕೆಗೆ ಉತ್ತರಿಸಲು ನಾನು ಇಷ್ಟ ಪಡುವುದಿಲ್ಲ. ಯಾರು ಏನಾದರೂ ಹೇಳಿಕೊಳ್ಳಲಿ, ನಮ್ಮ ಧರ್ಮ, ನಮ್ಮ ಕರ್ಮ, **3ನೇ ಪುಟಕ್ಕೆ**



## ತೇಜೋವಧೆ ಮಾಡುವವರ ಬಾಯಿ ಮುಚ್ಚಿಸಲಿ: ವಿಜಯೇಂದ್ರ

**ಬೆಂಗಳೂರು:** ತಟಸ್ಥ ಎಂದು ಹೇಳಿಕೊಳ್ಳುವ ನಾಯಕರು ಮೊದಲಿಗೆ ಬಿ. ಎಸ್. ಯಡಿಯೂರಪ್ಪ ವಿರುದ್ಧ ತೇಜೋವಧೆ ಮಾಡುತ್ತಿರುವವರ ಬಾಯಿ ಮುಚ್ಚಿಸಲಿ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಪಕ್ಷಕ್ಕೆ ಯಡಿಯೂಪ್ಪ ಅವರ ಕೊಡುಗೆ ಇಲ್ಲವೇ ಎಂದು ಪ್ರಶ್ನಿಸಿದರು. ನಾನು ಯಾವುದೇ ಅಪಮಾನ ಸಹಿಸಿಕೊಳ್ಳಲು ತಯಾರಿದ್ದೇನೆ. ಪಕ್ಷಕ್ಕೆ ದುಡಿದ ಯಡಿಯೂರಪ್ಪ ಅವರನ್ನು ಅತ್ಯಂತ ಕೀಳು ಮಟ್ಟದಲ್ಲಿ **3ನೇ ಪುಟಕ್ಕೆ**








# ಸಂಪ್ರದಾಯ

## ಪುತಾಂಡು




ತಮಿಳು ಕ್ಯಾಲೆಂಡರ್‌ನ ಪ್ರಕಾರ ತಮಿಳು ಹೊಸ ವರ್ಷ ಎಂದೂ ಕರೆಯಲ್ಪಡುವ ಪುತಾಂಡು ತಮಿಳು ಕ್ಯಾಲೆಂಡರ್‌ನಲ್ಲಿ ವರ್ಷದ ಮೊದಲ ದಿನವಾಗಿದೆ. ಇದು ತಮಿಳು ತಿಂಗಳು ಚಿತ್ತಿರೈನಲ್ಲಿ ಬರುತ್ತದೆ. ಕೇರಳದಲ್ಲಿ ವಿಷು ಮತ್ತು ವೈಶಾಖಿ ಹೆಸರುಗಳಿಂದ ಕರೆದರೆ ಕರ್ನಾಟಕದ ಕರಾವಳಿಯಲ್ಲಿ ಬಿಸು ಹಬ್ಬವಾಗಿ ಆಚರಿಸಲಾಗುತ್ತದೆ. ಮಧ್ಯ ಮತ್ತು ಉತ್ತರ ಭಾರತದಲ್ಲಿ ಬೈಸಾಖಿ ಎನ್ನಲಾಗುತ್ತದೆ. ಅದೇ ದಿನವನ್ನು ದಕ್ಷಿಣ ಮತ್ತು ಆಗ್ನೇಯ ಏಷ್ಯಾದಲ್ಲಿ ಸಾಂಪ್ರದಾಯಿಕ ಹೊಸ ವರ್ಷವಾಗಿ ಆಚರಿಸಲಾಗುತ್ತದೆ. ಈದಿನದಂದು ತಮಿಳು ಜನರು "ಪುಟ್ಟಾಣು ವಾಳಟ್ಟುಕ" ಎಂದು ಹೇಳುವ ಮೂಲಕ ಪರಸ್ಪರ ಶುಭಾಶಯ ಕೋರುತ್ತಾರೆ. ಈ ದಿನವನ್ನು ಕುಟುಂಬದ ಸಮಯವಾಗಿ ಆಚರಿಸಲಾಗುತ್ತದೆ. ಮಕ್ಕಳು ಆಶೀರ್ವಾದವನ್ನು ಪಡೆಯಲು ಹಿರಿಯರ ಬಳಿಗೆ ಹೋಗುತ್ತಾರೆ. ತಮಿಳು ಜನರು ಪುಟಾಂಡುವನ್ನು ಪುತುವರುಶಂ ಎಂದೂ ಕರೆಯುತ್ತಾರೆ. ಪುಟಾಂಡುವಿನ ಮುನ್ನಾ ದಿನದಂದು ಮಾವು, ಬಾಳೆಹಣ್ಣು ಮತ್ತು ಹಲಸಿನ ಹಣ್ಣು, ವೀಳ್ಯದೆಲೆ ಮತ್ತು ಅಡಿಕೆ, ಚಿನ್ನ/ಬೆಳ್ಳಿ ಆಭರಣಗಳು, ನಾಣ್ಯಗಳು/ ಹಣ, ಹೂವುಗಳು ಮತ್ತು ಕನ್ನಡಿಯೊಂದಿಗೆ ತಟ್ಟೆಯನ್ನು ಜೋಡಿಸಲಾಗುತ್ತದೆ. ಇದು ಕೇರಳದ ವಿಷುವನ್ನು ಹೋಲುತ್ತದೆ. ಮನೆಯ ಪ್ರವೇಶ ದ್ವಾರಗಳ ನ್ನು ಬಣ್ಣ ಬಣ್ಣದ ಅಕ್ಕಿ ಪುಡಿಯಿಂದ ವಿಸ್ತೃತವಾಗಿ ಅಲಂಕರಿಸಲಾಗಿದೆ. ಈ ವಿನ್ಯಾಸಗಳನ್ನು ಕೋಲಂಗಳು ಎಂದು ಕರೆಯಲಾಗುತ್ತದೆ. ಆ ರಂಭಿಕ ತಮಿಳು ಸಾಹಿತ್ಯದಲ್ಲಿ ಏಪ್ರಿಲ್ ಹೊಸ ವರ್ಷಕ್ಕೆ ಹಲವಾರು ಉಲ್ಲೇಖಗಳಿವೆ. ನೇತು ನಲ್ವಾಟೈನ ಸಂಗಮ್ ಕಾಲದ ಲೇಖಕರಾದ ನಕ್ಕೀರರ್, ಸೂರ್ಯನು ಮೇಷ/ಚಿತ್ತಿರೈನಿಂದ 11 ಸತತ ರಾಶಿಚಕ್ರ ಚಿಹ್ನೆಗಳ ಮೂಲಕ ಪ್ರಯಾಣಿಸುತ್ತಾನೆ ಎಂದು ಬರೆದಿದ್ದಾರೆ. ಕೂಡಲೂರ್ ಕಿಥಾರ್‌ನಲ್ಲಿ ಮೇಷ ರಾಶಿ/ಚಿತ್ತಿರೈ ಅನ್ನು ಪುನಾ ನಂಶುವಿನಲ್ಲಿ ವರ್ಷದ ಆರಂಭ ಎಂದು ಉಲ್ಲೇಖಿಸುತ್ತದೆ. ದೇವಾಲಯದ ನಗರವಾದ ಮಧುರೈನಲ್ಲಿ ಚಿತ್ತಿರೈ ತಿರುವಿಳವನ್ನು ಮೀನಾಕ್ಷಿ ದೇವಾಲಯದಲ್ಲಿ ಆಚರಿಸಲಾಗುತ್ತದೆ.

# ಸಂಪಾದಕೀಯ

ಕರಾವಳಿ ತರಂಗಿಣಿ

## ಹುಲ್ಲು ಕಡ್ಡಿಗೂ ತನ್ನದೇ ಬೆಲೆಯಿದೆ...

– ಲಲಿತಶ್ರೀ ಪ್ರೀತಮ್ ರೈ



ದೇವರು ಈ ಜಗತ್ತನ್ನು ಸೃಷ್ಟಿ ಮಾಡಿದಾಗ ಇಲ್ಲಿರುವ ಪ್ರತಿ ವಸ್ತುವಿಗೂ ಅದರದೇ ಆದ ಬೆಲೆಯನ್ನು ನಿಗದಿ ಪಡಿಸಿರುತ್ತಾನೆ. ಅದು ಚಿಕ್ಕದೋ ದೊಡ್ಡದೋ ಎನ್ನುವುದು ನಿರ್ಧರಿಸುವವನು ಅವನೇ. ಆದರೂ ಮನುಷ್ಯನ ಅಹಂ ಎಲ್ಲೆ ಮೀರಿ ಹೋಗುತ್ತಾ ಇದ್ದ ಹಾಗೆ ದೇವರು ಅದಕ್ಕೆ ಏನಾದರೂ ಒಂದು ದಾರಿ ಸಿದ್ದ ಮಾಡಿ ಇಟ್ಟಿರುತ್ತಾನೆ. ಅದಕ್ಕೆ ಉದಾಹರಣೆಗಳು ನಮ್ಮ ಮುಂದೆಯೇ ಸಿಗುತ್ತಿವೆ. ಮನುಷ್ಯ ಎಷ್ಟೇ ಕೂಡಿಟ್ಟರೂ ಅದು ಯಾರಿಗೆ ಸೇರಬೇಕೆನ್ನುವುದು ಅವನು ಬರೆದಿಟ್ಟಿರುತ್ತಾನೆ. ಅದು ಯಾರಿಗೂ ಸೇರದೇ ಇದ್ದಾಗ ಅದನ್ನು ಮಣ್ಣು ಮಾಡಬಯಸುತ್ತಾನೆ. ಅದಕ್ಕೆ ಉದಾಹರಣೆಗಳು ಇತ್ತೀಚಿಗೆ ನಡೆದ ಭೂ ಕುಸಿತಗಳು, ಪ್ರವಾಹಗಳು. ಹಾಗಂತ ನಾವು ಸುರಕ್ಷಿತರು ಎಂದು ಉಬ್ಬಬೇಕಾಗಿಲ್ಲ. ಭೂಕಂಪದಂತಹ ಘಟನೆಗಳು ಅದೆಷ್ಟೋ ನಡೆದು ಹೋಗಿದೆ. ಹೇಗೇಗೋ ಮೆರೆದ ರಾಜ ಮಹಾರಾಜರುಗಳನ್ನೇ ಮಣ್ಣಲ್ಲಿ ಮಣ್ಣಾಗಿಸಿದ ಇತಿಹಾಸವಿದೆ. ಇಂದು ನನ್ನನ್ನು ಕಾಡುತ್ತಿರುವ ವಿಷಯ ಎಂದರೆ ಒಂದು ನೂರು ಗ್ರಾಂ ತೂಕ ಕೋಟ್ಯಾಂತರ ಭಾರತೀಯರ ಕನಸಿಗೆ ತಣ್ಣೀರು ಎರಚಿಬಿಟ್ಟಿತಲ್ಲಾ. ಈ ಘಟನೆ ಯಾರ ತಪ್ಪಿನಿಂದ ಜರುಗಿತು ಎನ್ನುವುದು ಆಮೇಲೆ. ಆದರೆ ನಮ್ಮ ನೆಲದ ಕುವರಿ ವಿನೇಶ್ ಪೋಗಟ್ ಅನರ್ಹ ಎಂಬ ಸುದ್ದಿ ಕೇಳುತ್ತಿದ್ದಂತೆ ಹೊಟ್ಟೆಗೆ ಚಾಕುವಿನಿಂದ ಚುಚ್ಚಿದ ಹಾಗಾಗಿಲ್ಲವೇ ಅದೆಷ್ಟೋ ಭಾರತೀಯರಿಗೆ. ಭಾರತದ ಪಾಲಿಗೆ ನಿನ್ನೆಯ ದಿನ ಕಪ್ಪು ದಿನ ಎಂದರೆ ತಪ್ಪಾಗಲಾರದು. ಒಂದು ಕಡೆ ಭಾರತದ ಪಾಲಿಗೆ ಕಹಿಯಾದರೆ ಪೋಗಟ್‌ನಿಂದ ಸೋತ ಆ ಕುಸ್ತಿ ಪಟುವಿಗೆ ಸಿಹಿಯಾಗಿತ್ತು. ಒಬ್ಬರ ಸೋಲು ಇನ್ನೊಬ್ಬರ ಗೆಲುವಿನ ಸೋಪಾನ ಆಗಬಲ್ಲದು. ರಾತ್ರಿ ಇಡೀ ವರ್ಕೌಂಟ್ ಮಾಡಿದ ಪೋಗಟ್‌ಗೆ ತನ್ನ ತೂಕವನ್ನು ಇಳಿಸಿಕೊಳ್ಳುವುದು ಸಾಧ್ಯವಾಗದೇ ಹೋದಾಗ ಕೂದಲಿಗೆ ಕತ್ತರಿ ಹಾಕಿದ್ದಾಳೆ. ಅಷ್ಟೇ ಅಲ್ಲದೆ ಶರೀರದ ರಕ್ತವನ್ನು ಬಸಿದಿದ್ದಾಳೆ ಎಂದರೆ ಆಕೆ ಅದು ಯಾವ ಪರಿಸ್ಥಿತಿಯಲ್ಲಿ ಇದ್ದಿರಬಹುದು ಎನ್ನುವುದನ್ನು ಅರ್ಥ ಮಾಡಿಕೊಳ್ಳಬಹುದು. ಆ ನೂರು ಗ್ರಾಂ ಕಡಿಮೆಯಾಗದಿರಲು ಪ್ರಮುಖ ಕಾರಣ ಅವಳು ಒಬ್ಬ ಹೆಣ್ಣಾಗಿರುವುದು ಆಗಿರಬಹುದೇನೋ ಎನ್ನುವುದು ಹೆಣ್ಣು ಮಗಳಾಗಿ ನನ್ನ ಅಭಿಪ್ರಾಯ. ಹೌದು ಹೆಣ್ಣು ಮಕ್ಕಳ ಮಾಸಿಕ ಋತುಸ್ರಾವ ಪ್ರಾರಂಭಕ್ಕೆ ಹಿಂದಿನ ಐದಾರು ದಿನ ಅಥವಾ ಕೆಲವರಲ್ಲಿ ಹತ್ತು ದಿನ ದೇಹದಲ್ಲಿ ತೂಕ ಹೆಚ್ಚಾಗುವುದು ಸಾಮಾನ್ಯವಾಗಿ ಕಂಡುಬರುತ್ತದೆ. ಅಂತಹ ದಿನಗಳಲ್ಲಿ ತೂಕ ಕಡಿಮೆ ಮಾಡಿಕೊಳ್ಳುವುದು ಅಷ್ಟು ಸುಲಭ ಸಾಧ್ಯವಲ್ಲ. ಅದು ಕೂಡ ಪೋಗಟ್ ತೂಕ ಇಳಿಯದೇ ಇರಲು ಪ್ರಮುಖ ಕಾರಣ ಆಗಿರಬಹುದೇನೋ? ಅದನ್ನು ವೈದ್ಯರು ದೃಢಪಡಿಸಬೇಕಷ್ಟೇ. ಇನ್ನು ಪೋಗಟ್ ಮೂರನೇ ಬಾರಿ ಒಲಿಂಪಿಕ್ಸ್‌ನಲ್ಲಿ ಭಾಗವಹಿಸುತ್ತಿರುವುದರಿಂದ ಅಲ್ಲಿನ ನಿಯಮಾವಳಿಗಳನ್ನು ಚೆನ್ನಾಗಿಯೇ ಅರಿತಿರುತ್ತಾಳೆ. ಹಾಗಿರುವಾಗ ಯಾರು ಏನೇ ಮಾಡಿದರೂ ತನ್ನ ದೇಹ ಸ್ಥಿತಿಯ ಬಗ್ಗೆ ಅವಳಿಗೆ ಅರಿವಿರದೇ ಇರಲು ಸಾಧ್ಯವಿಲ್ಲ. ಅದಕ್ಕೆ ಸರಿಯಾದ ಸಿದ್ಧತೆ ಮಾಡದೇ ಇರಲಾರಳು ಎನ್ನುವುದು ನನ್ನ ಅಭಿಪ್ರಾಯ. ಇನ್ನು ಇಲ್ಲಿ ಏನಾದರೂ ರಾಜಕೀಯ ನಡೆದಿದ್ದ್ರೆ ಆದರೆ ಅದು ಕ್ಷಮೆಗೆ ಅರ್ಹವಲ್ಲ. ದೇಶದ ಎದುರು ಯಾವ ರಾಜಕೀಯಕ್ಕೂ ಬೆಲೆ ಇರಲಾರದು. ಇಲ್ಲಿ ರಾಜಕೀಯ ಮಾಡುವ ಬದಲು ದೇಶದ ಹೆಣ್ಣು ಮಗಳ ಈ ಸ್ಥಿತಿಯಲ್ಲಿ ಅವಳ ಜೊತೆಗೆ ನಿಲ್ಲಬೇಕು ಅಷ್ಟೇ. ವಿನೇಶ್ ಪೋಗಟ್ ಕುಸ್ತಿ ಫೆಡರೇಷನ್ ಅಧ್ಯಕ್ಷನ ಮೇಲೆ ಕಿರುಕುಳದ ಆರೋಪ ಮಾಡಿ ಬೀದಿಗೆ ಬಂದಿದ್ದಳು. ಇಲ್ಲಿ ಕಾನೂನು ನ್ಯಾಯ ಕೊಡಬೇಕಾಗುತ್ತದೆ. ಆದರೆ ಹೆಣ್ಣೊಬ್ಬಳ ಮೇಲೆ ಲೈಂಗಿಕ ದೌರ್ಜನ್ಯ ಆದಾಗ ಅದನ್ನು ಪ್ರತಿಭಟಿಸುವ ಸ್ವಾತಂತ್ರ್ಯ ಅವಳಿಗೆ ಇದೆ ನಿಜ. ಆದರೆ ಅವಳ ಪ್ರತಿಭಟನೆಗೆ ಖಂಡಿತಾ ನೂರಕ್ಕೆ ನೂರರಷ್ಟು ನ್ಯಾಯ ಸಿಗಬಹುದು ಎನ್ನುವುದನ್ನು ನಾನು ಒಪ್ಪುವುದಿಲ್ಲ. ಹಿಂದಿನಿಂದ ಇಂದಿನವರೆಗೂ ಹೆಣ್ಣು ಮಕ್ಕಳು ತನ್ನ ಮೇಲೆ ಆಗುತ್ತಿರುವ ದೌರ್ಜನ್ಯವನ್ನು ಎಲ್ಲೂ ಬಾಯಿ ಬಿಡುತ್ತಿಲ್ಲ ಯಾಕೆ ಎಂದರೆ ಅವಳಿಗೆ ತಿಳಿದಿದೆ "ತನಗೆ ನ್ಯಾಯ ದೊರಕಲಾರದು" ಎನ್ನುವ ಸತ್ಯ. ಅಲ್ಲೊಂದು ಇಲ್ಲೊಂದು ಪ್ರಕರಣದಲ್ಲಿ ನ್ಯಾಯ ದೊರಕಿದರೂ ಅವಳು ಅದರಿಂದ ಅದೆಷ್ಟೋ ಅವಮಾನ, ನೋವುಗಳನ್ನು ಅನುಭವಿಸಬೇಕಾಗಿರುತ್ತದೆ. ಅದು ಆ ಹೆಣ್ಣು ಮಗಳಿಗೆ ಮಾತ್ರ ತಿಳಿದಿರುತ್ತದೆ. ಇಂತಹ ಸನ್ನಿವೇಶವನ್ನೂ ದಾಟಿ ಒಲಿಂಪಿಕ್ಸ್‌ನತ್ತ ಹೆಜ್ಜೆ ಹಾಕಿದ್ದ ಈ ಹೆಣ್ಣು ಮಗಳಿಗೆ ಅನರ್ಹತೆಯ ಚಾಟಿ ಅದೆಷ್ಟು ನೋವು ಕೊಟ್ಟಿರಬಹುದು ಎನ್ನುವುದಕ್ಕೆ ಆಕೆ ಕುಸ್ತಿಗೆ ಹೇಳಿರುವ ವಿದಾಯ ಉದಾಹರಣೆ. ಅವಳು ತೂಕ ಇಳಿಸಿಕೊಳ್ಳಲು ದೇಹದ ರಕ್ತವನ್ನೇ ಬಸಿಯಲು ಸಿದ್ದಳಾಗಿ ಕುಸ್ತಿಗಾಗಿ ಪ್ರಾಣ ತ್ಯಾಗಕ್ಕೂ ಸಿದ್ದ ಎನ್ನುವುದನ್ನು ತೋರಿಸಿಕೊಟ್ಟಿದ್ದಾಳೆ. ಅಂತಹ ಕುಸ್ತಿಗೆ ವಿದಾಯ ಹೇಳಿದ ಈ ಹೆಣ್ಣು ಮಗಳ ಮುಂದಿನ ಜೀವನಕ್ಕೆ ಶುಭ ಹಾರೈಸುವುದಷ್ಟೇ ನಮಗೆ ಉಳಿದಿರುವುದು.

# ವೈದ್ಯೋನಾರಾಯಣೋ ಹರಿಃ

## ಕುಪ್ಪಿ ಗಿಡ




ಭಾರತದ ಬಯಲುಸೀಮೆಯಲ್ಲಿ ಬಹು ಸಾಮಾನ್ಯವಾಗಿ ಬೆಳೆಯುವ ಈ ಗಿಡ ಹಲವಾರು ಔಷದೀಯ ಗುಣಗಳನ್ನು ಹೊದಿದ್ದು, ಇದರ ಎಲೆ, ಎಳೆಯ ಕುಡಿಗಳು, ಬೇರು ಮತ್ತು ಹೂವುಗಳ ಕಷಾಯವನ್ನು ಜಂತು ಹುಳುನಾ ಶಕವಾಗಿ, ಅಸ್ತಮ ಕೆಮ್ಮು ಮುಂತಾದ ಶ್ವಾಸ ಕೋಶ ಸಂಬಂಧಿ ರೋಗಗಳ ನಿವಾರಕವಾಗಿ, ವಿರೇಚಕವಾಗಿ, ಮನಶ್ಯಾಂತಿಕಾರಕವಾಗಿ, ವಾಂತಿಕಾರಕವಾಗಿ, ಸುಪ್ತ್ಯಾವಾಹಕವಾಗಿ ಆಯುರ್ವೇದ ವೈದ್ಯ ಪದ್ಧತಿಯಲ್ಲಿ ವ್ಯಾಪಕವಾಗಿ ಬಳಕೆಯಲ್ಲಿದೆ. ಶುದ್ಧವಾದ ಎಳ್ಳೆಣ್ಣೆಯಲ್ಲಿ ಒಂದು ಹಿಡಿ ಕುಪ್ಪಿ ಎಲೆಗಳನ್ನು ಹಾಕಿ ಕಾಯಿಸಿ ತಣ್ಣಗಾದ ಮೇಲೆ ತೈಲವನ್ನು ಹಚ್ಚಿ ಸ್ನಾನ ಮಾಡುವುದರಿಂದ ಚರ್ಮಕ್ಕೆ ಕಾಂತಿ ಬರುತ್ತದೆ.

ಹಸಿ ಕುಪ್ಪಿ ಎಲೆಗಳನ್ನು ಜಜ್ಜಿ, ಎಳ್ಳೆಣ್ಣೆಯಲ್ಲಿ ಬೆರೆಸಿ, ತೈಲ ಉಳಿಯುವಂತೆ ಕಾಯಿಸಿ, ಶೋಧಿಸಿಟ್ಟುಕೊಂಡು ನೋವಿರುವ ಕಡೆಗೆ ಹಚ್ಚುವುದರಿಂದ ವಾತದ ನೋವು ಸೆಳೆತಕ್ಕೆ ಉತ್ತಮ ಔಷಧಿಯಾಗಬಲ್ಲದು.

ಹಸೀ ಎಲೆಗಳ ರಸವನ್ನು ಸೇವಿಸುವುದರಿಂದ ದೊಡ್ಡವರಲ್ಲಿ ಕೆಮ್ಮು, ಕಫ, ದಮ್ಮು ಗುಣವಾಗುವುದು

ಬೆಳ್ಳುಳ್ಳಿ ಮೆಣಸು ಇವುಗಳ ಸಮತೂಕದ ಎರಡು ಭಾಗ ಕುಪ್ಪಿ ಸೊಪ್ಪನ್ನು ಸೇರಿಸಿ, ನುಣ್ಣಗೆ ಅರೆದು, ಸ್ವಲ್ಪ ಭಾಗವನ್ನು ಹಾಲಿನಲ್ಲಿ ಕದಡಿ ಕುಡಿಸುವುದು ಮಕ್ಕಳ ಹೊಟ್ಟೆನೋವಿಗೆ ಉತ್ತಮ ಔಷಧಿ.

ಹಸಿ ಎಲೆಗಳನ್ನು ಸ್ವಲ್ಪ ಅಡಿಗೆ ಉಪ್ಪು ಸೇರಿಸಿ ನುಣ್ಣಗೆ ಅರೆದು ಪಟ್ಟು ಹಾಕುವುದರಿಂದ ತುರಿಕೆ, ಕಜ್ಜಿ ಗುಣವಾಗುತ್ತದೆ. ಕುಪ್ಪಿ ಎಲೆಗಳ ರಸವನ್ನು ತೆಗೆದುಕೊಂಡು ಮೂಗಿನ ಎರಡೂ ಹೊಳ್ಳೆಗಳಿಗೆ ತೊಟ್ಟು ತೊಟ್ಟಾಗಿ ಬಿಡುವುದರಿಂದ ಮೂರ್ಛೆ ಬೀಳುವ ಸಮಸ್ಯೆ ದೂರ ಆಗುತ್ತದೆ.

# ಕ್ಷೇತ್ರದರ್ಶನ




ಚಿತ್ರಗುಪ್ತ ದೇವಾಲಯ

ತಮಿಳುನಾಡಿನ ಕಾಂಚಿಪುರಂನ ನೆಲ್ಲುಕರ ಬೀದಿಯಲ್ಲಿರುವ ಸಾವಿನ ದೇವರು ಯಮನ ಸಹಾಯಕ ಚಿತ್ರಗುಪ್ತನ ದೇವಾಲಯವು ಅಪರೂಪದ ದೇವಾಲಯಗಳಲ್ಲಿ ಒಂದಾಗಿದೆ. ಚಿತ್ರಗುಪ್ತನು ಬ್ರಹ್ಮನಿಂದ ಮನುಷ್ಯರ ಒಳ್ಳೆಯ ಮತ್ತು ಕೆಟ್ಟ ಕಾರ್ಯಗಳ ಲೆಕ್ಕಪರಿಶೋಧಕನಾಗಿ ಹೊಂದಿಸಲ್ಪಟ್ಟನು ಎಂದು ನಂಬಲಾಗಿದೆ. ಈ ದೇವಾಲಯವು ಮೂರು ಹಂತದ ರಾಜಗೋಪುರವನ್ನು ಹೊಂದಿದ್ದು, ಗರ್ಭಗುಡಿಯ ಸುತ್ತಲೂ ಒಂದೇ ಆವರಣವನ್ನು ಹೊಂದಿದೆ. ಈ ದೇವಾಲಯವು ನಗರದ ಪ್ರಮುಖ ಪ್ರವಾಸಿ ಆಕರ್ಷಣೆಗಳಲ್ಲಿ ಒಂದಾಗಿದೆ. ದಂತಕಥೆಯ ಪ್ರಕಾರ, ಹಿಂದೂ ವಿನಾಶದ ದೇವರು ಶಿವನು ತನ್ನ ಹೆಂಡತಿ ಪಾರ್ವತಿಯೊಂದಿಗೆ ಭೂಮಿಯಲ್ಲಿರುವ ಎಲ್ಲಾ ಮಾನವರ ನಡುವೆ ಧರ್ಮವನ್ನು ಕಾಪಾಡಿಕೊಳ್ಳುವ ಬಗ್ಗೆ ಮತ್ತು ಅವರ ಕಾರ್ಯಗಳ ಉತ್ತಮ ಖಾತೆಯನ್ನು ನಿರ್ವಹಿಸುವ ಬಗ್ಗೆ ಚರ್ಚಿಸುತ್ತಿದ್ದನು. ಜನರು ಅಪರಾಧದಲ್ಲಿ ತೊಡಗುವುದನ್ನು ತಡೆಯಲು ಮತ್ತು ಒಳ್ಳೆಯ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದನ್ನು ನೋಡಲು ಅವರ ಮೇಲೆ ನಿಕಟ ನಿಗಾ ಇಡಲು ಯಾರಾದರೂ ಇರಬೇಕೆಂದು ಅವರು ಬಯಸುತ್ತಾರೆ. ಆಗ ಶಿವನು ಚಿನ್ನದ ತಟ್ಟೆಯಲ್ಲಿ ಚಿತ್ರ ಬಿಡಿಸುತ್ತಾನೆ. ಅದರಿಂದ ಪ್ರಭಾವಿತಳಾದ ಪಾರ್ವತಿಯು ನೋಡುತ್ತಿದ್ದಂತೆ ಚಿತ್ರವು ಶಿವ ಮತ್ತು ಪಾರ್ವತಿಯ ದೈವಿಕ ಕೃಪೆಯಿಂದ ದೇವತೆಯಾಗಿ ಬದಲಾಯಿತು. ಅವನಿಗೆ ಭೂಮಿಯ ಮೇಲಿನ ಎಲ್ಲಾ ಮಾನವರ ಕಾರ್ಯಗಳ ಖಾತೆಯನ್ನು ನಿರ್ವಹಿಸುವ ಕರ್ತವ್ಯವನ್ನು ಶಿವನು ಒಪ್ಪಿಸಿದನು. ಚಿತ್ರ ಮತ್ತು ಗೌಪ್ಯತೆಯಿಂದ ಉತ್ಪನ್ನವಾಗಿರುವುದರಿಂದ ಅವರು ಅದಕ್ಕೆ ಚಿತ್ರಗುಪ್ತ ಎಂದು ಕರೆಯಲ್ಪಟ್ಟರು. ಗರ್ಭಗುಡಿಯಲ್ಲಿ ಕುಳಿತಿರುವ ಭಂಗಿಯಲ್ಲಿರುವ ಚಿತ್ರಗುಪ್ತನ ವಿಗ್ರಹವಿದೆ. ಅವನ ಬಲಗೈಯಲ್ಲಿ ಲೇಖನಿ ಮತ್ತು ಎಡಗೈಯಲ್ಲಿ ಪುಸ್ತಕವನ್ನು ಹೊಂದಿದ್ದಾನೆ. ಪ್ರತಿ ಅಮಾವಾಸ್ಯೆಯಂದು ದೇವಾಲಯದಲ್ಲಿ ವಿಶೇಷ ಪೂಜಾ ವಿಧಾನಗಳನ್ನು ಅನುಸರಿಸಲಾಗುತ್ತದೆ. ಏಪ್ರಿಲ್‌ನಲ್ಲಿ ಚಿತ್ರ ಪೌರ್ಣಮಿಯಂದು ದೇವಾಲಯದಲ್ಲಿ ಆಚರಿಸಲಾಗುವ ಪ್ರಮುಖ ಹಬ್ಬ. ಹಿಂದೂ ಜ್ಯೋತಿಷ್ಯದ ಒಂಬತ್ತನೇ ಗ್ರಹವಾದ ಕೇತುವಿಗೆ ಚಿತ್ರಗುಪ್ತನನ್ನು ಅಧಿದೇವತೆ ಎಂದು ಪರಿಗಣಿಸಲಾಗಿದೆ. ಅವರು ಕಾಯಸ್ಥ ಸಮುದಾಯದ ಪೋಷಕ ಮತ್ತು ಪ್ರಮುಖ ದೇವತೆಯಾಗಿದ್ದಾರೆ. ಅವರು ಶ್ರೀ ಚಿತ್ರಗುಪ್ತನ ವಂಶಸ್ಥರು ಎಂದು ಕರೆಯುತ್ತಾರೆ, ಆದರೆ ಶೈವರು ಮತ್ತು ವೈಷ್ಣವರಿಂದ ಪೂಜಿಸುತ್ತಾರೆ.. ಮಹಿಳಾ ಭಕ್ತರು ಚಿತ್ರಗುಪ್ತನ ಆಶೀರ್ವಾದವನ್ನು ಪಡೆಯಲು ಉಪವಾಸವನ್ನು ಆಚರಿಸುತ್ತಾರೆ ಅಥವಾ ಹಗಲಿನಲ್ಲಿ ಉಪ್ಪುರಹಿತ ಆಹಾರವನ್ನು ಸೇವಿಸುತ್ತಾರೆ. ಹಳೆಯ ಕಾಲದಲ್ಲಿ, ಸಾಂಪ್ರದಾಯಿಕ ಗ್ರಾಮ ಲೆಕ್ಕಿಗರು ತಮ್ಮ ವೃತ್ತಿಗಾಗಿ ದೈವಿಕ ಆಶೀರ್ವಾದವನ್ನು ಕೋರಿ ದೇವರನ್ನು ಪೂಜಿಸುತ್ತಿದ್ದರು. ಇಂತಹ ಅಪರೂಪದ ಮತ್ತು ಪವಿತ್ರ ಸನ್ನಿದಿಗೆ ಒಮ್ಮೆ ಬೇಟಿ ನೀಡಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ




ನಾರದ ಪುರಾಣದ "ಗಂಗೇಚ ಯಮುನೇ ಚೈವ ಗೋದಾವರಿ ಸರಸ್ವತಿ।ನರ್ಮದ ಸಿಂದು ಕಾವೇರಿ ಜಲೇಸ್ಮಿನ್‌ಸನ್ನಿಧಿಂ ಕುರು॥" ಎನ್ನುವ ಶ್ಲೋಕದಲ್ಲಿ ನದಿಗಳ ಶ್ರೇಷ್ಟತೆಯನ್ನು ಸಾರಿದ್ದಾರೆ. ಭಾರತದಲ್ಲಿ ಎಲ್ಲಾ ನದಿಗಳು ಕುಲಪರ್ವತದಲ್ಲಿ ಹುಟ್ಟಿವೆ. ನಮ್ಮ ಭಾರತದ ಶ್ರೇಷ್ಟ ನದಿಗಳಲ್ಲಿ ಯಮುನೆಯೂ ಒಂದು. ಯಮುನೆಯನ್ನು ಜಮುನೆ ಎಂದೂ ಕರೆಯುವುದುಂಟು. ಗಂಗೆಯಂತೆ ಇವಳೂ ಹಿಮಾಲಯದ ತಪ್ಪಲಿನಲ್ಲಿ, ಸಮುದ್ರ ಮಟ್ಟದಿಂದ ಸುಮಾರು 6387 ಮೀ. ಎತ್ತರದಲ್ಲಿ ಜನಿಸಿ, ಉತ್ತರ ಭಾರತದ ಬಹುದೊಡ್ಡ ಬಾಗಕ್ಕೆ ಹಸಿರುಣಿದ್ದಾಳೆ. ಹಿಮಾಲಯದ ಕಳಿಂದ ಪರ್ವತ ಇವಳ ಉಗಮ ಸ್ಥಾನ. ಹಾಗಾಗಿಯೇ ಅವಳನ್ನು ಕಾಳಿಂದಿ ಎಂಬ ಹೆಸರಿನಿಂದಲೂ ಕರೆಯುತ್ತಾರೆ. ಕಳಿಂದ ಪರ್ವತದಿಂದ ಮುಂದೆ ಸುಮಾರು 150 ಕಿ.ಮೀ ದುರ್ಗಮ ದಾರಿಯನ್ನು ಹಾದು ಬರುತ್ತಾಳೆ. ಹಾಗೆ ಬರುವಾಗ ಸುಮಾರು ಎಂಟಕ್ಕೂ ಹೆಚ್ಚು ನದಿಗಳು ಇವಳ ಒಡಲನ್ನು ಸೇರುತ್ತದೆ. ಉತ್ತರಕಾಂಡ, ಹಿಮಾಚಲ ಪ್ರದೇಶ, ಉತ್ತರಪ್ರದೇಶ, ಹರಿಯಾಣ, ದೆಹಲಿಯಲ್ಲಿ ಸಂಚರಿಸುತ್ತಾಳೆ. ಇವಳ ತೀರದಲ್ಲಿ ದೆಹಲಿ, ಬಾಗವತ್, ಬೃಂದಾವನ್, ಮಥುರಾ, ಆಗ್ರಾ ಮೊದಲಾದ ನಗರಗಳಿವೆ. ಪ್ರಯಾಗದಲ್ಲಿ ಗಂಗೆ ಹಾಗೂ ಗುಪ್ತಗಾಮಿನಿ ಸರಸ್ವತಿಯೊಡನೆ ಸೇರಿಕೊಳ್ಳುತ್ತಾಳೆ. ಇಲ್ಲಿ ಸ್ನಾನ ಮಾಡಿದರೆ ಪೂರ್ವ ಜನ್ಮದ ಪಾಪ ಕಳೆಯುತ್ತದೆ ಎನ್ನುವ ನಂಬಿಕೆಯಿದೆ. ಮುಂದೆ ಸುಮಾರು 1350 ಕಿ.ಮೀಗಿಂತಲೂ ಹೆಚ್ಚು ದೂರ ಕ್ರಮಿಸಿ ಬಂಗಾಳಕೊಲ್ಲಿಯನ್ನು ಸೇರಿಕೊಳ್ಳುತ್ತಾಳೆ. ಯಮುನೆಯ ಬಗ್ಗೆ ನಮ್ಮ ಪುರಾಣ ಗ್ರಂಥಗಳಲ್ಲಿ ಉಲ್ಲೇಕವಿದೆ. ಯಮುನೆಯ ತಟದಲ್ಲಿ ಮಥುರಾ ನಗರವಿದ್ದ ಬಗ್ಗೆ ರಾಮಾಯಣದಲ್ಲಿ ಉಲ್ಲೆಖಿತವಾದರೆ, ಪಾಂಡವರು ಖಾಂಡವ ದಹನ ಮಾಡಿ ಇಂದ್ರಪ್ರಸ್ಥವನ್ನು ಯಮೂನಾ ತೀರದಲ್ಲಿ ನಿರ್ಮಿಸಿರುವ ಬಗ್ಗೆ ಮಹಾಭಾರತದಲ್ಲಿ ಉಲ್ಲೇಖವಿದೆ. ಭಾರತದ ಇಂದಿನ ರಾಜಧಾನಿ ದೆಹಲಿಯೂ ಯಮುನೆಯ ತಟದಲ್ಲೆ ಇದೆ. ಯಮುನೆಯ ತೀರದಲ್ಲಿ ಗಾಂಧಿ, ನೆಹರೂ, ಲಾಲ್ ಬಹದ್ದೂರ ಶಾಸ್ತ್ರಿಯವರ ಸಮಾದಿಯಿದೆ. ಯಮು ನೆಯನ್ನು ಕೃಷ್ಣವರ್ಣೆ ಅಂತ ಪುರಾಣಗಳಲ್ಲಿ ಕರೆದಿದ್ದಾರೆ. ಯಮುನೆಯು ಸಾಕಷ್ಟು ವಿಸ್ತಾರ ಭೂಪ್ರದೇಶಕ್ಕೆ ನೀರುಣಿಸಿದ್ದಾಳೆ, ಪುರಾಣಗಳನ್ನು ಕೆದಕಿದಾಗ ಯಮುನೆಯು ಸೂರ್ಯನ ಮಗಳು, ಯಮನ ಸಹೋದರಿ ಎನ್ನುವ ಬಗ್ಗೆ ಉಲ್ಲೇಖವಿದೆ. ಕಾರ್ತಿಕ ಶುಕ್ಲ ಬಿದಿಗೆಯಂದು ಸಹೋದರ ಸಹೋದರಿ ಹಬ್ಬವನ್ನಾಗಿ ಆಚರಿಸುವುದರ ಹಿಂದೆ ಯಮುನೆಯ ಐತಿಹ್ಯವಿದೆ. ಕಾರ್ತಿಕ ಶುಕ್ಲ ಬಿದಿಗೆಯಂದು ಯಮರಾಜನು ತನ್ನ ತಂಗಿ ಯಮುನೆಯ ಮನೆಗೆ ಬರುತ್ತಾನೆ, ಅಣ್ಣನನ್ನು ಸತ್ಕರಿಸಿದಾಗ ಯಮನು ಸಂತುಷ್ಟನಾಗಿ ತಂಗಿಗೆ ಉಡುಗೊರೆಯನಿತ್ತ. ಈ ಯಮ ದ್ವಿತೀಯದಂದು ಮಥುರೆಯಲ್ಲಿ ಯಮುನಾ ಸ್ನಾನ ಪವಿತ್ರ. ಗಂಗಾಸ್ನಾನಕ್ಕೆ ವೈಶಾಖ ಮಾಸ ಹೇಗೆ ಪವಿತ್ರವೋ ಹಾಗೆ ಯಮುನಾ ಸ್ನಾನಕ್ಕೆ ಕಾರ್ತಿಕ ಮಾಸ ಪವಿತ್ರ. ಯಮುನಾ ನದಿಯ ನೀರು ಸೇವಿಸಿದರೆ ಸೋಮಯಾಗದ ಫಲವಿದೆ ಎಂದು ಪುರಾಣಗಳಲ್ಲಿ ಉಲ್ಲೇಖವಿದೆ. ವೃಂದಾವನದ ಖೇಸಿ ಘಾಟ್‌ನಲ್ಲಿ ನದಿ ತೀರವು ಪವಿತ್ರವೆಂಬ ಭಾವನೆಯಿದೆ ಕಾರಣ ದ್ವಾಪರಯುಗದಲ್ಲಿ ಶ್ರೀ ಕೃಷ್ಣನು ಖೇಸಿ ಎಂಬ ರಾಕ್ಷಸಿಯನ್ನು ಕೊಂದು ಇಲ್ಲಿ ಸ್ನಾನ ಮಾಡಿದನಂತೆ ಹಾಗಾಗಿ ಇಲ್ಲಿ ಸ್ನಾನ ಮಾಡಿದರೆ ಮುಕ್ತಿ ದೊರಕುತ್ತದೆ ಎಂಬ ನಂಬಿಕೆಯೂ ಇದೆ. ಇಲ್ಲಿ ಹಲವಾರು ಘಾಟ್‌ಗಳಿವೆ ಹಾಗೆ ಬೆಳಿಗ್ಗೆ ಸಂಜೆ ಆರತಿ ಸೇವೆಯು ಇದೆ. ಯಮುನಾ ತೀರದ ಪ್ರಾಕೃತಿಕ ಸೊಬಗು ಅದ್ಬುತ. ಗಂಗೆಗೆ ಹೋಲಿಸಿದರೆ ಯಮುನೆ ಹಿರಿಯವಳಾಗಿ, ಗಾಂಭೀರ್ಯದಿಂದ ಕಾಣಿಸುತ್ತಾಳೆ. ಭಾರತೀಯ ಸಂಸ್ಕೃತಿಯಲ್ಲಿ ಅಚ್ಚಳಿಯದೆ, ಜನಮಾನಸದಲ್ಲಿ ಪೂಜ್ಯನೀಯವಾಗಿ ಮೆರೆಯುತ್ತಿದ್ದಾಳೆ ಈ ಯಮುನೆ.

# ಕಲ್ಪವೃಕ್ಷ

@ಪ್ರೀತಂ ರೈ ಇ

## ಕಮಾಂಡರ್ ಮುಕಡವಿಲ್ ಒಮ್ಮನ್

1971 ರ ಇಂಡೋ–ಪಾಕ್ ಯುದ್ಧವು ಪ್ರಾರಂಭವಾದಾಗ, ಸಿಡಿಆರ್ ಎಂ ಒಮೆನ್ ಭಾರತೀಯ ನೌಕಾಪಡೆಯ ಬ್ಲಾಕ್‌ವುಡ್–ಕ್ಲಾಸ್ ಫ್ರಿಗೇಟ್ INS ಖುಕ್ರಿಯಲ್ಲಿ ಇಂಜಿನಿಯರಿಂಗ್ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಇದು ಪಶ್ಚಿಮ ನೌಕಾಪಡೆಯ 14ನೇ ಫ್ರಿಗೇಟ್ ಸ್ಕ್ವಾಡ್ರನ್‌ನ ಭಾಗವಾಗಿತ್ತು, ಐಎನ್‌ಎಸ್ ಕಿರ್ಪಾನ್, ಐಎನ್‌ಎಸ್ ಕಲ್ವೆಟಿ, ಐಎನ್‌ಎಸ್ ಕೃಷ್ಣ ಮತ್ತು ಐಎನ್‌ಎಸ್ ಕುಥಾರ್ ಇತರ ನಾಲ್ಕು ಹಡಗುಗಳೊಂದಿಗೆ ಐದು ಹಡಗುಗಳನ್ನು ಒಳಗೊಂಡಿತ್ತು. 14ನೇ ಫ್ರಿಗೇಟ್ ಸ್ಕ್ವಾಡ್ರನ್ ಉತ್ತರ ಅರೇಬಿಯನ್ ಸಮುದ್ರದಲ್ಲಿ ಶತ್ರು ಜಲಾಂತರ್ಗಾಮಿ ನೌಕೆಗಳನ್ನು ಬೇಟೆಯಾಡುವ ಜವಾಬ್ದಾರಿಯನ್ನು ಹೊಂದಿತ್ತು. ಭಾರತೀಯ ನೌಕಾಪಡೆಯ ರೇಡಿಯೋ ಪತ್ತೆ ಸಾಧನವು 03ನೇ ಡಿಸೆಂಬರ್ 1971 ರಂದು ಡಿಯು ಬಂದರಿನ ಸಮೀಪದಲ್ಲಿ ಜಲಾಂತರ್ಗಾಮಿ ನೌಕೆಯನ್ನು ಗುರುತಿಸಿತು. ಡಿಯು ಬಳಿ ಭಾರತೀಯ ಜಲಾಂತರ್ಗಾಮಿ ನೌಕೆ ಪತ್ತೆಯಾದ ಶತ್ರು ಜಲಾಂತರ್ಗಾಮಿ ನೌಕೆಯನ್ನು ಬೇಟೆಯಾಡಿ ನಾಶಪಡಿಸಲು ನೌಕಾಪಡೆಯ ಪ್ರಧಾನ ಕಛೇರಿಯು ಪಶ್ಚಿಮ ನೌಕಾಪಡೆಗೆ ಆದೇಶಿಸಿತು. ಈ ಆದೇಶವನ್ನು F-14 ಸ್ಕ್ವಾಡ್ರನ್ನ ಕಮಾಂಡರ್, ಕ್ಯಾಪ್ಟನ್ ಮಹೇಂದ್ರ ನಾಥ್ ಮುಲ್ಲಾ ಅವರಿಗೆ ರವಾನಿಸಲಾಯಿತು. ಪಶ್ಚಿಮ ನೌಕಾ ಕಮಾಂಡ್‌ನ TAS ಪ್ರಕಾರ ಇದು 'ಹಂಟರ್ –ಕಿಲ್ಲರ್ ಫೋರ್ಸ್' ಆಗಿತ್ತು. ಡಿಸೆಂಬರ್ 9ರ ತಡರಾತ್ರಿಯಲ್ಲಿ, INS ಖುಕ್ರಿ ಪಾಕಿಸ್ಥಾನದ ಜಲಾಂತರ್ಗಾಮಿ PNS ಹಂಗೂರ್‌ನಿಂದ ದಾಳಿಗೊಳಗಾಯಿತು. ಅದು ಟಾರ್ಪಿಡೊಗಳನ್ನು ಹಾರಿಸಿ ವಿನಾಶಕಾರಿ ಹಾನಿಯನ್ನುಂಟು ಮಾಡಿತು. ಭಾರತೀಯ ಹಡಗನ್ನು




ಶತ್ರುಗಳ ಟಾರ್ಪಿಡೊಗಳಿಗೆ ಸುಲಭವಾದ ಗುರಿಯನ್ನಾಗಿ ಮಾಡಿದ್ದು ಹಡಗಿನಲ್ಲಿ ಪ್ರಾಯೋಗಿಕ ಸೋನಾರ್ ಉಪಕರಣಗಳ ಉಪಸ್ಥಿತಿಯಾಗಿದ್ದು ಅದನ್ನು ಸಂಶೋಧನೆಗಾಗಿ ವಿಶೇಷವಾಗಿ ನಿಯೋಜಿಸಲಾಗಿತ್ತು. ಅಲ್ಲದೆ, INS ಖುಕ್ರಿಯ ಸೋನಾರ್ ಸೆಟ್ 3,000 ಗಜಗಳವರೆಗೆ ಪತ್ತೆ ವ್ಯಾಪ್ತಿಯನ್ನು ಹೊಂದಿತ್ತು, ಆದರೆ PNS ಹ್ಯಾಂಗೋರ್ ಸುಮಾರು ಆರು ಕಿಲೋಮೀಟರ್ ದೂರದಿಂದ ಗುಂಡು ಹಾರಿಸಬಲ್ಲದು. INS ಖುಕ್ರಿ ಕ್ಯಾಪ್ಟನ್, ಕ್ಯಾಪ್ಟನ್ ಮಹೇಂದ್ರ ನಾಥ್ ಮುಲ್ಲಾ ಕೆಲವೇ ನಿಮಿಷಗಳಲ್ಲಿ ಪರಿಸ್ಥಿತಿಯನ್ನು ತಿಳಿದು ಅದನ್ನು ತ್ಯಜಿಸಲು ಆದೇಶ ನೀಡಿದರು. ಖುಕ್ರಿಯೊಳಗೆ ಎರಡು ಭಾರಿ ಸ್ಫೋಟಗಳು ಸಂಭವಿಸಿ ಹಡಗು ಕತ್ತಲೆಯಾಯಿತು. 'ಹಡಗನ್ನು ತ್ಯಜಿಸಿ' ಎಂಬ ಆದೇಶವನ್ನು ಅನುಸರಿಸಿದಂತೆ ಅದು ಎಲ್ಲಾ ಶಕ್ತಿಯನ್ನು ಕಳೆದುಕೊಂಡಿತು. ಅದರ ಬಲಕ್ಕೆ ಓರೆಯಾಗಲು ಪ್ರಾರಂಭಿಸಿತು. ತನ್ನ ಜನರಿಗೆ ಆಗ ಬಹುದಾದ ಅಪಾಯವನ್ನು ಅರಿತುಕೊಂಡ ಸಿಡಿಆರ್ ಎಂ ಒಮ್ಮನ್ ತನ್ನ ಜನರನ್ನು ಸುರಕ್ಷಿತವಾಗಿಡಲು ಡೆಕ್‌ನ ಕೆಳಗೆ ಹೋದರು. ಈ ಮಧ್ಯೆ, ಹಡಗು ಮತ್ತೊಂದು ಟಾರ್ಪಿಡೊದಿಂದ ದಾಳಿಗೊಳಗಾಗಿದೆ. ಅವರು ತನ್ನ ಜನರ ಸುರಕ್ಷತೆಗೆ ಸಹಾಯ ಮಾಡುವುದನ್ನು ಮುಂದುವರೆಸಿದರು. INS ಖುಕ್ರಿ ಅರಬ್ಬಿ ಸಮುದ್ರದಲ್ಲಿ ಕೆಲವೇ ನಿಮಿಷಗಳಲ್ಲಿ ಮುಳುಗಿತು. ಅವರ ಜೀವನದ ಕೊನೆಯ ನಿಮಿಷಗಳಲ್ಲಿ, ಸಿಡಿಆರ್ ಎಂ ಒಮ್ಮನ್ ಅವರು ಅಸಾಧಾರಣ ಧೈರ್ಯವನ್ನು ತೋರಿ ತಮ್ಮ ಜನರನ್ನು ಉಳಿಸುವ ಸಲುವಾಗಿ ಹಡಗಿನಿಂದ ಹೊರಬರಲಿಲ್ಲ. ಸಿಡಿಆರ್ ಎಂ ಒಮ್ಮನ್ ವರಿಗೆ ಅವರ ಅತ್ಯುತ್ತಮ ಧೈರ್ಯ, ನಾಯಕತ್ವ ಮತ್ತು ಅತ್ಯುನ್ನತ ತ್ಯಾಗಕ್ಕಾಗಿ ಮರಣೋತ್ತರವಾಗಿ ರಾಷ್ಟದ ಮೂರನೇ ಅತ್ಯುನ್ನತ ಶೌರ್ಯ ಪ್ರಶಸ್ತಿ "ವೀರ್ ಚಕ್ರ" ನೀಡಲಾಯಿತು. ಕಮಾಂಡರ್ ಮುಕಡವಿಲ್ ಒಮ್ಮನ್ ಕೇರಳ ರಾಜ್ಯದಲ್ಲಿ 01 ಜುಲೈ 1925 ರಂದು ಜನಿಸಿದರು. ನೌಕಾಪಡೆಗೆ ಸೇರಿದ ಅವರು ರಾಯಲ್ ಇಂಡಿಯನ್ ನೇವಿಗೆ ನಿಯೋಜಿಸಲ್ಪಟ್ಟರು.ೂರಿಯಾಗಿ ತರಬೇತಿ ಪಡೆದರು. ಇವರನ್ನು ಕರಾವಳಿ ತರಂಗಿಣಿ ಹೆಮ್ಮೆಯಿಂದ ನೆನಪಿಸಿಕೊಳ್ಳುತ್ತಿದೆ.

# ಪಾರಿಜಾತ

ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು ಮನಸಿಟ್ಟರೆ ಏನು ಬೇಕಾದರೂ ಸಾದಿಸಬಳ್ಳಲು ಎನ್ನುವುದನ್ನು ಅದೆಷ್ಟೋ ಹೆಣ್ಣು ಮಕ್ಕಳು ಸಾದಿಸಿ ತೋರಿಸಿದ್ದಾರೆ. ಅಂತಹ ಹೆಣ್ಣು ಮಕ್ಕಳಲ್ಲಿ ಕರಾವಳಿ ತರಂಗಿಣಿಯ ಇಂದಿನ ಆಯ್ಕೆ "ಬೃಂದಾ ಕಾರಟ್" 17 ಅಕ್ಟೋಬರ್ 1947ರಲ್ಲಿ ಪಶ್ಚಿಮ ಬಂಗಾಳದಲ್ಲಿ ಜನಿಸಿದ ಇವರು 1967 ರಲ್ಲಿ ಮಿರಾಂಡಾ ಹೌಸ್‌ನಿಂದ ಪದವಿ ಪಡೆದ ನಂತರ ಲಂಡನ್‌ಗೆ ತೆರಳಿದರು. ಅಲ್ಲಿ ಅವರು ಏರ್ ಇಂಡಿಯಾದೊಂದಿಗೆ ಬಾಂಡ್ ಸ್ಟ್ರೀಟ್‌ನಲ್ಲಿ ನಾಲ್ಕು ವರ್ಷಗಳ ಕಾಲ ಕೆಲಸ ಮಾಡಿದರು. ಏರ್ ಇಂಡಿಯಾದಲ್ಲಿ ಕೆಲಸ ಮಾಡುವಾಗ, ಏರ್‌ಲೈನ್ಸ್‌ಗಳಲ್ಲಿ ಸೀರೆಗಿಂತ ಹೆಚ್ಚಾಗಿ ಸ್ಕರ್ಟ್‌ಗಳನ್ನು ಕಡ್ಡಾಯವಾಗಿ ಧರಿಸುವುದರ ವಿರುದ್ಧ ಅವರು ದ್ವನಿ ಎತ್ತಿದರು. ಏರ್ ಇಂಡಿಯಾ ಪ್ರಧಾನ ಕಛೇರಿಯು ಅಂತಿಮವಾಗಿ ಇವರ ಬೇಡಿಕೆಗೆ ಸ್ಪಂದಿಸಿ ಸಮ್ಮತಿ ನೀಡಿತು. ಅಂದಿನಿಂದ ಲಂಡನ್‌ನಲ್ಲಿ ಏರ್ ಲೈನ್‌ನಲ್ಲಿ ಕೆಲಸ ಮಾಡುವ ಮಹಿಳೆಯರು ತಮ್ಮ ಸಮವಸ್ತ್ರವಾಗಿ ಸೀರೆ ಅಥವಾ ಸ್ಕರ್ಟ್ ಧರಿಸಲು ಆಯ್ಕೆ ಸಿಕ್ಕಿತು. ಲಂಡನ್‌ನಲ್ಲಿ ಕೆಲಸ ಮಾಡುವಾಗ, ಅವರು ವಿಯೆಟ್ನಾಂ ಯುದ್ಧ ಮತ್ತು ಮಾರ್ಕ್ಸ್‌ವಾದಿ ಸಿದ್ಧಾಂತದ ಸಮಯದಲ್ಲಿ ಸಾಮ್ರಾಜ್ಯಶಾಹಿ– ವಿರೋಧಿ ಮತ್ತು ಯುದ್ಧ–ವಿರೋಧಿ ಚಳುವಳಿಗಳೊಂದಿಗೆ ಸಂಬಂಧ ಹೊಂದಿದ್ದರು. 1971 ರಲ್ಲಿ ಅವರು ತಮ್ಮ ಕೆಲಸವನ್ನು ತೊರೆದು ಕಲ್ಕತ್ತಾಗೆ ಮರಳಲು ನಿರ್ಧರಿಸಿದರು. ನಂತರ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ಪಕ್ಷದ ಮಾರ್ಗದರ್ಶನದಲ್ಲಿ ಕಲ್ಕತ್ತಾ ವಿಶ್ವ ವಿದ್ಯಾಲಯದಲ್ಲಿ ವಿದ್ಯಾರ್ಥಿಯಾಗಿ ದಾಖಲಾದಾಗಿನಿಂದ ವಿದ್ಯಾರ್ಥಿ ಕಾರ್ಯಕರ್ತೆಯಾಗಿ ತಮ್ಮ ರಾಜಕೀಯ ಕೆಲಸವನ್ನು ಪ್ರಾರಂಭಿಸಿದರು. ಆರಂಭದಲ್ಲಿ ಅವರು ಕಾಲೇಜು ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳೊಂದಿಗೆ




ಕೆಲಸ ಮಾಡಿ, ನಂತರ ಬಾಂಗ್ಲಾದೇಶದ ಯುದ್ಧದ ಸಮಯದಲ್ಲಿ ರಾಜ್ಯದ ನಿರಾಶ್ರಿತರ ಶಿಬಿರಗಳಲ್ಲಿ ಕೆಲಸ ಮಾಡಿದರು. ಅದರ ಜೊತೆ ಪಾರ್ಟಿ ವಾರಪತ್ರಿಕೆಗೆ ಬರೆಯುತ್ತಿದ್ದರು. 1975 ರಲ್ಲಿ ನಾನು ಕಾರ್ಮಿಕ ಸಂಘಗಳಲ್ಲಿ ಕೆಲಸ ಮಾಡಲು ಬಯಸಿದ್ದರಿಂದ ನಾನು ದೆಹಲಿಗೆ ಸ್ಥಳಾಂತರಗೊಂಡರು. 7 ನವೆಂಬರ್ 1975 ರಂದು, ಅವರು ಪ್ರಕಾಶ್ ಕಾರಟ್ ಅವರನ್ನು ವಿವಾಹವಾದರು. ಅದೇ ವರ್ಷ ಅವರು ಉತ್ತರ ದೆಹಲಿಯ ಜವಳಿ ಗಿರಣಿ ಕಾರ್ಮಿಕರೊಂದಿಗೆ ಟ್ರೇಡ್ ಯೂನಿಯನ್ ಸಂಘಟಕರಾಗಿ ಕೆಲಸ ಮಾಡಲು ಪ್ರಾರಂಭಿಸಿದರು. ಅವರು ಕಾರ್ಮಿಕರ ಚಳುವಳಿಗಳು ಮತ್ತು ಭಾರತೀಯ ಮಹಿಳಾ ಚಳುವಳಿಗಳೊಂದಿಗೆ ಸಕ್ರಿಯವಾಗಿ ಬೆಳೆದರು. 1980 ರ ದಶಕದಲ್ಲಿ ಅತ್ಯಾಚಾರ ಕಾನೂನುಗಳ ಸುಧಾರಣೆಯ ಅಭಿಯಾನದಲ್ಲಿ ಅವರು ಪ್ರಾಮುಖ್ಯತೆಯನ್ನು ಪಡೆದರು. ಕಾರಟ್ ಲಿಂಗ ಸಮಸ್ಯೆಗಳಿಗೆ ಪ್ರಮುಖ ಪ್ರಚಾರಕರಾಗಿದ್ದಾರೆ ಮತ್ತು ಪಕ್ಷದ ನಾಯಕತ್ವದಲ್ಲಿ ಮಹಿಳೆಯರಿಗೆ ಸಾಕಷ್ಟು ಪ್ರಾತಿನಿಧ್ಯಕ್ಕಾಗಿ ಪಕ್ಷದೊಳಗೆ ಹೋರಾಡಿದ್ದಾರೆ. 1993 ರಿಂದ 2004 ರವರೆಗೆ ಆಲ್ ಇಂಡಿಯಾ ಡೆಮಾಕ್ರಟಿಕ್ ವುಮೆನ್ಸ್ ಅಸೋಸಿಯೇಷನ್‌ನ ಪ್ರಧಾನ ಕಾರ್ಯದರ್ಶಿಯಾಗಿದ್ದರು ಮತ್ತು ನಂತರ ಉಪಾಧ್ಯಕ್ಷರಾಗಿದ್ದರು. ಪಶ್ಚಿಮ ಬಂಗಾಳದಲ್ಲಿ 2005ರಲ್ಲಿ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ಸದಸ್ಯರಾಗಿ ರಾಜ್ಯಸಭೆಗೆ ಆಯ್ಕೆಯಾದರು. ಇವರು ಲೇಖಕಿಯೂ ಹೌದು. ಇಂದು ಅವರ 75 ರ ಹರೆಯಲ್ಲಿಯೂ 25ಯ ಯುವತಿಯಂತೆ ಮೈಕ್ ಮುಂದೆ ನಿಂತು ಮಾತನಾಡುತ್ತಿದ್ದರೆ ಅವರ ಕಂಚಿನ ಕಂಠ ಎಲ್ಲರನ್ನೂ ಆಕರ್ಷಿಸುವುದರಲ್ಲಿ ಸಂದೇಹವಿಲ್ಲ. ಇಂತಹ ಮಹಾನ್ ಮಹಿಳಾ ಪರ ಹೋರಾಟಗಾರ್ತಿಗೆ ಕರಾವಳಿ ತರಂಗಿಣಿಯ ಶುಭ ಹಾರೈಕೆಗಳು.

## ಆಚರಣೆಗಳಲ್ಲಿ ಬಿಜೆಪಿ ರಾಜಕೀಯ ಹುಡುಕುತ್ತಿದೆ-ಡಿ.ಕೆ.ಶಿ

**ಒಂದನೇ ಪುಟದಿಂದ......**

ಆಚಾರ ವಿಚಾರ ಅನವಶ್ಯಕವಾಗಿ ಈ ವಿಚಾರಗಳನ್ನು ಎಳೆದಾಡಲು ನಾನು ಹೋಗುವುದಿಲ್ಲ. ನಮ್ಮ ಪಕ್ಷದ ನಾಯಕರು ಈ ವಿಚಾರವಾಗಿ ವಿಶಾಲಾರ್ಥದ ಹೇಳಿಕೆ ನೀಡಿದ್ದಾರೆ. ಆದರೆ ಬಿಜೆಪಿ ಇದರಲ್ಲಿ ರಾಜಕೀಯ ಮಾಡುತ್ತಿದೆ. ಧರ್ಮ, ಆಚರಣೆ, ನಂಬಿಕೆಗಳು ರಾಜಕೀಯವಾಗಿ ಉಪಯೋಗಿಸಿಕೊಳ್ಳುವ ವಿಚಾರವಲ್ಲ" ಎಂದು ಹೇಳಿದರು. "ಗಂಗೆಯಾಗಲಿ, ಕಾವೇರಿಯಾಗಲಿ, ಕೃಷ್ಣಾ, ಅರ್ಕಾವತಿಯಾಗಲಿ. ನೀರಿಗೆ ಬಣ್ಣ, ರುಚಿ, ಆಕಾರವಿಲ್ಲ. ನೀರು ಎಲ್ಲರಿಗೂ ಬೇಕು. ಅವರು ಅಶೋಕ ಎಂದು ಯಾಕೆ ಹೆಸರಿಟ್ಟುಕೊಂಡಿದ್ದಾರೆ, ಕಲ್ಲು ಎಂದು ಹೆಸರು ಇಟ್ಟುಕೊಳ್ಳಬಹುದಿತ್ತಲ್ಲವೇ? ಅವರಿಗೆ ಏನು ಹೆಚ್ಚು ಕಮ್ಮಿಯಾಗಿದೆಯೋ? ಅವರಲ್ಲಿ ಏನೋ ಸಮಸ್ಯೆ ಇರಬೇಕು. ನನ್ನ ವೈಯಕ್ತಿಕ ನಂಬಿಕೆ ವಿಚಾರವಾಗಿ ಮಾತನಾಡಲು ಯಾರಿಗೂ ಹಕ್ಕಿಲ್ಲ. ನನ್ನ ಭಕ್ತಿ, ನಂಬಿಕೆ ನನಗೆ ಬಿಟ್ಟ ವಿಚಾರ" ಎಂದು ತಿರುಗೇಟು ನೀಡಿದರು.

## ಸರ್ಕಲ್‌ನಲ್ಲಿ ನಿಲ್ಲಿಸಿ ಗುಂಡು ಹಾರಿಸಬೇಕಾಗುತ್ತದೆ: ಸಚಿವ ವೈದ್ಯ

**ಒಂದನೇ ಪುಟದಿಂದ......**

ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ. ಈಗಾಗಲೇ ಹಲವು ಪ್ರಕರಣದಲ್ಲಿ ಆರೋಪಿಗಳನ್ನು ಕೂಡ ಬಂಧಿಸಲಾಗಿದೆ. ಇನ್ನೂ ಮೇಲೆಯೂ ಇಂತಹ ಘಟನೆಗಳು ಮರುಕಳಿಸಿದರೇ ನಾವು ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಸಿದ್ದಾರೆ. ಇನ್ನು ಶಾಸಕ ದಿನಕರ್ ಶೆಟ್ಟಿ ವಿರುದ್ಧ ಅಸಮಾಧಾನ ಹೊರಹಾಕಿದ ಸಚಿವರು, ಕುಮಟಾದಲ್ಲೂ ಗೋಹತ್ಯೆ ನಡೆದಿದೆ. ಹಾಗಂತಾ ದಿನಕರ ಶೆಟ್ಟಿ ಅವರು ದಿನಕರ ಖಾನ್ ಆಗಿಬಿಡ್ತಾರಾ? ಮಾತನಾಡುವಾಗ ನೋಡಿಕೊಂಡು ಮಾತನಾಡಬೇಕು. ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ಗೋಹತ್ಯೆಗಳು ನಡೆದಿವೆ. ಬಿಜೆಪಿ ಕೆಟ್ಟ ರಾಜಕಾರಣ ಮಾಡುವುದನ್ನು ಬಿಡಬೇಕು. ನಮ್ಮ ಸರ್ಕಾರದಲ್ಲಿ ಗೋಹತ್ಯೆ ಮಾಡಿದ ಆರೋಪಿಗಳ ಬಂಧನವಾಗಿದೆ. ನಾವು ಸುಮ್ಮನೆ ಕುಳಿತಿಲ್ಲ, ಕೆಲಸ ಮಾಡುತ್ತಿದ್ದೇವೆ. ಮುಖ್ಯಮಂತ್ರಿ, ಗೃಹ ಸಚಿವರು ಕ್ರಮ ಕೈಗೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಅದರಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು

## ತೇಜೋವಧೆ ಮಾಡುವವರ ಬಾಯಿ ಮುಚ್ಚಿಸಲಿ: ವಿಜಯೇಂದ್ರ

**ಒಂದನೇ ಪುಟದಿಂದ...... ಚ**

ನಿಂದಿಸುವುದನ್ನು ಸಹಿಸಲು ಸಾಧ್ಯವಿಲ್ಲ. ತಟಸ್ಥ ಎಂದು ಹೇಳಿಕೊಳ್ಳುವವರು ಮತ್ತು ಪಕ್ಷ ಬೆಳವಣಿಗೆ ಬೇಸರತಂದಿದೆ ಎಂದು ಹೇಳುವವರು ಯಾಕೆ ಸುಮ್ಮನಿದ್ದಾರೆ? ಮಧ್ಯಸ್ಥಿಕೆ ಯಾಕೆ ವಹಿಸುತ್ತಿಲ್ಲ? ತಟಸ್ಥ ಬಣದ ಬಗ್ಗೆಯೂ ಗೊತ್ತು ಎಂದು ಹೇಳಿದರು. ಇವೆಲ್ಲ ಸರಿಪಡಿಸಲು ಪಕ್ಷದರಾಷ್ಟ್ರೀಯ ನಾಯಕರೇ ಬರಬೇಕಾ, ಇವರಿಗೆ ಜವಾಬ್ದಾರಿ ಇಲ್ಲವಾ? ಅಡ್ರೆಸ್‌ಗೆ ಇಲ್ಲದವರೂ ಯಡಿಯೂರಪ್ಪ ಅವರಿಂದಲೇ ಮೇಲೆ ಬಂದಿದ್ದಾರೆ ಎಂದು ವಿಜಯೇಂದ್ರ ಹೇಳಿದರು. ನಾನೂ ಪಕ್ಷದಲ್ಲಿ ಕಾರ್ಯಕರ್ತನಾಗಿ, ವಿವಿಧ ಹುದ್ದೆಗಳಲ್ಲಿ 18 ವರ್ಷಕ್ಕೂ ಹೆಚ್ಚು ಕಾಲ ಕಾರ್ಯ ನಿರ್ವಹಿಸಿದ್ದೇನೆ. ನಾನೇನು ಹೊಸಬನಲ್ಲ. ಲಕ್ಷಾಂತರ ಕಾರ್ಯಕರ್ತರಿಗೆ ನಾನು ಏನು ಎಂಬುದು ಗೊತ್ತು ಎಂದು ಅವರು ಹೇಳಿದರು. ತಾನು ಯಾವತ್ತೂ ಹೊಂದಾಣಿಕೆ ರಾಜಕಾರಣ ಮಾಡಿದವನಲ್ಲ, ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದಾರಾಮಯ್ಯ ಅವರ ವಿರುದ್ಧ ಬೆಂಗಳೂರುನಿಂದ ಮೈಸೂರಿಗೆ ಕಾರ್ಯಕರ್ತರೊಂದಿಗೆ ಪಾದಯಾತ್ರೆ ಮಾಡಿ ಸರ್ಕಾರವನ್ನು ಒಂಟಿಗಾಲಲ್ಲಿ ನಿಲ್ಲುವಂತೆ ಮಾಡಿದ್ದೇನೆ. ರಾಜ್ಯಾಧ್ಯಕ್ಷ ಆದಾಗಿನಿಂದ ಒಂದು ದಿನವೂ ಮನೆಯಲ್ಲಿ ಕೂರದೆ ಸರ್ಕಾರದ ವಿರುದ್ಧ ನಡೆಸಿದ ಹೋರಾಟ ಮತ್ತು ಪಕ್ಷದ ಸಂಘಟನೆಗಾಗಿ ರಾಜ್ಯದಾದ್ಯಂತ ಸುತ್ತಾಡಿದ ಪರಿಣಾಮವೇ ಸಂಘಟನೆ ವಿಷಯದಲ್ಲಿ ಕರ್ನಾಟಕವು ದೇಶದಲ್ಲಿ 4 ನೇ ಸ್ಥಾನದಲ್ಲಿದೆ ಎಂದರು.

## ಕು. ಹರ್ಷಿತಾ ಕುಲಾಲ್ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಭಾಗಿ



ಬೆಂಗಳೂರು: ಜನವರಿ 26ರಂದು ಬೆಂಗಳೂರು ಮಾಣಿಕ್ ಷಾ ಮೈದಾನದಲ್ಲಿ, ರಾಜ್ಯದ ವಿವಿಧ ಗಣ್ಯರ ಸಮ್ಮುಖ ನಡೆದ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಕು. ಹರ್ಷಿತಾ ಕುಲಾಲ್ ದ.ಕ. ಜಿಲ್ಲೆಯನ್ನು ಪ್ರತಿನಿಧಿಸಿದ್ದಾರೆ. ಇವರು ಪಾದುವ ಪದವಿ ಪೂರ್ವ ಕಾಲೇಜು ನಂತೂರು, ಮಂಗಳೂರು ಇಲ್ಲಿನ ಪ್ರಥಮ ಪಿಯುಸಿ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿಯಾಗಿದ್ದು, ನೀರುಮಾರ್ಗ ಗ್ರಾಮದ ಶ್ರೀ ಪುರುಷೋತ್ತಮ್ ಕುಲಾಲ್ ಮತ್ತು ಶ್ರೀಮತಿ ಸುಲತಾ ಇವರ ಪುತ್ರಿ.

## ಸ್ಪ್ರಿಂಕ್ಲರ್‌ಗೆ ಶೇ.90ರಷ್ಟು ಸಹಾಯಧನ

ಮಡಿಕೇರಿ–2024–25ನೇ ಸಾಲಿನಲ್ಲಿ ಕೃಷಿ ಇಲಾಖೆಯ ಮುಖಾಂತರ ಸ್ಪ್ರಿಂಕ್ಲರ್‌ಗೆ ಶೇ.90 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ. ಮಡಿಕೇರಿ ತಾಲ್ಲೂಕು ರೈತ ಬಾಂಧವರು ಈ ಸೌಲ ಭ್ಯವನ್ನು ಪಡೆದು ಸದುಪಯೋಗಿಪಡಿಸಿಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## 6ನೇ ತರಗತಿಗೆ ಉಚಿತ ಪ್ರವೇಶ: ಅರ್ಜಿ ಆಹ್ವಾನ

ಮಂಗಳೂರು – ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಅನುಕೂಲಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಡಾ॥ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ ಶೈಕ್ಷಣಿಕ ವರ್ಷ 2025–26ನೇ ಸಾಲಿನಲ್ಲಿ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ "ಸೇವಾ ಸಿಂಧು ಪೋರ್ಟಲ್" ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಾಯವಾಣಿ ಸಂಖ್ಯೆ: 8277799990 ಸಂಪರ್ಕಿಸುವಂತೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಯೋಜನೆ: ಅವಧಿ ವಿಸ್ತರಣೆ

ಮಂಗಳೂರು – ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ 2024–25ನೇ ಸಾಲಿನ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (SSP)ದಲ್ಲಿ ಶುಲ್ಕ ಮರುಪಾವತಿ ಯೋಜನೆಗೆ ಮೆಟ್ರಿಕ್, ಮೆಟ್ರಿಕ್ ನಂತರದ ಹಾಗೂ ಮೆರಿಟ್-ಕಂ-ಮೀನ್ಸ್ ವಿದ್ಯಾರ್ಥಿಗಳಿಗೆ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವೆಬ್‌ಸೈಟ್ https://dom.karnataka.gov.in ಅಥವಾ ಸಹಾಯವಾಣಿ ಸಂಖ್ಯೆ 8277799990 ಸಂಪರ್ಕಿಸುವಂತೆ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿವೇಶನಗಳ ಹಂಚಿಕೆಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ನಾಗರಿಕ ಸೌಲಭ್ಯಕ್ಕಾಗಿ ಪ್ರಾಧಿಕಾರ/ಖಾಸಗಿ ಬಡಾವಣೆಗಳಲ್ಲಿ ಮೀಸಲಿರಿಸಿದ ನಾಗರಿಕ ಸೌಲಭ್ಯ ನಿವೇಶನಗಳನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1960ರಡಿಯಲ್ಲಿ ನೋಂದಣಿಯಾದ ಸಹಕಾರ ಸಂಘ ಅಥವಾ ಸಂಘಗಳಿಂದ ನೋಂದಾಯಿತ ಶೈಕ್ಷಣಿಕ, ಧಾರ್ಮಿಕ ಚಾರಿಟಬಲ್ ಟ್ರಸ್ಟ್ ನವರಿಂದ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ ನಿಯಮ 1991 ರ ಪ್ರಕಾರ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ನೀಡುವ ಸಂಬಂಧ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ www.shivamogga.uda.in ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ವರ್ತಕರ ಲೈಸೆನ್ಸ್ ನವೀಕರಣಕ್ಕೆ ಅರ್ಜಿ

ಶಿವಮೊಗ್ಗ : 2021ರಿಂದ 2025 ನೇ ಸಾಲಿಗೆ ಲೈಸೆನ್ಸ್ ಪಡೆದ ವರ್ತಕರ/ಪೇಟೆ ಕಾರ್ಯಕರ್ತರ ಪರವಾನಿಗೆ ಅವಧಿಯು 2025 ರ ಮಾರ್ಚ್ 31 ರಂದು ಮುಕ್ತಾಯಗೊಳ್ಳಲಿದೆ. ದಿ: 28–02–2025ರ ನಂತರ ಲೈಸೆನ್ಸ್‌ಗಳನ್ನು ನವೀಕರಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಶಿವಮೊಗ್ಗ ಈ ಕಚೇರಿಯ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಸಮಿತಿಯ ಕಾರ್ಯದರ್ಶಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮಡಿಕೇರಿ – ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ವತಿಯಿಂದ 2024–25 ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಜನಾಂಗದವರಿಗೆ ಅರಿವು(ರಿನಿವಲ್) ಯೋಜನೆಯಡಿಯಲ್ಲಿ ನಿಗಮದಿಂದ ಸಾಲ ಸೌಲಭ್ಯಗಳನ್ನು ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08272–201449 ಗೆ ಸಂಪರ್ಕಿಸಬಹುದು.


## ಜನರ ಹಿತಕ್ಕೆ ಗಮನ ನೀಡದ ಕೇಂದ್ರದ ಬಿಜೆಪಿ ಬಜೆಟ್



ಬೆಳ್ತಂಗಡಿ: ಕೇಂದ್ರದ ಈ ಬಾರಿಯ ಬಜೆಟ್ ರೈತರಿಗೆ, ಕಾರ್ಮಿಕರಿಗೆ ಏನೇನೂ ಸಹಾಯ ನೀಡದ ಹಾಗೂ ಸ್ಕೀಂ ನೌಕರರಾದ ಅಂಗನವಾಡಿ, ಅಕ್ಷರದಾಸೋಹ, ಆಶಾ ಕಾರ್ಯಕರ್ತೆಯರ ವೇತನ ಹೆಚ್ಚಳ ಮಾಡದ ಯುವಜನತೆಗೆ ಉದ್ಯೋಗ ಒದಗಿಸದ ಮತ್ತು ಕರ್ನಾಟಕಕ್ಕೆ ಅನ್ಯಾಯ ಎಸಗಿದ ನಿರಾಸಾದಾಯಕ ಬಜೆಟ್ ಆಗಿದೆ ಎಂದು ಸಿಪಿಐಎಂ ಬೆಳ್ತಂಗಡಿ ತಾ। ಸಮಿತಿ ಕಾರ್ಯದರ್ಶಿ ನ್ಯಾಯವಾದಿ ಬಿ.ಎಂ. ಭಟ್ ಹೇಳಿದ್ದಾರೆ. ಮಹಿಳೆಯರು ದೇಶದಾದ್ಯಂತ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಾಲಕ್ಕೆ ಬಲಿಯಾಗಿ ದೌರ್ಜನ್ಯಕ್ಕೊಳಗಾಗಿರುವಾಗ ಅವರ ರಕ್ಷಣೆಗೆ ಯಾವುದೇ ಪ್ರಸ್ತಾಪ ಬಜೆಟಲ್ಲಿ ಇಲ್ಲದಿರುವುದು ವಿಷಾಧನೀಯ, ಅಡಿಕೆ ಬೆಳೆಗಾರರ ರಕ್ಷಣೆಗೆ ಬಾರದ ಮೋದಿ ಸರಕಾರ ಕನಿಷ್ಟ ಅಡಿಕೆ ಆಮದು ನಿಷೇದಿಸುವ ಪ್ರಸ್ತಾಪವನ್ನಾಗಲಿ, ತೊಗರಿಬೇಳೆ ಆಮದು ನಿಷೇದಿಸುವ ಬಗ್ಗೆಯಾಗಲಿ ಮುಂದಾಗಲಿಲ್ಲ ಎಂದು ಟೀಕಿಸಿದರು.

## ಕಬಡ್ಡಿ ಉಳಿಸಲು ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ನಿರ್ಧಾರ

ಬಂಟ್ವಾಳ : ಕಬಡ್ಡಿ ಪಂದ್ಯಾಟಗಳು ರಾತ್ರಿ 11 ರ ಬಳಿಕ ನಡೆಸುವಂತಿಲ್ಲ ಎಂದು ದ.ಕ.ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ನ ವಾರ್ಷಿಕ ಮಹಾಸಭೆಯಲ್ಲಿ ಮಹತ್ವದ ನಿರ್ಣಯ ಕೈಗೊಳ್ಳಲಾಗಿದೆ. ಸಂಸ್ಥೆಯ ಅಧ್ಯಕ್ಷ ರಾಕೇಶ್ ಮಲ್ಲಿ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಕಬಡ್ಡಿಯನ್ನು ಉಳಿಸುವ ಹಾಗೂ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪಂದ್ಯಾಟಗಳು ಸಂಜೆ ವೇಳೆಗೆ ಆರಂಭಗೊಂಡು ರಾತ್ರಿ 11ರ ವೇಳೆಗೆ ಮುಗಿಸಬೇಕು. ಈ ಬಗ್ಗೆ ಸಹಕರಿಸುವಂತೆ ಪೊಲೀಸ್ ಇಲಾಖೆ, ಜಿಲ್ಲೆಯ ಎಲ್ಲಾ ಶಾಸಕರಿಗೆ ಹಾಗೂ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸುವುದು ಎಂದು ನಿರ್ಣಯ ಕೈಗೊಳ್ಳಲಾಯಿತು. ಉಳಿದಂತೆ ದ.ಕ.ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ಬಗ್ಗೆ ಇಲ್ಲ ಸಲ್ಲದ ಕಾರಣಗಳನ್ನು ನೀಡಿ ವೃಥಾ ಆರೋಪ ಮಾಡಿರುವುದನ್ನು ಖಂಡಿಸಿ ಖಂಡನಾ ನಿರ್ಣಯ ಕೈಗೊಳ್ಳಲಾಯಿತು.




## ಮನಪಾ ಬಜೆಟ್‌ನಲ್ಲಿ ಕ್ರೀಡೆಗೆ ಹೆಚ್ಚಿನ ಅನುದಾನ



ಮಂಗಳೂರು: ಕ್ರೀಡೆಗೆ ಹಾಗೂ ಕ್ರೀಡಾಪಟುವಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಮಂಗಳೂರು ಮಹಾನಗರ ಪಾಲಿಕೆಯ 2025–26ನೇ ಸಾಲಿನ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಮೀಸಲಿಡಲಾಗುವುದು ಎಂದು ಮನಪಾ ಮೇಯರ್ ಮನೋಜ್ ಕುಮಾರ್ ತಿಳಿಸಿದ್ದಾರೆ. ಮಂಗಳೂರು ಮಹಾನಗರ ಪಾಲಿಕೆ ಹಾಗೂ ಎ ವನ್ ಅಕ್ವಾಟಿಕ್ ಕ್ಲಬ್ ಸಹಯೋಗದಲ್ಲಿ ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್‌ನ ಎಮ್ಮೆಕೆರೆ ಈಜುಕೊಳದಲ್ಲಿ 'ಎ ವನ್ ಅಕ್ವಾ ಕಾರ್ನಿವಲ್ –2025 ಮೇಯರ್ ಕಪ್'ರಾಜ್ಯ ಮಟ್ಟದ ಈಜು ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು. ಮಂಗಳೂರಿನಲ್ಲಿ ಈಜು ತರಬೇತಿ ಪಡೆದು ಉತ್ತಮ ಈಜುಪಟುಗಳಾಗಿ ರೂಪುಗೊಳ್ಳಲು ಉತ್ತಮ ಅವಕಾಶ ಇದೆ ಎಂದು ಅವರು ಹೇಳಿದರು.

## ಕೋಸ್ಟ್‌ಗಾರ್ಡ್ ಶೌರ್ಯದ ಅಣುಕು ಪ್ರದರ್ಶನ

ಮಂಗಳೂರು: ಸಮುದ್ರ ಮಧ್ಯೆ ಹಡಗುಗಳಲ್ಲಿ ಸಂಭವಿಸುವ ಅನಾಹುತ, ಕಡಲ್ಗಳ್ಳರ ಪತ್ತೆ, ಅಪಾಯಕ್ಕೆ ಸಿಲುಕುವ ಮೀನುಗಾರಿಕಾ ಬೋಟು ಹಾಗೂ ಮೀನುಗಾರರ ರಕ್ಷಣೆಯ ನಿಟ್ಟಿನಲ್ಲಿ ಕರಾವಳಿ ರಕ್ಷಣಾ ಪಡೆ (ಕೋಸ್ಟ್ ಗಾರ್ಡ್) ಯಿಂದ ನಡೆಸಲಾಗುವ ಕ್ಷಿಪ್ರ ಕಾರ್ಯಾಚರಣೆಯ ಅಣುಕು ಪ್ರದರ್ಶನ ನವಮಂಗಳೂರು ಬಂದರು ಬಳಿಯ ಅರಬಿ ಸಮುದ್ರದಲ್ಲಿ ರವಿವಾರ ನಡೆಯಿತು. ಭಾರತೀಯ ಕೋಸ್ಟ್‌ಗಾರ್ಡ್‌ನ 49ನೆ ರೈಸಿಂಗ್ ಡೇ (ಸ್ಥಾಪನಾ ದಿನ)ಯ ಅಂಗವಾಗಿ ನಡೆದ 'ಡೇ ಎಟ್ ಸೀ' ಎಂಬ ಕೋಸ್ಟ್ ಗಾರ್ಡ್‌ನ ಕಸರತ್ತಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಉಪಸ್ಥಿತರಿದ್ದರೆ, ಕೋಸ್ಟ್ ಗಾರ್ಡ್‌ನ ಸುಮಾರು 400 ಸಿಬ್ಬಂದಿ ಈ ಅಣುಕು ಪ್ರದರ್ಶನದಲ್ಲಿ ಭಾಗವಹಿಸಿದ್ದರು. ಭಾರತೀಯ ನೌಕಾ ಪಡೆಯು ನೌಕಾ ದಿನಾಚರಣೆಯ ಅಂಗವಾಗಿ ಈ ರೀತಿಯ ಅಣುಕು ಪ್ರದರ್ಶನ ನಡೆಸುವಂತೆಯೇ, ಕೋಸ್ಟ್ ಗಾರ್ಡ್ ಕೂಡಾ ತನ್ನ ನೆಲೆಗಳನ್ನು ಹೊಂದಿರುವಲ್ಲಿ ಕೋಸ್ಟ್‌ಗಾರ್ಡ್ ಸ್ಥಾಪನಾ ದಿನದಂಗವಾಗಿ ಈ ಅಣುಕು ಪ್ರದರ್ಶವನ್ನು ನಡೆಸುತ್ತದೆ.



## ಗೊಕಳ್ಳರ ವಿರುದ್ಧ ಕ್ರಮಕ್ಕೆ ಮುಸ್ಲಿಮ್ ಒಕ್ಕೂಟ ಆಗ್ರಹ



ಬೈಂದೂರು : ಉಡುಪಿ ಜಿಲ್ಲಾ ಮುಸ್ಲಿಂ ಒಕ್ಕೂಟ ಬೈಂದೂರು ತಾಲೂಕು ಘಟಕದ ವತಿಯಿಂದ ಬೈಂದೂರು ಅಂಬಾಗಿಲು, ಶಿರೂರು ಹಾಗೂ ಇತರ ಭಾಗಗಳಲ್ಲಿ ನಡೆಯುತ್ತಿರುವ ಸರಣಿ ಗೋವು ಕಳ್ಳತನದ ತನಿಖೆ ನಡೆಸಿ ತಪ್ಪಿತಸ್ಥರನ್ನು ಬಂಧಿಸುವಂತೆ ಆಗ್ರಹಿಸಿ ಬೈಂದೂರು ಪೊಲೀಸ್ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ನಿಯೋಗದಲ್ಲಿ ಬೈಂದೂರು ಘಟಕದ ಅಧ್ಯಕ್ಷ ತಬ್ರೇಜ್ ನಾಗೂರು, ಜಿಲ್ಲಾ ಉಪಾಧ್ಯಕ್ಷ ಫಯಾಜ್ ಅಲಿ ಬೈಂದೂರು, ಕಾರ್ಯ ದರ್ಶಿ ತುಫೈಲ್ ಶಹಾಬುದ್ದೀನ್, ಖಜಾಂಚಿ ಸಯ್ಯದ್ ಅದ್ಮಲ್ ಶಿರೂರು, ನಿಕಟಪೂರ್ವ ಅಧ್ಯಕ್ಷ ಮೊಹೀನ್ ಬುವಾಜಿ, ಎಚ್.ಎಸ್.ಸಿದ್ದೀಕ್ ಶಿರೂರು, ಎನ್.ಜಿ. ಅಶ್ರಫ್ ನಾಗೂರು ಉಪಸ್ಥಿತರಿದ್ದರು.

## ಹೆಜಮಾಡಿ ಟೋಲ್ ಗೇಟ್ ವಿರುದ್ಧ ಆಕ್ರೋಶ

ಪಡುಬಿದ್ರೆ: ಹೆಜಮಾಡಿ ಟೋಲ್ ಗೇಟ್ ನಲ್ಲಿ ಬಸ್ಸುಗಳಿಂದ ಅವೈಜ್ಞಾನಿಕವಾಗಿ ಟೋಲ್ ಕಡಿತ ಮಾಡಲಾಗುತ್ತಿದೆ. ಎರಡು ದಿನಗಳ ಒಳಗೆ ಈ ಸಮಸ್ಯೆಗೆ ಪರಿಹಾರ ಕಲ್ಪಿಸದಿದ್ದಲ್ಲಿ ತೀವ್ರವಾಗಿ ಪ್ರತಿಭಟಿಸಿ ಶಕ್ತಿ ಪ್ರದರ್ಶನ ಮಾಡುವುದಾಗಿ ಬಸ್ಸು ಮಾಲಕರು ಎಚ್ಚರಿಸಿದ್ದಾರೆ. ಹೆಜಮಾಡಿ ಟೋಲ್ ಗೇಟ್ ನಲ್ಲಿ ಹಗಲು ದರೋಡೆ ಮಾಡಲಾಗುತ್ತಿದೆ ಎಂದು ಆರೋಪಿಸಿ ಕೆನರಾ ಬಸ್ಸು ಮಾಲಕರ ಸಂಘ ಹಾಗೂ ಕರಾವಳಿ ಬಸ್ಸು ಮಾಲಕರ ಸಂಘದ ಪದಾಧಿಕಾರಿಗಳು ಸಾಂಕೇತಿಕವಾಗಿ ಪ್ರತಿಭಟಿಸಿ ಟೋಲ್ ಅಧಿಕಾರಿಗಳನ್ನು ಎಚ್ಚರಿಸಿದ್ದಾರೆ.



ತಮ್ಮ ಮಿನಿ ಬಸ್ಸುಗಳಿಗೆ ಘನ ವಾಹನಗಳ ಟೋಲನ್ನು ಕಡಿತಗೊಳಿಸಲಾಗುತ್ತಿದ್ದು, ಅವೈಜ್ಞಾನಿಕವಾಗಿರುವ ಈ ಕ್ರಮವನ್ನು ಕೂಡಲೇ ನಿಲ್ಲಿಸಬೇಕು. ಇಲ್ಲವಾದಲ್ಲಿ ಬಸ್ಸುಗಳನ್ನೆಲ್ಲಾ ಟೋಲ್‌ಗೆ ಅಡ್ಡವಾಗಿರಿಸಿ ತೀವ್ರತರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದ್ದಾರೆ.

## ಉದ್ಯೋಗ ಖಾತರಿ ಯೋಜನೆಯ ಸಮಸ್ಯೆ ವಿರೋಧಿಸಿ ಪ್ರತಿಭಟನೆ



ಉಡುಪಿ : ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಮಸ್ಯೆಗಳನ್ನು ವಿರೋಧಿಸಿ ಕರ್ನಾಟಕ ಪ್ರಾಂತ ಕೃಷಿಕೂಲಿಕಾರರ ಸಂಘ ಉಡುಪಿ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಇಂದು ಉಡುಪಿ ಜಿಲ್ಲಾಧಿಕಾರಿ ಕಛೇರಿ ಎದುರು ಪ್ರತಿಭಟನೆ ನಡೆಸಲಾಯಿತು. ಈ ಕುರಿತ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅವರಿಗೆ ಮನವಿ ನೀಡಲಾಯಿತು. ಉದ್ಯೋಗ ಖಾತರಿ ಯೋಜನೆಯಲ್ಲಿ ವರ್ಷಕ್ಕೆ 100 ದಿನಗಳ ಕೆಲಸ ಎಂದರೂ ಸಹ ಎಲ್ಲೂ 100 ದಿನ ಸಿಗುವುದಿಲ್ಲ. 85 ಹಾಜರಾತಿ ಆದ ನಂತರ ಎನ್‌ಎಂಆರ್ ನಲ್ಲಿ ಹೆಸರು ತಡೆಯಲಾಗುತ್ತಿದೆ. ಈಗಾಗಲೇ ಕೆಲಸ ಮಾಡಿದ ಬಾಕಿ ಇರುವ ಅಕುಶಲ ಕಾರ್ಮಿಕರ ಕೂಲಿ ಹಣ ಕೂಡಲೇ ಪಾವತಿಸಲು ತಕ್ಷಣ ಕ್ರಮಕೈಗೊಳ್ಳಬೇಕೆಂದು ಮನವಿಯಲ್ಲಿ ಆಗ್ರಹಿಸಲಾಗಿದೆ.


## ಕಲಾ ಸಾಧನ ಸಂಸ್ಥೆಯಿಂದ "ಸ್ವರಸಾನಿಧ್ಯ"



ಮಂಗಳೂರು: "ಮಂಗಳೂರಿನ ಕಲಾ ಸಾಧನ ಸಂಸ್ಥೆ ವತಿಯಿಂದ ನಗರದ ಟಿಎಂಎ ಪೈ ಇಂಟರ್‌ನ್ಯಾಶನಲ್ ಕನ್ವೆನ್ಶನ್ ಸೆಂಟರ್‌ನಲ್ಲಿ ಸ್ವರ ಸಾನಿಧ್ಯ ರಾಷ್ಟ್ರೀಯ ಮಟ್ಟದ ಯುವ ಸಂಗೀತೋತ್ಸವ ಹಾಗೂ ದೇಶದ ಖ್ಯಾತ ಸಂಗೀತ ಕಲಾವಿದರ ಸಂಗೀತ ಕಾರ್ಯಕ್ರಮ ಫೆಬ್ರವರಿ 8ರಂದು ನಡೆಯಲಿದೆ ಎಂದು ಸಂಸ್ಥೆಯ ಗೌರವ ಸಲಹೆಗಾರರಾದ ಶ್ರೀನಿವಾಸ್ ನಾಯಕ್ ಇಂದಾಜೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಕಾರ್ಯಕ್ರಮದ ಸಂಯೋಜಕಿ ಮತ್ತು ಕಲಾಸಾಧನ ಸಂಸ್ಥೆಯ ನಿರ್ದೇಶಕಿ ವಿಭಾ ನಾಯಕ್ ಮಾತನಾಡಿ, ಬೆಳಗ್ಗೆ 8 ಗಂಟೆಗೆ ದೀಪ ಪ್ರಜ್ವಲನೆಯೊಂದಿಗೆ ಕಾರ್ಯಕ್ರಮ ಆರಂಭ ಗೊಳ್ಳಲಿದ್ದು ರಾತ್ರಿ 8:30ರವರೆಗೆ ಕಾರ್ಯಕ್ರಮ ನಡೆಯಲಿದೆ" ಬೆಳಿಗ್ಗೆ 8.40ರಿಂದ 9.30 ರವರೆಗೆ ಶ್ರೀಮತಿ ವಿಭಾ ಎಸ್. ನಾಯಕ್ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಗಾಯನ ನಡೆಯಲಿದೆ ಎಂದರು.

## ಅಂಗನವಾಡಿ ಕಾರ್ಯಕರ್ತೆಯರನ್ನು ಗೌರವಯುತವಾಗಿ ನಡೆಸಿಕೊಳ್ಳಿ

ಮಂಗಳೂರು: ಕನಿಷ್ಠ ವೇತನ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಸಂಘವು ಬೆಂಗಳೂರಿನ ತೀವ್ರ ಚಳಿಯನ್ನೂ ಲೆಕ್ಕಿಸದೇ ಅನಿರ್ದಿಷ್ಟಾವಧಿ ಧರಣಿ ನಡೆಸುತ್ತಿದ್ದು, ಕಾಂಗ್ರೆಸ್ ಸರ್ಕಾರ ಮಾತ್ರ ತಲೆಕೆಡಿಸಿಕೊಳ್ಳದೇ ಬೆಚ್ಚಗೆ ನಿದ್ದೆಗೆ ಹೋಗಿದೆ ಎಂದು ಶಾಸಕ ವೇದವ್ಯಾಸ ಕಾಮತ್‌ರವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಲಾಕ್ ಡೌನ್ ಸಂದರ್ಭದಲ್ಲಿ ಜೀವದ ಹಂಗು ತೊರೆದು ಕೊರೋನ ವಾರಿಯರ್‌ಗಳಾಗಿ ಕಾರ್ಯನಿರ್ವಹಿಸಿದ ಅಂಗನವಾಡಿ ಕಾರ್ಯಕರ್ತೆಯರ ತ್ಯಾಗಕ್ಕೆ ಯಾವುದೇ ಸಾಟಿಯಿಲ್ಲ.



ಅಂತಹವರನ್ನು ಸರ್ಕಾರ ಗೌರವಯುತವಾಗಿ ನಡೆಸಿಕೊಂಡು ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕಿತ್ತು. ಸೌಜನ್ಯ ತೋರದ ಸರ್ಕಾರ, ಹಿಟ್ಲರ್ ನೀತಿ ಮೂಲಕ ದಬ್ಬಾಳಿಕೆ ನಡೆಸಿ ಪ್ರತಿಭಟನೆ ಹತ್ತಿಕ್ಕಲು ನೋಡುತ್ತಿರುವುದಕ್ಕೆ ಶಾಸಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

## ವಿಧಾನ ಸೌಧದ ಆವರಣದಲ್ಲಿ ಲಿಟ್ ಫೆಸ್ಟ್ –ಯು.ಟಿ. ಖಾದರ್



ಮಂಗಳೂರು: ಫೆಬ್ರವರಿ 27 ರಿಂದ ಮಾರ್ಚ್ 3ರವರೆಗೆ ವಿಧಾನಸೌಧದ ಆವರಣದಲ್ಲಿ ಸಾಹಿತ್ಯ ಉತ್ಸವ, ಸಾಂಸ್ಕೃತಿಕ ಉತ್ಸವ, ಪುಸ್ತಕ ಮೇಳ, ಆಹಾರ ಮೇಳಗಳನ್ನು ನಡೆಸಲು ನಿರ್ಧರಿಸಲಾಗಿದೆ ಎಂದು ವಿಧಾನ ಸಭಾಧ್ಯಕ್ಷ ಯುಟಿ ಖಾದರ್ ಹೇಳಿದರು. ಅವರು ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಾಹಿತಿಗಳು, ಬರಹಗಾರರು, ವಿದ್ವಾಂಸರನ್ನು ವಿಧಾನಸಭೆಗೆ ಹತ್ತಿರವಾಗಿಸುವ ಉದ್ದೇಶದಿಂದ ಸಾಹಿತ್ಯ ಉತ್ಸವ ಆಯೋಜಿಸಲಾಗುತ್ತಿದೆ. ಒಬ್ಬ ಸಾಹಿತಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದೇವೆ. ಸಾರ್ವಜನಿಕರಿಗೆ ಮುಕ್ತ ಪ್ರವೇಶ ಇರಲಿದ್ದು, ಭದ್ರತೆ ದೃಷ್ಟಿಯಿಂದ ವಿಶೇಷ ತಪಾಸಣಾ ವ್ಯವಸ್ಥೆ ಮಾಡುತ್ತೇವೆ. ಈ ಸಾಹಿತ್ಯ ಉತ್ಸವವನ್ನು ಪ್ರತಿ ವರ್ಷವೂ ಏರ್ಪಡಿಸಬೇಕು ಎಂಬುದು ನಮ್ಮ ಆಶಯ'. ಸುಮಾರು ನೂರೈವತ್ತಕ್ಕೂ ಹೆಚ್ಚಿನ ಸ್ಟಾಲ್ ಗಳಿಗೆ ಅವಕಾಶವಿರುತ್ತದೆ ಎಂದರು.

## ಫೆ.22ರಂದು ಹೊಂಬೆಳಕು ಎರಡನೇ ಆವೃತ್ತಿಯ ಕಾರ್ಯಕ್ರಮ

ಮಂಗಳೂರು: "ಫೆ.22ರಂದು ಸಹ್ಯಾದ್ರಿ ಕ್ಯಾಂಪಸ್‌ನಲ್ಲಿ ಗ್ರಾಮ ಸ್ವರಾಜ್ ಪ್ರತಿಷ್ಠಾನದ ಆಶ್ರಯದಲ್ಲಿ ಎರಡನೇ ಆವೃತ್ತಿಯ "ಹೊಂಬೆಳಕು" ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ವಿಧಾನ ಪರಿಷತ್ ಶಾಸಕ ಹಾಗೂ ಸಂಘಟನೆಯ ಅಧ್ಯಕ್ಷರಾದ ಮಂಜುನಾಥ ಭಂಡಾರಿ ಹೇಳಿದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ 355 ಗ್ರಾಮ ಪಂಚಾಯತ್‌ನ 6082 ಮಂದಿ ಚುನಾಯಿತ ಸದಸ್ಯರಿದ್ದಾರೆ. 2000–2500 ಮಂದಿ ಪಂಚಾಯತ್ ನೌಕರರಿದ್ದಾರೆ. ಅವರೆಲ್ಲರನ್ನು ಒಂದೆಡೆ ಸೇರಿಸುವ ಉದ್ದೇಶದಿಂದ ಜಿಲ್ಲಾ ಪಂಚಾಯತಿಗಳ ಸಹಕಾರದೊಂದಿಗೆ ಹೊಂಬೆಳಕು ಕ್ರೀಡೋತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬರಲು ಒಪ್ಪಿಗೆ ಸೂಚಿಸಿದ್ದಾರೆ, ಅಧಿಕಾರಿಗಳನ್ನು ಹಾಗೂ ಪಕ್ಷ ಬೇಧವಿಲ್ಲದೆ ಎಲ್ಲ ಜನಪ್ರತಿನಿಧಿಗಳನ್ನು ಇದರಲ್ಲಿ ತೊಡಗಿಸಿಕೊಳ್ಳಲಾಗುವುದು ಎಂದರು.



## ಭೀಮ ಸಂಗಮ–ಸಾಮರಸ್ಯದ ಕಾರ್ಯಕ್ರಮ



ಮಂಗಳೂರು: ಭಾರತೀಯ ಜನತಾ ಪಕ್ಷದ ವರಿಷ್ಠರ ಆಶಯದಂತೆ ಸಂವಿಧಾನ ಗೌರವ ಅಭಿಯಾನದ ಅಂಗವಾಗಿ ವಿಧಾನಪರಿಷತ್ ಸದಸ್ಯ ಶ್ರೀ ಕಿಶೋರ್ ಕುಮಾರ್ ಪುತ್ತೂರು ಅವರ ಮನೆಯಲ್ಲಿ ಭೀಮಸಂಗಮ ಕಾರ್ಯಕ್ರಮ ಜರಗಿತು. ದಲಿತ ಸಮಾಜದ ಸುಮಾರು 120 ದಂಪತಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಕಿಶೋರ್ ಕುಮಾರ್, ಬಿಜೆಪಿ ನಗರ ಅಧ್ಯಕ್ಷರಾದ ಶಿವಕುಮಾರ್ ಭಟ್, ಗ್ರಾಮಾಂತರ ಅಧ್ಯಕ್ಷರಾದ ದಯಾನಂದ ಶೆಟ್ಟಿ ಉಜಿರೆಮಾರ್ ಇವರನ್ನು ಕಾಲು ತೊಳೆದು ಬರಮಾಡಿಕೊಂಡರು. ಮುತ್ತೈದೆಯರು ಅವರಿಗೆ ಬಾಗಿನ ಸಮರ್ಪಿಸಿ ಆರತಿ ಬೆಳಗಿದರು. ಸಾಮರಸ್ಯದ ಕುರಿತಾಗಿ ಶ್ರೀ ರವೀಂದ್ರ ಪುತ್ತೂರು ಹಾಗೂ ಶಿವಪ್ರಸಾದ ಇವರು ಉಪನ್ಯಾಸವನ್ನು ನಡೆಸಿಕೊಟ್ಟರು. ನಂತರ ಸಹಭೋಜನ ಕಾರ್ಯಕ್ರಮದಲ್ಲಿ ಜಾತಿ ಮತಗಳ ಸೀಮೆಯನ್ನು ಮೀರಿ ನಿಂತು ಎಲ್ಲರೂ ಊಟ ಮಾಡಿದರು. ಊಟವನ್ನು ಬಡಿಸಿದರು.

## ಬ್ರಹ್ಮರಕೊಟ್ಲು ಟೋಲ್ ಗೇಟ್ ಮುಚ್ಚಿಸಲು ಮನವಿ

ಮಂಗಳೂರು: ಯಾವುದೇ ಮೂಲ ಸೌಲಭ್ಯಗಳಿಲ್ಲದ, ಅಸಮರ್ಪಕ, ಅವೈಜ್ಞಾನಿಕ ಮತ್ತು ಗೂಂಡಾಗಿರಿಗೆ ಕುಖ್ಯಾತಿ ಪಡೆದಿರುವ ಬಂಟ್ವಾಳ ತಾಲೂಕಿನ ಬ್ರಹ್ಮರಕೊಟ್ಲು ವಿವಾದಿತ ಟೋಲ್ ಗೇಟ್ ಮುಚ್ಚಬೇಕು ಎಂದು ಕೋರಿ ಎಸ್‌ಡಿಪಿಐ ಮಂಗಳೂರು ಗ್ರಾಮಾಂತರ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಅಪರ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು. ಬಂಟ್ವಾಳ ತಾಲೂಕಿನ ರಾಷ್ಟ್ರೀಯ ಹೆದ್ದಾರಿ 75ರ ಬ್ರಹ್ಮರಕೊಟ್ಲುವಿನಲ್ಲಿ ಕಳೆದ ಹನ್ನೆರಡು ವರ್ಷಗಳಿಂದ ಕಾರ್ಯಾಚರಿಸು ತ್ತಿರುವ ವಿವಾದಿತ ಟೋಲ್ ಗೇಟ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ನಿಯಮಗಳಿಗೆ ವಿರುದ್ಧವಾಗಿ ಕಾರ್ಯಾಚರಿಸುತ್ತಿದೆ. ಪ್ರಾಧಿಕಾರದ ನಿಯಮದಂತೆ ಟೋಲ್ ಸಂಗ್ರಹಿಸುವ ರಸ್ತೆಯನ್ನು ಎಲ್ಲಾ ಸಮಯದಲ್ಲೂ ಸುಸ್ಥಿತಿಯಲ್ಲಿ ಇಡಬೇಕು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.



## ರಾಷ್ಟ್ರೀಯ ಕ್ರೀಡಾಕೂಟದ ವೇಯ್ಟ್ ಲಿಫ್ಟಿಂಗ್



ಮೂಡುಬಿದಿರೆ: ಉತ್ತರಖಂಡದ ಡೆಹ್ರಾಡೂನ್ ನಲ್ಲಿ ಜರುಗಿದ ರಾಷ್ಟ್ರೀಯ ಕ್ರೀಡಾಕೂಟದ ವೇಯ್ಟ್ ಲಿಫ್ಟಿಂಗ್ ವಿಭಾಗದಲ್ಲಿ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿದ ಉಷಾ ಎಸ್ ಆರ್ ಇವರು ಮೂಡುಬಿದಿರೆಯ ಆಳ್ವಾಸ್‌ನ ವಿದ್ಯಾರ್ಥಿನಿ. 87ಕೆಜಿ ದೇಹ ತೂಕ ವಿಭಾಗದಲ್ಲಿ ಸ್ಪರ್ಧಿಸಿರುವ ಇವರು ಒಟ್ಟು 197ಕೆಜಿ ಭಾರ ಎತ್ತಿ ಕಂಚಿನ ಪದಕಕ್ಕೆ ಪಾತ್ರರಾಗಿದ್ದಾರೆ. 76 ಕೆಜಿ ದೇಹತೂಕ ವಿಭಾಗದಲ್ಲಿ ಸ್ಪರ್ಧಿಸಿದ್ದ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ತನುಷ 4ನೇ ಸ್ಥಾನ ಪಡೆದಿದ್ದಾರೆ. ರಾಷ್ಟ್ರೀಯ ಕ್ರೀಡಾಕೂಟದ ವೇಯ್ಟ್ಲಿಫ್ಟಿಂಗ್ ವಿಭಾಗದಲ್ಲಿ ಇವರು ಇರ್ವರೆ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿದವರು. ಸಂಸ್ಥೆಯ ಅಧ್ಯಕ್ಷ ಡಾ. ಎಂ. ಮೋಹನ ಆಳ್ವ ಇವರ ಸಾಧನೆಯನ್ನು ಅಭಿನಂದಿಸಿದ್ದಾರೆ.

# ಸುದ್ದಿ ತುಣುಕು

ಮಸಾಜ್ ಪಾರ್ಲರ್ ಮೇಲಿನ ದಾಳಿ ಪ್ರಕರಣದಲ್ಲಿ ಆರೋಪಿಗಳಿಗೆ ಮಂಗಳೂರಿನ ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಷರತ್ತು ಬದ್ಧ ಜಾಮೀನು ಮಂಜೂರು ಮಾಡಿದೆ. ರಾಮಸೇನಾ ಕರ್ನಾಟಕ ಸಂಸ್ಥಾಪಕ ಪ್ರಸಾದ್ ಅತ್ತಾವರ ಸೇರಿದಂತೆ 11 ಮಂದಿಗೆ ಜಾಮೀನು ಸಿಕ್ಕಿದೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಬಂಡಾಯ ಎದ್ದಿರುವ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಅವರ ಟೀಂಗೆ ಹೈಕಮಾಂಡ್ ಭೇಟಿಗೆ ಅವಕಾಶ ಸಿಗದ ಕಾರಣ ವಾಪಸ್ ಆಗಿದ್ದಾರೆ.

ಏರೋ ಇಂಡಿಯಾ ಹಿನ್ನೆಲೆ ಬೆಂಗಳೂರು ಸಂಚಾರ ಪೊಲೀಸರು ಮುಂಜಾಗ್ರತ ಕ್ರಮವಾಗಿ ಮಾರ್ಗ ಬದಲಾವಣೆ, ಏಕ ಮುಖ ಸಂಚಾರ ಸೇರಿದಂತೆ ತಾತ್ಕಾಲಿಕವಾಗಿ ಕೆಲ ಬದಲಾವಣೆ ಮಾಡಿದ್ದಾರೆ.

ಮತದಾರರಿಗೆ ಹಂಚಲು ದೊಡ್ಡ ಪ್ರಮಾಣದಲ್ಲಿ ದಿನಸಿ ವಸ್ತುಗಳು ಸಂಗ್ರಹ ಮಾಡಿದ ಆರೋಪ ಸಂಬಂಧ ಮಾಜಿ ಸಚಿವ ಎಸ್.ಎನ್.ಕೃಷ್ಣಯ್ಯ ಶೆಟ್ಟಿ ವಿರುದ್ಧದ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿದೆ.

2023-24ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅಮೃತ ಸರೋವರ ಜಿಲ್ಲಾ ಪುರಸ್ಕಾರ, ಅತ್ಯುತ್ತಮ ಗ್ರಾಮ ಪಂಚಾಯಿತಿ, ಉತ್ತಮ ಕಾಯಕ ಬಂಧು ಸೇರಿದಂತೆ ಒಟ್ಟು ಐದು ಪ್ರಶಸ್ತಿಗಳು ಬೆಳಗಾವಿ ಜಿಲ್ಲೆಗೆ ಒಲಿದಿವೆ.

ನಿವೃತ್ತ ಸೇನಾ ಸಿಬ್ಬಂದಿಗೆ ಹಂಚಿಕೆಯಾಗಿರುವ ನಿವೇಶನದ ಕ್ರಯಪತ್ರ ಮಾಡಿಕೊಡುವಂತೆ ಹೈಕೋರ್ಟ್ ಮುಡಾಗೆ ಆದೇಶ ನೀಡಿದೆ.

ಬಿಎಂಟಿಸಿ ಡಿಜಿಟಲ್ ಮೈಲಿಗಲ್ಲು ಸಾಧಿಸಿದ್ದು, ಒಂದೇ ದಿನ ಯುಪಿಐ ಮೂಲಕ ಒಂದು ಕೋಟಿ ಆದಾಯ ಬಿಎಂಟಿಸಿ ಸಂಸ್ಥೆಗೆ ಬಂದಿದೆ.

ಸರ್ಕಾರ, ಜಿಲ್ಲಾಡಳಿತ ಸೇರಿದಂತೆ ಒತ್ತುವರಿದಾರರು ಎನ್ನಲಾದ ಮೂವರು ಖಾಸಗಿ ವ್ಯಕ್ತಿಗಳಿಗೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.


ನವದೆಹಲಿಯಲ್ಲಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ನಿವಾಸದಲ್ಲಿ ಸಚಿವ ಕುಮಾರಸ್ವಾಮಿ ಅವರನ್ನು ಭೇಟಿಯಾದ ನಾ.ರಾ.ಲೋಕೇಶ್ ಅವರು ವೈಜಾಗ್ ಸ್ಟೀಲ್ ಪುನಶ್ಚೇತನ ಪ್ಯಾಕೇಜ್ ಘೋಷಿಸಿದ ಹಿನ್ನೆಲೆಯಲ್ಲಿ ವಿಶೇಷವಾಗಿ ಕೃತಜ್ಞತೆ ಸಲ್ಲಿಸಿದರು.

ಆರೋಪ ಹೊತ್ತವರು ನಿರೀಕ್ಷಣಾ ಜಾಮೀನು ಕೋರಿ ಅಸಾಧಾರಣ ಸಂದರ್ಭಗಳಲ್ಲಿ ಮಾತ್ರ ಹೈಕೋರ್ಟ್ ಮೊರೆ ಹೋಗಬೇಕೇ ವಿನಃ, ಇನ್ನುಳಿದಂತೆ ಸೆಷನ್ಸ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವುದು ಉತ್ತಮ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಮಂಗಳೂರು ನಗರ ಪೊಲೀಸ್ ಕಮೀಷನರ್ ಅನುಪಮ್ ಅಗರ್ವಾಲ್ ಅವರು ಬ್ಯಾಂಕ್ ಅಧಿಕಾರಿಗಳ ಸಭೆ ಕರೆದು ಸುರಕ್ಷತಾ ಕ್ರಮದ ಬಗ್ಗೆ ಸಲಹೆ ನೀಡಿದರು.

ಕಾವೇರಿ 2.0 ತಂತ್ರಾಂಶವನ್ನು ಈಗ ಸಂಪೂರ್ಣವಾಗಿ ಪುನಃಸ್ಥಾಪಿಸಲಾಗಿದೆ. ಮತ್ತು ಈ ತಂತ್ರಾಂಶ ಇದೀಗ ಎಂದಿನಂತೆ ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿದೆ" ಎಂದು ಕಂದಾಯ ಇಲಾಖೆ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

# ಮಜ್ಜಿಗೆ ಸಾರು



**ಬೇಕಾಗುವ ಪದಾರ್ಥಗಳು :**

ಮಜ್ಜಿಗೆ – 2 ಕಪ್
ಸಾಸಿವೆ– 1/2 ಚಮಚ
ಜೀರಿಗೆ – 1/2 ಚಮಚ
ಕಡ್ಲೆಬೇಳೆ – 1/2 ಚಮಚ
ಉದ್ದಿನಬೇಳೆ – 1/2 ಚಮಚ
ಒಣಮೆಣಸಿನಕಾಯಿ – 1 – 2
ಜಜ್ಜಿದ ಬೆಳ್ಳುಳ್ಳಿ – 4 – 5
ಹಸಿಮೆಣಸಿನಕಾಯಿ – 1 – 2
ಕರಿಬೇವು – 5 – 6
ಈರುಳ್ಳಿ – 1
ಹಚ್ಚಿದ ಶುಂಠಿ – 1/2 ಚಮಚ
ಅರಿಶಿನ – 2 ಚಿಟಿಕೆ
ಇಂಗು – ಸ್ವಲ್ಪ
ಕೊತ್ತಂಬರಿ ಸೊಪ್ಪು – 1 ಚಮಚ
ಉಪ್ಪು – ರುಚಿಗೆ
ತೆಂಗಿನ ಎಣ್ಣೆ – 2 ಚಮಚ

**ಮಾಡುವ ವಿಧಾನ :**

ಮೊದಲಿಗೆ ಒಂದು ಬಾಣಲೆಯಲ್ಲಿ ಎಣ್ಣೆ ಬಿಸಿ ಮಾಡಿ. 1/2 ಚಮಚ ಸಾಸಿವೆ ಮತ್ತು ½ ಚಮಚ ಜೀರಿಗೆ ಹಾಕಿ, ಸಾಸಿವೆ ಸಿಡಿದ ಮೇಲೆ, ಕಡ್ಲೆಬೇಳೆ, ಉದ್ದಿನಬೇಳೆ ಮತ್ತು ಚೂರು ಮಾಡಿದ ಒಣ ಮೆಣಸು ಸೇರಿಸಿ, ನಂತರ ಅದಕ್ಕೆ ಬೆಳ್ಳುಳ್ಳಿ, ಹಸಿಮೆಣಸು ಮತ್ತು ಕರಿಬೇವು ಹಾಕಿ ಹುರಿಯಬೇಕು. ನಂತರ ಹೆಚ್ಚಿದ ಈರುಳ್ಳಿ ಮತ್ತು ಶುಂಠಿ ಸೇರಿಸಿ, ಈರುಳ್ಳಿಯನ್ನು ಚೆನ್ನಾಗಿ ಹುರಿಯಬೇಕು. ಈಗ ಜೊತೆಯಲ್ಲಿ ಅರಿಶಿನ ಮತ್ತು ಇಂಗು ಸೇರಿಸಿ ಹುರಿಯಬೇಕು. ಕೊನೆಯಲ್ಲಿ ಕೊತ್ತಂಬರಿ ಸೊಪ್ಪು ಸೇರಿಸಿ ಒಲೆಯಿಂದ ಕೆಳಗಿಳಿಸಿ, ಬಿಸಿ ಆರಿದ ಮೇಲೆ, ಉಪ್ಪು ಬೆರೆಸಿದ ಮಜ್ಜಿಗೆ ಸೇರಿಸಿದರೆ ಆರೋಗ್ಯಕರ ವಾದ ಮತ್ತು ರುಚಿಕರವಾದ ಮಜ್ಜಿಗೆಸಾರು ಸವಿಯಲು ಸಿದ್ಧ.

# ಮಾನವ ಹಕ್ಕುಗಳ ಮಂಡಳಿಯಿಂದ ಅಮೇರಿಕಾ ಹೊರಗೆ !



ಅಮೆರಿಕ : 'ಅಮೆರಿಕ ಮೊದಲು' ಎಂಬ ತಮ್ಮ ಘೋಷಣೆಯ ಭಾಗವಾಗಿ ವಿಶ್ವಸಂಸ್ಥೆಯ ಆರೋಗ್ಯ ಸಂಸ್ಥೆಯಿಂದ (ಡಬ್ಲ್ಯೂಎಚ್‌ಒ) ಹೊರ ಬಂದಿದ್ದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಂದು ಮಹತ್ವದ ನಿರ್ಧಾರಕ್ಕೆ ಸಹಿ ಹಾಕಿದ್ದಾರೆ. ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯಿಂದ ಹೊರಕ್ಕೆ, ಪ್ಯಾಲೆಸ್ಟೈನ್ ನಿರಾಶ್ರಿತರ ಪರಿಹಾರ ಕಾರ್ಯಗಳಿಗೆ ನೀಡುತ್ತಿರುವ ಹಣ ಕಡಿತ ಮತ್ತು ಪರಮಾಣು ಒಪ್ಪಂದದಿಂದ ಹಿಂದೆ ಸರಿದಿರುವ ಇರಾನ್ ಮೇಲೆ ಆರ್ಥಿಕ ಒತ್ತಡ ಹೇರುವ ಕಾರ್ಯಕಾರಿ ಆದೇಶಕ್ಕೆ ಟ್ರಂಪ್ ಅಸ್ತು ಎಂದಿದ್ದಾಗಿ ಅಲ್ಲಿನ ಮಾಧ್ಯಮಗಳು ವರದಿ ಮಾಡಿವೆ.

# ಇರಾನ್‌ನಿಂದ ದೇಶೀಯ ಮೂರು ಉಪಗ್ರಹಗಳ ಅನಾವರಣ

ಟೆಹ್ರಾನ್: ಇರಾನ್ ತನ್ನ ರಾಷ್ಟ್ರೀಯ ಬಾಹ್ಯಾಕಾಶ ತಂತ್ರಜ್ಞಾನ ದಿನದ ನಿಮಿತ್ತ ರಾಜಧಾನಿ ಟೆಹ್ರಾನ್ ನಲ್ಲಿ ಭಾನುವಾರ ದೇಶೀಯವಾಗಿ ಅಭಿವೃದ್ಧಿಪಡಿಸಿದ ಮೂರು ಹೊಸ ಉಪಗ್ರಹಗಳನ್ನು ಅನಾವರಣಗೊಳಿಸಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ನವಕ್-1, ಪಾರ್ಸ್-2 ಮತ್ತು ಪಾರ್ಸ್-1ನ ಹೊಸ ಮಾದರಿಯ ಉಪಗ್ರಹಗಳನ್ನು ಅನಾವರಣಗೊಳಿಸಲಾಯಿತು ಎಂದು ವರದಿ ತಿಳಿಸಿದೆ.



# ಬಾಂಗ್ಲಾದೇಶಕ್ಕೆ ಭಾರತದಿಂದ ಮತ್ತೆ 16,000 ಟನ್ ಅಕ್ಕಿ



ಢಾಕಾ : ಕಳೆದ ವರ್ಷದ ಆಗಸ್ಟ್‌ನಲ್ಲಿ ಶೇಖ್ ಹಸೀನಾ ಅವರನ್ನು ಪ್ರಧಾನಿ ಹುದ್ದೆಯಿಂದ ಪದಚ್ಯುತಗೊಳಿಸಿದ ನಂತರ ಉಭಯ ದೇಶಗಳ ನಡುವೆ ಸಂಬಂಧ ಹದಗೆಟ್ಟಿದ್ದು, ಈ ನಡುವೆಯೂ ಭಾರತ ಬಾಂಗ್ಲಾದೇಶಕ್ಕೆ ಎರಡನೇ ಬಾರಿಗೆ ಇದೀಗ ಸಾವಿರಾರು ಟನ್ ಅಕ್ಕಿ ಕಳುಹಿಸಿಕೊಟ್ಟಿದೆ. ಅಪಾರ ಪ್ರಮಾಣದ ಅಕ್ಕಿ ಹೊತ್ತ ಎರಡು ಹಡಗುಗಳು ಶನಿವಾರ ಬಾಂಗ್ಲಾದ ಮೊಂಗ್ಲಾ ಬಂದರು ತಲುಪಿದವು. "ಎರಡು ಬೃಹತ್ ಗಾತ್ರದ ಹಡಗುಗಳು 16,400 ಟನ್ ಅಕ್ಕಿ ಹೊತ್ತು ಇಲ್ಲಿನ ಬಂದರು ತಲುಪಿವೆ" ಎಂದು ಢಾಕಾ ಟ್ರಿಬ್ಯೂನ್ ದಿನ ಪತ್ರಿಕೆ ವರದಿ ಮಾಡಿದೆ.

# ಪಾಕಿಸ್ಥಾನದ ಚೇತರಿಸಿಕೊಳ್ಳದ ಆರ್ಥಿಕತೆ :ಆತಂಕದಲ್ಲಿ ಸರ್ಕಾರ

ಇಸ್ಲಾಮಾಬಾದ್: ಪ್ರಸಕ್ತ ಹಣಕಾಸು ವರ್ಷದ ಮೊದಲ ಏಳು ತಿಂಗಳಲ್ಲಿ ದೇಶದ ಕೇಂದ್ರೀಯ ಬ್ಯಾಂಕ್ ಬಡ್ಡಿದರದಲ್ಲಿ ಶೇ.10ರಷ್ಟು ಕಡಿತ ಮಾಡಿದ್ದರೂ ಪಾಕಿಸ್ಥಾನವು ಆರ್ಥಿಕ ಬೆಳವಣಿಗೆಯನ್ನು ಪ್ರಾರಂಭಿಸಲು ವಿಫಲವಾಗಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ. ಬಡ್ಡಿ ದರದಲ್ಲಿ ತೀವ್ರ ಕುಸಿತದ ಹೊರತಾಗಿಯೂ, ಪ್ರಸಕ್ತ ಹಣಕಾಸು ವರ್ಷದ ಮೊದಲ ಏಳು ತಿಂಗಳಲ್ಲಿ ಪಾಕಿಸ್ಥಾನದ ಆರ್ಥಿಕ ಬೆಳವಣಿಗೆಯು ನಕಾರಾತ್ಮಕವಾಗಿಯೇ ಉಳಿದಿದೆ



ಎಂದು ಡಾನ್ ಪತ್ರಿಕೆ ವರದಿ ಮಾಡಿದೆ.

# ಭಾರತ–ಇಸ್ರೇಲ್ ಮೈತ್ರಿ ಯೋಜನೆ




ಇಸ್ರೇಲ್: ಭಾರತ –ಇಸ್ರೇಲ್ ಮೈತ್ರಿ ಯೋಜನೆಯಡಿಯಲ್ಲಿ ಭಾರತದಿಂದ ಮೊದಲ ಗಣ್ಯ ವ್ಯಕ್ತಿಗಳ ನಿಯೋಗ ಇಸ್ರೇಲ್‌ನ ಸರ್ಕಾರೇತರ ಸಂಸ್ಥೆ ಶರಕಾ ಮೂಲಕ ಈ ವಾರದ ಮೊದಲಲ್ಲಿ ಇಸ್ರೇಲ್‌ಗೆ ಕರೆಸಿಕೊಂಡಿತ್ತು. ಇಸ್ರೇಲಿ ಸಮಾಜದ ಬಗೆಗಿನ ಭಾರತೀಯರ ಅಭಿಪ್ರಾಯ ಮತ್ತು ವಾಸ್ತವತೆಯನ್ನು ಅರಿಯಲು, ತಿಳಿವಳಿಕೆಯನ್ನು ಉತ್ತೇಜಿಸಲು ಈ ಯೋಜನೆ ಕೈಗೊಳ್ಳಲಾಗಿದೆ. ಈ ಮೂಲಕ ಭಾರತ–ಇಸ್ರೇಲ್ ಸಂಬಂಧವು ಮತ್ತಷ್ಟು ಬಲಗೊಳ್ಳಲು ಈ ಭೇಟಿ ಸಹಾಯವಾಗಲಿದೆ.

# ಭಾರತಕ್ಕೆ 4–1ರಲ್ಲಿ ಇಂಗ್ಲೆಂಡ್ ವಿರುದ್ಧ ಸರಣಿ ಗೆಲುವು

ಮಹಾರಾಷ್ಟ್ರ : ಸಿಡಿಲ ಮರಿ ಅಭಿಷೇಕ್ ಶರ್ಮಾರ ಅಬ್ಬರದ ಬ್ಯಾಟಿಂಗ್‌ನಿಂದಾಗಿ ಇಂಗ್ಲೆಂಡ್ ವಿರುದ್ಧದ ಐದನೇ ಮತ್ತು ಕೊನೆಯ ಟಿ20 ಪಂದ್ಯದಲ್ಲಿ ಭಾರತ ತಂಡ 150 ರನ್‌ಗಳಿಂದ ಗೆಲುವು ಸಾಧಿಸಿತು. ಇದರಿಂದ ಸರಣಿಯನ್ನು 4–1ರಲ್ಲಿ ತನ್ನದಾಗಿಸಿಕೊಂಡಿತು. ಮೊದಲು ಬ್ಯಾಟ್ ಮಾಡಿದ ಭಾರತ ತಂಡ 9 ವಿಕೆಟ್‌ಗೆ 247ರನ್ ಬೃಹತ್ ಮೊತ್ತ ದಾಖಲಿಸಿತು. ಇದಕ್ಕುತ್ತರವಾಗಿ ಆಂಗ್ಲ ಪಡೆಯು ಬ್ಯಾಟಿಂಗ್ ವೈಫಲ್ಯದಿಂದ 10.3 ಓವರ್



ಗಳಲ್ಲಿ 97 ರನ್‌ಗೆ ಸರ್ವಪತನ ಕಂಡು ಹೀನಾಯ ಸೋಲೊಪ್ಪಿಕೊಂಡಿತು.

# ಅಂಡರ್ 19 ಫೈನಲ್ ಪಂದ್ಯದಲ್ಲಿ ಭಾರತ ಜಯಭೇರಿ



ಹೈದೆರಾಬಾದ್ : ದಕ್ಷಿಣ ಆಫ್ರಿಕಾ ವಿರುದ್ಧ ನಡೆದ ಮಹಿಳಾ ಅಂಡರ್ 19 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಭಾರತೀಯ ವನಿತೆಯರು 9 ವಿಕೆಟ್‌ಗಳಿಂದ ಜಯಭೇರಿ ಬಾರಿಸಿದ್ದಾರೆ. ಇದರೊಂದಿಗೆ ಸತತ ಎರಡನೇ ಬಾರಿಗೆ ವಿಶ್ವಕಪ್ ಮುಡಿಗೇರಿಸಿಕೊಂಡಿದ್ದಾರೆ. ದಕ್ಷಿಣ ಆಫ್ರಿಕಾ ನೀಡಿದ 82 ರನ್‌ಗಳ ಸಮಾನ್ಯ ಗುರಿಯನ್ನು ಬೆನ್ನತ್ತಿದ ಭಾರತೀಯ ವನಿತೆಯರು 11.2 ಓವರ್‌ಗಳಲ್ಲೇ ಗುರಿಯನ್ನು ತಲುಪುವಲ್ಲಿ ಯಶಸ್ವಿಯಾದರು.

# ಭಾರತ–ಪಾಕಿಸ್ಥಾನ ಪಂದ್ಯ: ಕೆಲವೇ ನಿಮಿಷಗಳಲ್ಲಿ ಟಿಕೆಟ್ ಸೋಲ್ಡೌಟ್

ಹೈದರಬಾದ್ : ಭಾರತ ಮತ್ತು ಪಾಕಿಸ್ತಾನ ನಡುವಿನ ಪಂದ್ಯಕ್ಕಿರುವ ಕ್ರೇಜ್ ಬಗ್ಗೆ ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ. ಉಭಯ ತಂಡಗಳ ನಡುವೆ ದ್ವಿಪಕ್ಷೀಯ ಸರಣಿ ರದ್ದಾಗಿ ವರ್ಷಗಳೇ ಕಳೆದಿವೆ. 2023ರಲ್ಲಿ ನಡೆದ ಐಸಿಸಿ ಏಕದಿನ ವಿಶ್ವಕಪ್‌ನಲ್ಲಿ ಉಭಯ ತಂಡಗಳು ಎದುರುಬದುರಾಗಿದ್ದವು. ಟಿಕೆಟ್ ರಿಲೀಸ್ ಆದ ಕೆಲವೇ ನಿಮಿಷಗಳಲ್ಲಿ ಸೋಲ್ಡೌಟ್ ಆಗಿದೆ, ಇದರಿಂದ ಈ ಪಂದ್ಯದ ಕುತೂಹಲ




ಎಷ್ಟಿದೆ ಎಂದು ತಿಳಿಯುತ್ತಿದೆ.

# ರೋಗಿಗಳಿಗೆ ಘನತೆಯಿಂದ ಸಾಯುವ ಹಕ್ಕು ಜಾರಿ




ಬೆಂಗಳೂರು: ತೀವ್ರ ಅನಾರೋಗ್ಯಕ್ಕೊಳಗಾಗಿ ಯಾವುದೇ ಚಿಕಿತ್ಸೆ ನೀಡಿದರೂ ಗುಣಮುಖರಾಗಲು ಸಾಧ್ಯವೇ ಇಲ್ಲದ ರೋಗಿಗಳಿಗೆ ಘನತೆಯಿಂದ ಸಾಯುವ ಹಕ್ಕನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಸುಪ್ರೀಂಕೋರ್ಟ್‌ನ ಆದೇಶದಂತೆ ಕರ್ನಾಟಕದಲ್ಲಿ ಈ ಐತಿಹಾಸಿಕ ಕಾನೂನು ಜಾರಿ ಮಾಡಲಾಗಿದೆ. ಮಾರಣಾಂತಿಕ ಖಾಯಿಲೆಯಿಂದ ಬಳಲುತ್ತಿದ್ದು, ಚೇತರಿಕೆಯೇ ಕಾಣದೆ ಜೀವನಪೂರ್ತಿ ಸಂಕಷ್ಟ ಅನುಭವಿಸುವ ಸ್ಥಿತಿಯಲ್ಲಿ ಇರುವವರಿಗೆ ಈ ಅವಕಾಶ ಕಲ್ಪಿಸಲಾಗಿದೆ. ದಯಾಮರಣಕ್ಕೆ ಅವಕಾಶ ನೀಡುವುದನ್ನು ನಿರ್ಧರಿಸಲು 3 ವೈದ್ಯರನ್ನು ಒಳಗೊಂಡ 2ಬೋರ್ಡ್‌ಗಳ ಸ್ಥಾಪನೆ ಮಾಡುವ ಬಗ್ಗೆ ಆದೇಶದಲ್ಲಿ ಉಲ್ಲೇಖಿಸಲಾಗಿದೆ.

# ಶಿಮುಲ್‌ನಿಂದ ಪ್ರತಿ ಕೆಜಿ ಹಾಲಿಗೆ 2 ರೂ ಹೆಚ್ಚಳ

ಶಿವಮೊಗ್ಗ: ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಹಾಲು ಒಕ್ಕೂಟವು ಹಾಲು ಉತ್ಪಾದಕ ರೈತರಿಂದ ಖರೀದಿ ಮಾಡುವ ಪ್ರತಿ ಕೆಜಿ ಹಾಲಿಗೆ 2 ರೂ ಹೆಚ್ಚಳ ಮಾಡಿದೆ. ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಿ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ರೈತರಿಂದ ಖರೀದಿಸುವ ಹಾಲು ಖರೀದಿ



ದರವನ್ನು ಪ್ರತಿ ಕೆಜಿಗೆ ರೂ. 2.00 ಹೆಚ್ಚಿಸಿ ಪರಿಷ್ಕರಿಸಲು ಒಕ್ಕೂಟದ ಅಧ್ಯಕ್ಷ ಹೆಚ್.ಎನ್. ವಿದ್ಯಾಧರ ಅವರ ಅಧ್ಯಕ್ಷತೆಯಲ್ಲಿ ಜ.31 ರಂದು ನಡೆದ ಒಕ್ಕೂಟದ 453ನೇ ಆಡಳಿತ ಮಂಡಳಿ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಶಿಮೂಲ್ ತನ್ನ ಒಕ್ಕೂಟದ ಆರ್ಥಿಕ ಪರಿಸ್ಥಿತಿ ಅವಲೋಕಿಸಿ ಹಾಲು ಖರೀದಿ ದರವನ್ನುಪರಿಷ್ಕರಿಸುತ್ತಿದೆ.


# ಪ್ರತ್ಯೇಕ ಪಾಲಿಕೆ ವಿರುದ್ಧ ಧಾರವಾಡ ಮಂದಿ ಆಕ್ಷೇಪ

ಧಾರವಾಡ: ಸುದೀರ್ಘ ಹೋರಾಟದ ಫಲವಾಗಿ ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ರಚನೆಗೆ ರಾಜ್ಯ ಸರ್ಕಾರ ಅಸ್ತು ಅಂದಿದೆ. ಇನ್ನೇನು ಕಾರ್ಯಾರಂಭಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎನ್ನುವಷ್ಟರಲ್ಲಿ ಹೊಸ ಪಾಲಿಕೆ ಸೇರಲು ಕೆಲ ಗ್ರಾಮಸ್ಥರಿಂದ ವಿರೋಧ ವ್ಯಕ್ತವಾಗಿದೆ. ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ 82 ವಾರ್ಡ್‌ಗಳನ್ನು ವಿಂಗಡಿಸಿ, 26ವಾರ್ಡ್ ಧಾರವಾಡಕ್ಕೆ ನೀಡಿ ಪ್ರತ್ಯೇಕ ಪಾಲಿಕೆ ಘೋಷಿಸಲಾಗಿದೆ. ಧಾರವಾಡ ಸುತ್ತಮುತ್ತಲಿನ ಗ್ರಾಮಗಳನ್ನೂ ಹೊಸ ಪಾಲಿಕೆಗೆ ಸೇರಿಸಿ ಬಿಡುತ್ತಾರೆ ಎಂಬ ಗುಲ್ಲೆದ್ದಿದೆ. ಇದರಿಂದ ರೊಚ್ಚಿಗೆದ್ದಿರುವ ನರೇಂದ್ರ, ಮುಮ್ಮಿ ಗಟ್ಟಿ ಹಾಗೂ ಗ್ರಾಮದ ಜನರು ಹೋರಾಟಕ್ಕೆ ಇಳಿದಿದ್ದಾರೆ.



# ಅರಣ್ಯ ಹಕ್ಕು ಅರ್ಜಿ ಪರಿಶೀಲನೆಗೆ ಸಚಿವ ಖಂಡ್ರೆ ಸೂಚನೆ

ಬೆಂಗಳೂರು : ಅರಣ್ಯ ಹಕ್ಕು ಕಾಯ್ದೆ ಅಡಿ ಸೌಲಭ್ಯಕ್ಕಾಗಿ ಪಟ್ಟಾ ಜಮೀನು ಹೊಂದಿರುವವರೂ ಅರ್ಜಿ ಹಾಕಿದ್ದರೆ ಪರಿಶೀಲಿಸಿ ಕೈಬಿಡುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದರು. ಈ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸೂಚನೆ ನೀಡಿರುವ ಸಚಿವರು, ಅರಣ್ಯ ಹಕ್ಕು ಕಾಯ್ದೆ




ಅಡಿ ಅರ್ಹ ಫಲಾನುಭವಿಗಳಿಗೆ ಅನ್ಯಾಯವಾಗದಂತೆ ರಾಜ್ಯ ಸರ್ಕಾರ ಕ್ರಮ ವಹಿಸಿದೆ ಎಂದು ತಿಳಿಸಿದ್ದಾರೆ. ಅರಣ್ಯ ಹಕ್ಕು ಕಾಯ್ದೆ ಅಡಿ ಇನ್ನೂ ಸಾವಿರಾರು ಅರ್ಜಿಗಳು ಇತ್ಯರ್ಥವಾಗದೆ ಬಾಕಿ ಉಳಿದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಸಚಿವರು ತಿಳಿಸಿದರು.

# ಮಾರ್ಗಸೂಚಿ ರಚಿಸಲು KSLUಗೆ ಹೈಕೋರ್ಟ್ ಸೂಚನೆ




ಬೆಂಗಳೂರು: ಪರೀಕ್ಷಾ ಅಕ್ರಮಗಳನ್ನು ತಡೆಯುವುದು ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿ ರಕ್ಷಣೆ ಮಾಡುವ ಸಂಬಂಧ ಹೊಸ ಮಾರ್ಗಸೂಚಿಗಳನ್ನು ರಚಿಸುವಂತೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ (ಕೆಎಸ್‌ಎಲ್‌ಯು) ಹೈಕೋರ್ಟ್ ನಿರ್ದೇಶನ ನೀಡಿದೆ. ಕಾನೂನು ವಿದ್ಯಾರ್ಥಿ ಸಲ್ಲಿಸಿದ್ದ ಅರ್ಜಿ ಆಲಿಸಿದ ಏಕ ಸದಸ್ಯಪೀಠ ಈ ಆದೇಶ ನೀಡಿದೆ. ಹೊಸ ಮಾರ್ಗ ಸೂಚಿಯಲ್ಲಿ ಪರೀಕ್ಷಾ ಮೇಲ್ವಿಚಾರಕರು ಬಾಡಿ ವೋರ್ನ್ ಕ್ಯಾಮರಾ ಧರಿಸಬೇಕು. ಪಾರದರ್ಶಕ ರೀತಿಯಲ್ಲಿ ಪರೀಕ್ಷೆಗಳನ್ನು ನಡೆಸಲು ಗರಿಷ್ಠ ಪ್ರಮಾಣದಲ್ಲಿ ತಂತ್ರಜ್ಞಾನ ಬಳಸಿಕೊಳ್ಳಬೇಕು, ಸಿಸಿ ಕ್ಯಾಮರಾ ಅಳವಡಿಸುವ ಅಂಶಗಳಿರಬೇಕು ಎಂದು ಪೀಠಸೂಚಿಸಿದೆ.

# ಆರ್‌ಬಿಐ ಮಾರ್ಗಸೂಚಿ ಪಾಲಿಸದ ಮೈಕ್ರೋ ಫೈನಾನ್ಸ್

ಕಾರವಾರ: "ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೈಕ್ರೋ ಫೈನಾನ್ಸ್‌ಗಳು, ಲೇವಾದೇವಿ ವ್ಯವಹಾರಸ್ಥರು, ಮೈಕ್ರೋ ಫೈನಾನ್ಸ್ ಹಣಕಾಸು ಸಂಸ್ಥೆಗಳು ಭಾರತೀಯ ರಿಸರ್ವ್ ಬ್ಯಾಂಕ್‌ನ ಮಾರ್ಗದರ್ಶನಗಳು ಹಾಗೂ ನಿಯಮಗಳನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ



ಎಚ್ಚರಿಕೆ ನೀಡಿದ್ದಾರೆ. "ಇತ್ತೀಚಿನ ದಿನಗಳಲ್ಲಿ ರಾಜ್ಯಾದ್ಯಂತ ಮೈಕ್ರೋ ಫೈನಾನ್ಸ್‌ಗಳಲ್ಲಿ ಸಾಲ ಪಡೆದ ಗ್ರಾಹಕರಿಗೆ ಕಿರುಕುಳದಂತಹ ಪ್ರಕರಣಗಳು ಅಧಿಕವಾಗಿವೆ. ಇದಕ್ಕೆಲ್ಲ ಕಾರಣ ಆರ್‌ಬಿಐನ ಮಾರ್ಗಸೂಚಿಗಳು ಹಾಗೂ ನಿಯಮಗಳನ್ನು ಪಾಲಿಸದೇ ಇರುವುದು ಮೇಲ್ನೋಟಕ್ಕೆ ಕಂಡು ಬಂದಿದೆ" ಎಂದರು.


# ಮಾಲಿನ್ಯ ನಿಯಂತ್ರಣಕ್ಕೆ ಎಲೆಕ್ಟ್ರಿಕ್ ವಾಹನಗಳಿಗೆ ಮಾತ್ರ ಅನುಮತಿ ಸೂಕ್ತ

ಬೆಂಗಳೂರು: ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯ ನಿಯಂತ್ರಿಸಲು ಸಾರ್ವಜನಿಕ ಸಾರಿಗೆ ಬಳಕೆ ಪ್ರೋತ್ಸಾಹಿಸುವುದರ ಜೊತೆಗೆ ಭವಿಷ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳಿಗೆ (ಇವಿ) ಮಾತ್ರ ಅನುಮತಿ ನೀಡುವುದು ಸೂಕ್ತ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ಬರೆದಿರುವ ಸಚಿವ ದಿನೇಶ್ ಗುಂಡೂರಾ ವ್, ಇದು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಹೇಳಿದ್ದಾರೆ. ವಾಯು ಮಾಲಿನ್ಯದಿಂದ ನವದೆಹಲಿಯಂತೆ ಬೆಂಗಳೂರು ನಗರ ಸಹ ಕುಖ್ಯಾತಗೊಳ್ಳುವ ಪೂರ್ವದಲ್ಲಿಯೇ ನಾವು ಎಚ್ಚೆತ್ತುಕೊಳ್ಳಬೇಕು ಎಂದಿದ್ದಾರೆ.





# ಹೈಕೋರ್ಟ್ ಮೊರೆಹೋದ ವಿಜಯ್ ಮಲ್ಯ

ಬೆಂಗಳೂರು : ತನ್ನ ಮಾಲೀಕತ್ವದ ಕಿಂಗ್ ಫಿಷರ್ ಏರ್‌ಲೈನ್ಸ್ ಹಾಗೂ ಅದರ ಯುನೈಟೆಡ್ ಬ್ರೂವರೀಸ್‌ನ ದಿವಾಳಿ ಪ್ರಕ್ರಿಯೆಯಲ್ಲಿ ಬ್ಯಾಂಕುಗಳು ವಸೂಲಿ ಮಾಡಿರುವ ಹಣಕಾಸಿನ ಲೆಕ್ಕ ಪತ್ರಗಳನ್ನು ಒದಗಿಸುವಂತೆ ಕೋರಿ ಆರ್ಥಿಕ ಅಪರಾಧಿಯಾಗಿರುವ ಡಾ. ವಿಜಯ್ ಮಲ್ಯ ಕೋರ್ಟ್ ಮೊರೆ ಹೋಗಿದ್ದಾರೆ. ತಮ್ಮ



ಕಂಪೆನಿಗಳ ದಿವಾಳಿ ಪ್ರಕ್ರಿಯೆಯಲ್ಲಿ ಬ್ಯಾಂಕುಗಳು ವಸೂಲಿ ಮಾಡಿರುವ ಸಾಲದ ಮೊತ್ತ ಹಾಗೂ ಬಡ್ಡಿಯ ವಿವರ ನೀಡಲು ನಿರ್ದೇಶನ ನೀಡಬೇಕು ಎಂದು ಮಲ್ಯ ದಲ್ಜಿತ್ ಮಹಲ್ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ಬ್ಯಾಂಕುಗಳಿಗೆ ನೋಟಿಸ್ ಜಾರಿ ಮಾಡಿದೆ.

# ಸಾಧನೆಗಳ ಕುರಿತು ಸುದೀರ್ಘ ಭಾಷಣ ಮಾಡಿದ ಮೋದಿ




ನವದೆಹಲಿ: "ನಮ್ಮ ಸರ್ಕಾರ ದೇಶದ ಕಳೆದ 10 ವರ್ಷಗಳಲ್ಲಿ 25 ಕೋಟಿ ಜನರನ್ನು ಬಡತನದಿಂದ ಮೇಲೆತ್ತಿದೆ" ಎಂದು ಪ್ರಧಾನಿ ನರೇಂದ್ರ ಮೋದಿ ಲೋಕಸಭೆಯಲ್ಲಿ ಮಾಡಿದ ಭಾಷಣದಲ್ಲಿ ತಿಳಿಸಿದರು. "ನಮ್ಮ ಸರ್ಕಾರ ಅನೇಕ ಯೋಜನೆಗಳಲ್ಲಿ ಪೋಲಾಗುತ್ತಿದ್ದ ಅಪಾರ ಪ್ರಮಾಣದ ಹಣ ಉಳಿಸಿದೆ. ಆ ಹಣವನ್ನು ನಾವು ಶೀಶ್ ಮಹಲ್ ಕಟ್ಟಲು ಬಳಸಿಲ್ಲ" ಎಂದು ಕೇಜ್ರಿವಾಲ್ ಅವರಿಗೆ ಕೊಟ್ಟರು. ದೆಹಲಿ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ಬಂಗಲೆ ಪುನರ್ ನಿರ್ಮಾಣದ ವಿಚಾರವನ್ನು ಪರೋಕ್ಷವಾಗಿ ಮೋದಿ ಪ್ರಸ್ತಾಪಿಸಿದರು. "ನಾವು ಸುಳ್ಳು ಭರವಸೆಗಳನ್ನು ನೀಡಿಲ್ಲ. ವಾಸ್ತವವಾಗಿ ಜನರ ಅಭಿವೃದ್ಧಿ ಮಾಡಿದ್ದೇವೆ" ಎಂದು ಪ್ರಧಾನಿ ಮೋದಿ ತಿಳಿಸಿದರು.

# ವಿವಿಧ ನಿಷೇಧಿತ ಸಂಘಟನೆಗೆ ಸೇರಿದ 9 ಉಗ್ರರ ಬಂಧನ


ಮಣಿಪುರ: ವಿವಿಧ ನಿಷೇಧಿತ ಸಂಘಟನೆಗೆ ಸೇರಿದ್ದ 9 ಉಗ್ರರನ್ನು ಪೂರ್ವ ಮತ್ತು ಪಶ್ಚಿಮ ಇಂಫಾಲ ಹಾಗೂ ಕಕ್ಚಿಂಗ್ ಮತ್ತು ತೌಬಲ್ ಜಿಲ್ಲೆಗಳಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಇಂಫಾಲ್ ಪೂರ್ವ ಜಿಲ್ಲೆಯ ಮಂತ್ರಿಪುಖ್ರಿ ಠಾಕುರ್ಬರಿ ಪ್ರದೇಶ



ದಿಂದ ಕಾಂಗ್ಲೇಪಕ್ ಕಮ್ಯುನಿಸ್ಟ್ ಪಕ್ಷದ (ಸಿಟಿ ಮೈತೆ) ಐವರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಬಂಧಿತರಿಂದ 9ಎಂಎಂಪಿಸ್ತೂಲ್, ಮ್ಯಾಗಜೀನ್, 11 ಜೀವಂತ ಗುಂಡುಗಳು, ಎರಡು ಹ್ಯಾಂಡ್ ಗ್ರೆನೇಡ್‌ಗಳು ಮತ್ತು 3 ಮೊಬೈಲ್ ಫೋನನ್ನು ವಶಪಡಿಸಿಕೊಳ್ಳಲಾಗಿದೆ.

# ವಕ್ಫ್ ಜೆಪಿಸಿ ಸದಸ್ಯರ ಎಲ್ಲ ದೂರು ಮತ್ತು ಅಭಿಪ್ರಾಯ

ನವದೆಹಲಿ: ವಕ್ಫ್ (ತಿದ್ದುಪಡಿ) ಮಸೂದೆ, 2024ರ ಕುರಿತ ಜಂಟಿ ಸಂಸದೀಯ ಸಮಿತಿಯ (ಜೆಪಿಸಿ) ವರದಿಯಲ್ಲಿ ಪ್ರತಿಪಕ್ಷಗಳ ಸಂಸದರು ಸಲ್ಲಿಸಿದ ಎಲ್ಲಾ ದೂರು ಹಾಗೂ ತಿದ್ದುಪಡಿಗಳನ್ನು ಸೇರಿಸಲಾಗಿದೆ ಎಂದು ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ಹೇಳಿದ್ದಾರೆ. ತಮ್ಮ ದೂರುಗಳಿಗೆ ಸರ್ಕಾರ ಸ್ಪಂದಿಸಿಲ್ಲ ಎಂಬ ಅಸಾದುದ್ದೀನ್ ಓವೈಸಿ, ಸಂಜಯ್ ಸಿಂಗ್ ಹಾಗೂ ಇನ್ನೂ ಕೆಲ ನಾಯಕರ ಆರೋಪಗಳನ್ನು ಅವರು ತಳ್ಳಿ ಹಾಕಿದರು. ಅವರು ಕ್ಷುಲ್ಲಕ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಲಿಖಿತವಾಗಿ ಸಲ್ಲಿಸಿದ ದೂರುಗಳು ಮತ್ತು ತಿದ್ದುಪಡಿಗಳನ್ನು ವರದಿಯಲ್ಲಿ ಸೇರಿಸಲಾಗಿದೆ ಎಂದು ನಾನು ಸ್ಪಷ್ಟಪಡಿಸಲು ಬಯಸುತ್ತೇನೆ." ಎಂದರು.




# ರಕ್ಷಣಾ ಇಲಾಖೆಗೆ ಬಜೆಟ್ಟಿನಲ್ಲಿ ಶೇ 9.53ರಷ್ಟು ಹೆಚ್ಚಳ

ನವದೆಹಲಿ : ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2025–26ರ ಬಜೆಟ್ ಭಾಷಣದಲ್ಲಿ ರಕ್ಷಣೆಗಾಗಿ 6,81,210 ಕೋಟಿ ರೂ ಮೀಸಲು ಇಟ್ಟಿದ್ದಾರೆ. ಇದು ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ 9.53ರಷ್ಟು



ಹೆಚ್ಚಳವಾಗಿದೆ. ಪ್ರೆಸ್ ಇನ್ಫಾರ್ಮೇಶನ್ ಬ್ಯೂರೋ ಈ ಬಾರಿಯ ಬಜೆಟ್ ಶ್ಲಾಘಿಸಿದೆ. ಈ ಮೀಸಲು, ಈ ವರ್ಷದಲ್ಲಿ ಯೋಜಿಸಲಾದ ಪ್ರಮುಖ ಯೋಜನೆಗಳ ಮುಂದುವರಿಕೆ ನೆರವು ನೀಡಲಿದೆ ಎಂದು ಅದು ವಿಶ್ಲೇಷಿಸಿದೆ.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರಕ್ಕೆ ರಾಗಿಣಿ ತಯಾರಿ

'ಸರ್ಕಾರಿ ನ್ಯಾಯಬೆಲೆ ಅಂಗಡಿ' ಹೀಗೊಂದು ಹೆಸರಿನಲ್ಲಿ ಕನ್ನಡದಲ್ಲಿ ಚಿತ್ರವೊಂದು ತೆರೆಗೆ ಬರಲು ತಯಾರಾಗುತ್ತಿದೆ. ಕನ್ನಡ ಚಿತ್ರರಂಗದಲ್ಲಿ ಇಲ್ಲಿಯವರೆಗೆ ಹೆಚ್ಚಾಗಿ ಗ್ಲಾಮರಸ್ ಪಾತ್ರಗಳಲ್ಲಿ ಮಿಂಚಿದ್ದ ನಟಿ ರಾಗಿಣಿ ದ್ವಿವೇದಿ, 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದಲ್ಲಿ ಪಕ್ಕಾ ಹಳ್ಳಿ ಹುಡುಗಿಯ ಪಾತ್ರದಲ್ಲಿ ಪ್ರೇಕ್ಷಕರ ಮುಂದೆ ಬರುವ ತಯಾರಿಯಲ್ಲಿದ್ದಾರೆ. ಈಗಾಗಲೇ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ಬಹುತೇಕ ಸ್ಕ್ರಿಪ್ಟ್ ಕಾರ್ಯಗಳನ್ನು ಪೂರ್ಣಗೊಂಡಿದ್ದು, ಇತ್ತೀಚೆಗಷ್ಟೇ ಚಿತ್ರತಂಡ ಸಿನೆಮಾದ ಟೈಟಲ್ ಅನ್ನು ಬಿಡುಗಡೆಗೊಳಿಸಿತ್ತು. ಇದೀಗ ಚಿತ್ರತಂಡ, ಹಾಡುಗಳ ಧ್ವನಿಮುದ್ರಣ ಆರಂಭಿಸುವ ಮೂಲಕ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ಪ್ರೊಡಕ್ಷನ್ ಕಾರ್ಯಗಳಿಗೆ ಚಾಲನೆ ನೀಡಿದೆ. ಬೆಂಗಳೂರಿನ ವಿಜಯನಗರದಲ್ಲಿರುವ ಆದಿ ಚುಂಚನಗಿರಿ ಶಾಖಾ ಮಠದಲ್ಲಿ ನಡೆದ ಸಮಾರಂಭದಲ್ಲಿ, ಸಂಗೀತ ನಿರ್ದೇಶಕ ಅನಂತ್ ಆರ್ಯನ್ ಸಂಗೀತ ಸಂಯೋಜನೆಯಲ್ಲಿ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ಹಾಡುಗಳ ಮುದ್ರಣ ಕಾರ್ಯವನ್ನು ಆರಂಭಿಸಲಾಯಿತು. ಈ ವೇಳೆ ಚಿತ್ರದ ನಾಯಕ ನಟ ರಾಗಿಣಿ ದ್ವಿವೇದಿ, 'ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘ'ದ ಅಧ್ಯಕ್ಷ ಟಿ. ಕೃಷ್ಣಪ್ಪ, ನಟ ಗೀತಪ್ರಿಯ, ನಿರ್ಮಾಪಕಿಯಾದ ತೇಜು ಮೂರ್ತಿ, ಎಸ್. ಪದ್ಮಾವತಿ ಚಂದ್ರಶೇಖರ್, ಹಿರಿಯ ನಿರ್ಮಾಪಕರಾದ ಭಾ.ಮ. ಹರೀಶ್, ಭಾ.ಮ. ಗಿರೀಶ್, ಹಿರಿಯ ನಿರ್ದೇಶಕ ಬಿ. ರಾಮಮೂರ್ತಿ, 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ನಿರ್ದೇಶಕ ಸಾತ್ವಿಕ್ ಪವನ್ ಕುಮಾರ್ ಸೇರಿದಂತೆ ಚಿತ್ರರಂಗದ ಅನೇಕ ಗಣ್ಯರು ಮತ್ತು ಚಿತ್ರದ ಕಲಾವಿದರು, ತಂತ್ರಜ್ಞರು ಹಾಜರಿದ್ದರು. ಇದೇ ವೇಳೆ ಮಾತನಾಡಿದ ನಟಿ ರಾಗಿಣಿ ದ್ವಿವೇದಿ, 'ಇಲ್ಲಿಯವರೆಗೆ ನಾನು ಮಾಡಿರುವ ಪಾತ್ರಗಳಿಗಿಂತ ಸಂಪೂರ್ಣ ವಿಭಿನ್ನವಾದ ಕಥೆ ಮತ್ತು ಪಾತ್ರ ಈ ಸಿನಿಮಾದಲ್ಲಿದೆ. ಇಡೀ ಚಿತ್ರದ ಕಥೆ ನನ್ನ ಪಾತ್ರದ ಸುತ್ತ ನಡೆಯುತ್ತದೆ. ಇಂದಿನ ಸಮಾಜದಲ್ಲಿ ಆಹಾರ ವಿತರಣೆಯಲ್ಲಿ ಏನೆಲ್ಲಾ ನಡೆಯುತ್ತದೆ ಎಂಬುದನ್ನು ಈ ಸಿನಿಮಾದಲ್ಲಿ ಹೇಳಲಾಗುತ್ತಿದೆ. ನಮಗೆ ಗೊತ್ತಿಲ್ಲದ ಶಾಕಿಂಗ್ ಎನಿಸುವಂಥ ಅನೇಕ ವಿಷಯಗಳು ಈ ಸಿನೆಮಾದಲ್ಲಿದೆ. ನನಗೂ ಕೂಡ ಈ ಸಿನಿಮಾದ ಕಥೆ ಮತ್ತು ಪಾತ್ರದ ಮೇಲೆ ಸಾಕಷ್ಟು ನಿರೀಕ್ಷೆಯಿದೆ. ನನ್ನ ಸಿನಿಮಾ ಕೆರಿಯರ್‌ನಲ್ಲಿ ನಿಜವಾಗಿಯೂ ಇದೊಂದು ವಿಭಿನ್ನ ಸಿನೆಮಾವಾಗಲಿದೆ ಎಂಬ ನಂಬಿಕೆಯಿದೆ' ಎಂದರು. 'ಜಯಶಂಕರ ಟಾಕೀಸ್' ಬ್ಯಾನರಿನಲ್ಲಿ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರವನ್ನು ತೇಜುಮೂರ್ತಿ ಮತ್ತು ಎಸ್. ಪದ್ಮಾವತಿ ಚಂದ್ರಶೇಖರ್ ಜಂಟಿಯಾಗಿ ನಿರ್ಮಾಣ ಮಾಡುತ್ತಿದ್ದಾರೆ. ಹಿರಿಯ ನಿರ್ದೇಶಕ ಬಿ. ರಾಮಮೂರ್ತಿ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಮತ್ತು ಸಂಭಾಷಣೆ ಬರೆಯುತ್ತಿದ್ದಾರೆ. ಇತ್ತೀಚೆಗಷ್ಟೇ 'ತಾಯವ್ವ' ಎಂಬ ಚಿತ್ರವನ್ನು ನಿರ್ದೇಶಿಸಿದ್ದ ಸಾತ್ವಿಕ್ ಪವನ ಕುಮಾರ್ ಈಚಿತ್ರಕ್ಕೆ ಛಾಯಾಗ್ರಹಣ ಮತ್ತು ನಿರ್ದೇಶನ ಮಾಡುತ್ತಿದ್ದಾರೆ.



## ಪಿ.ವಿ.ಫಿಲಂ ಇನ್ಸಿಟ್ಯೂಟ್ ವತಿಯಿಂದ ಚಿತ್ರ ನಿರ್ಮಾಣ

ನಟ, ನಿರ್ಮಾಪಕ ಬಿ.ಗುರುಪ್ರಸಾದ್ ಒಡೆತನದ ಪ್ರತಿಷ್ಠಿತ ಪಿ.ವಿ.ಫಿಲಂ ಇನ್ಸಿಟ್ಯೂಟ್ ಸಂಸ್ಥೆಯು ಸಿನಿಮಾಸಕ್ತರಿಗೆ ಎಲ್ಲಾ ವಿಭಾಗಗಳಲ್ಲಿ ಯಶಸ್ವಿಯಾಗಿ ತರಬೇತಿ ನೀಡುತ್ತಿದೆ. ಅಲ್ಲದೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡು ಅವರಿಗೆ ಅವಕಾಶಗಳನ್ನು ಕೊಡಿಸುತ್ತಿದ್ದಾರೆ. ಈಗ ಇನ್ನು ಒಂದು ಹೆಜ್ಜೆ ಮುಂದೆ ಹೋಗಿ ನಿರ್ಮಾಣಕ್ಕೆ ಕೈ ಹಾಕಿದ್ದಾರೆ. ಈ ಹಿನ್ನಲೆಯಲ್ಲಿ ಮೊದಲ ಪ್ರಯತ್ನ ಎನ್ನುವಂತೆ 'ಗೆಲುವಿನ ಹೆಜ್ಜೆ' ಚಿತ್ರದ ಮುಹೂರ್ತ ಸಮಾರಂಭ ಮತ್ತು ಪ್ರಾಂಶುಪಾಲರಾದ ಹಿರಿಯ ನಟಿ ರೇಖಾದಾಸ್ ಹುಟ್ಟುಹಬ್ಬದ ಸಂಭ್ರಮವು ಸಂಸ್ಥೆಯ ಆವರಣದಲ್ಲಿ ಅದ್ದೂರಿಯಾಗಿ ನಡೆಯಿತು. ತಂದೆ,ತಾಯಿ ಹಾಗೂ ಮಗ ಅಭಿನಯಿಸಿದ ಪ್ರಥಮ ದೃಶ್ಯಕ್ಕೆ ಪ್ರಿಯಾಂಕ ಉಪೇಂದ್ರ ಕ್ಲಾಪ್, ಬಿಗ್‌ಬಾಸ್ ವಿಜೇತ ಪ್ರಥಮ್ ಆಕ್ಷನ್, ಹಿರಿಯನಟ ಬ್ಯಾಂಕ್ ಜನಾರ್ಧನ್ ಕ್ಯಾಮಾರ ಆನ್ ಮಾಡಿದರು. ಸುಂದರ ಸಮಯದಲ್ಲಿ ಬಾಗಲುಗುಂಟೆ ಠಾಣೆ ಇನ್ಸ್‌ಪೆಕ್ಟರ್ ಹನುಮಂತರಾಜು, ಸಬ್‌ಇನ್ಸ್‌ಪೆಕ್ಟರ್ ರಾಜಣ್ಣ, ಆಹಿಂದಾ ನಾಯಕಿ-ರಾಜ್ಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಭಾಗ್ಯಶ್ರೀಬಾಬಣ್ಣ ಮುಂತಾದವರು ಉಪಸ್ಥಿತರಿದ್ದರು. ನಂತರ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಿಯಾಂಕ ಉಪೇಂದ್ರ ಶಾಲೆಯ ವಾತಾವರಣ ತುಂಬ ಖುಷಿ ನೀಡಿದೆ. ಪ್ರಥಮ್ ನೋಡಿದರ ನಮಗೆ 100%ಎನರ್ಜಿ ಸಿಗುತ್ತದೆ. ರೇಖಾದಾಸ್ ಅವರೊಂದಿಗೆ ತೆರೆ ಹಂಚಿಕೊಂಡಿದ್ದೇನೆ. ಅವರ ಒಳ್ಳೆತನ ಇಂದಿಗೂ ಉಳಿಸಿಕೊಂಡಿದ್ದಾರೆ. ಸೆಟ್‌ನಲ್ಲಿ ಅವರೊಂದಿಗೆ ಸಾಕಷ್ಟು ಕಲಿತಿದ್ದೇನೆ. ಇಂತಹ ಶಾಲೆಗಳು ಮುಖ್ಯವಾಗಿರುತ್ತದೆ. ಈಗ ಚಿತ್ರರಂಗ ಬದಲಾವಣೆ ಆಗಿದೆ. ಸಿನಿಮಾದಲ್ಲಿ ಯಾರಿಗೆ ನಟನೆ ಮಾಡಬೇಕೆಂಬ ಆಸೆ ಇದೆ. ಅವರಿಗೂ ಇಲ್ಲಿ ತುಂಬ ಅನುಕೂಲ ಆಗುತ್ತದೆಂದು ನಂಬಿರುತ್ತೇನೆ. ನಮ್ಮ ಕಾಲದಲ್ಲಿ ಸೋಷಿಯಲ್ ಮೀಡಿಯಾ ಇರಲಿಲ್ಲ. ಇಂದು ತಂತ್ರಜ್ಞಾನ ತುಂಬಾ ಬೇಕಾಗಿದೆ. ತರಬೇತಿ ಜತೆಗೆ ಶಿಕ್ಷಣದ ಬಗ್ಗೆ ಗಮನ ಕೊಡಿ, ಮೊಬೈಲ್‌ನಿಂದ ದೂರ ಇರಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಪ್ರಿಯಾಂಕ ಮೇಡಂ ಬಹಳಷ್ಟು ಚಿತ್ರಗಳಲ್ಲಿ ನಟಿಸಿದ್ದರೆ. ಅವರ ಮಿಸ್ ನಂದಿನಿ ಸಿನಿಮಾ. ನಂದಿನಿ ಹಾಲು ಪ್ಯೂರಿಟಿಗೆ ಕಡಿಮೆ ಇಲ್ಲ. ನಮ್ಮ ಪ್ರಿಯಾಂಕ ಬ್ಯೂಟಿಗೆ ಕಡಿಮೆ ಇಲ್ಲ. ಅವರು ಸಿನಿಮಾವನ್ನು ಎಷ್ಟು ಪ್ರೀತಿಸುತ್ತಾರೆ ಎಂಬುದಕ್ಕೆ ಸಾಕಷ್ಟು ಉದಾಹರಣೆಗಳಿವೆ. ಉಪೇಂದ್ರರವರ ಸಿನಿಮಾಗಳು ಮೈಂಡ್ ಸೆಟ್ಟರ್. ಅವರ ಪಾತ್ರಗಳೇ ಸ್ಫೂರ್ತಿಯಾಗಿದೆ ಎಂದರು.



## ಸಿದ್ದರಾಮಯ್ಯ...ಯುವ ಪ್ರತಿಭೆ ರವಿ ಗೌಡ ಸಿನಿಮಾಗೆ ಸಾಥ್

ರಾಜಕೀಯ ಜಂಜಾಟಗಳ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುವು ಮಾಡಿಕೊಂಡು ಸಿನಿಮಾ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಾರೆ. ಅಂತೆಯೆ ನಿನ್ನೆ ಅವರು ತಮ್ಮ ಆತ್ಮೀಯ ಗೆಳೆಯ ಮುಡಾ ಮಾಜಿ ಅಧ್ಯಕ್ಷ ಸಿ.ಬಸವೇಗೌಡ ಅವರ ಮಗನ ಹೊಸ ಪಯಣಕ್ಕೆ ಶುಭಾಶಯ ಕೋರಿದ್ದಾರೆ. ಧ್ವಜ ಸಿನಿಮಾ ಮೂಲಕ ನಾಯಕನಾಗಿ ಮೊದಲ ಹೆಜ್ಜೆ ಇಟ್ಟಿದ್ದ ರವಿ ಗೌಡ I'm god ಸಿನಿಮಾ ಮೂಲಕ ಡೈರೆಕ್ಟರ್ ಕುರ್ಚಿ ಅಲಂಕರಿಸಿದ್ದಾರೆ. ಈ ಚಿತ್ರದಲ್ಲಿ ನಾಯಕನಾಗಿ, ನಿರ್ದೇಶಕನಾಗಿ ಹಾಗೂ ನಿರ್ಮಾಪಕನಾಗಿ ಅವರು ಜವಾಬ್ದಾರಿ ಹೊತ್ತುಕೊಂಡಿದ್ದಾರೆ. ರವಿ ಗೌಡ ನಟಿಸಿ, ನಿರ್ದೇಶಿಸಿ ಹಾಗೂ ನಿರ್ಮಿಸಿರುವ I'm god ಟೈಟಲ್ ಹಾಗೂ ಫಸ್ಟ್ ಲುಕ್ ಪೋಸ್ಟರ್ ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ನಿನ್ನೆ ಅನಾವರಣ ಮಾಡಿದರು. ಬಳಿಕ ಸಿಎಂ ಸಿದ್ದರಾಮಯ್ಯ ಮಾತನಾಡಿ, ಸಿ ಬಸವೇಗೌಡ್ರು ಮಗ ರವಿ ಗೌಡ ಮಗ ಹುಟ್ಟುವ ಮುಂಚೆಯೇ ಬಸವೇಗೌಡ ನನಗೆ ಪರಿಚಯ. ನಾನು ಬಸವೇಗೌಡರ ಮಗ ಸಿನಿಮಾದಲ್ಲಿ ನಟಿಸುತ್ತಾನೆ. ಸಿನಿಮಾ ಕ್ಷೇತ್ರಗಳಲ್ಲಿ ಒಳ್ಳೆ ನಟನಾಗಿ, ನಿರ್ದೇಶಕನಾಗಿ ಮೂಡಿ ಬರಲಿ. ದುಡ್ಡಿದ್ರೆ ಯಾರು ನಿರ್ಮಾಪಕರು ಆಗಬಹುದು. ಆದರೆ ನಟನೆ, ನಿರ್ದೇಶಕರಾಗುವುದು ರಕ್ತದಲ್ಲಿ ಬಂದಾಗ ಮಾತ್ರ ಸಾಧ್ಯವಾಗುವುದು. ಬಸವೇಗೌಡ ಮಗ ಸಿನಿಮಾ ರಂಗದಲ್ಲಿ ತೊಡಗಿಸಿಕೊಂಡಿರುವುದು ಸಂತಸ. ಈ ಕ್ಷೇತ್ರದಲ್ಲಿ ಪ್ರಬುದ್ಧವಾಗಿ ಬೆಳೆಯಬೇಕು ಎಂದು ಆಶಿಸುತ್ತೇನೆ. ನಾನು ಸಿನಿಮಾ ನೋಡುತ್ತೇನೆ. ಸಿನಿಮಾ ಕ್ಷೇತ್ರದಲ್ಲಿ ದೊಡ್ಡದಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು. I'm god ರೋಮ್ಯಾಂಟಿಕ್ ಥ್ರಿಲ್ಲರ್ ಕಥಾಹಂದರ ಹೊಂದಿದೆ. ಈಗಾಗಲೇ ಚಿತ್ರೀಕರಣ ಮುಕ್ತಾಯಗೊಂಡಿದೆ. ಬೆಂಗಳೂರು ಹಾಗೂ ಕೇರಳದಲ್ಲಿ ಶೂಟಿಂಗ್ ನಡೆಸಲಾಗಿದೆ. ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸ ಭರದಿಂದ ಸಾಗುತ್ತಿದೆ. ಸಿಬಿಜಿ ಪ್ರೊಡಕ್ಷನ್ಸ್ ನಡಿ ಮೂಡಿ ಬರ್ತಿರುವ I'm god ಚಿತ್ರಕ್ಕೆ ಕಾಂತಾರ ಮ್ಯೂಸಿಕ್ ಮಾಂತ್ರಿಕ ಅಜನೀಶ್ ಲೋಕನಾಥ್ ಸಂಗೀತ ನಿರ್ದೇಶನ ಮಾಡುತ್ತಿದ್ದು, ರವಿ ವರ್ಮಾ ಸಾಹಸ ನಿರ್ದೇಶನ ಹಾಗೂ ಜಿತಿನ್ ದಾಸ್ ಕ್ಯಾಮೆರಾ ಕೆಲಸ, ಸುರೇಶ್ ಅರುಮುಗಂ ಸಂಕಲನ ಚಿತ್ರಕ್ಕಿರಲಿದೆ.



## ರಾಣಿ ಬರ್ತಾವಳೆ....ಫೆಬ್ರವರಿ 7ಕ್ಕೆ

ಈ ಚಿತ್ರದ ಕತೆಯನ್ನು ನಿರ್ದೇಶಕ ಮಧುಚಂದ್ರ ಸುಮಾರು 700 ಜನಕ್ಕೆ ಹೇಳಿದ್ದಾರೆ !!! ಅವರಿಂದ ಫೀಡ್ ಬ್ಯಾಕ್ ತೆಗೆದುಕೊಂಡರು. ಅದರ ವೀಡಿಯೋ ಕೂಡ ಮಾಡಿದರು !! ಈ ಕತೆಯನ್ನು ತುಂಬಾ ಜನರು ಇಷ್ಟಪಡುತ್ತಾರೆ ಎಂದು ಖಚಿತ ಪಡಿಸಿಕೊಂಡ ನಂತರ ಮುಂದಿನ ಹೆಜ್ಜೆ ಇಟ್ಟಿದ್ದಾರೆ. ಅವರ ಈ ಪ್ರಾಮಾಣಿಕ ಮತ್ತು ವಿಭಿನ್ನ ಪ್ರಯತ್ನ ನೋಡಿ ಅವರಿಗೆ 150 ಜನ ಫ್ಯಾಮಿಲಿಗಳು ಸೇರಿ ಚಿತ್ರ ನಿರ್ಮಿಸಲು ಮುಂದೆ ಬಂದರು. ಚಿತ್ರದ ರಿಲೀಸ್ ಮುಂಚೆಯೇ ಚಿತ್ರತಂಡದ 150 ಜನ ನಿರ್ಮಾಪಕರು ತಮ್ಮ ಫ್ಯಾಮಿಲಿ, ನೆಂಟರು, ಗೆಳೆಯರು ಎಲ್ಲರನ್ನೂ ಸೇರಿದಂತೆ ಸುಮಾರು 2 ಸಾವಿರ ಜನಕ್ಕೆ ಈಗಾಗಲೇ ಸಿನಿಮಾ ತೋರಿಸಿದ್ದಾರೆ. ಅವರೆಲ್ಲ ನೋಡಿ ಭೇಷ್ ಹೇಳಿದ ನಂತರವೇ ಸಿನಿಮಾ ಪ್ರಚಾರಕ್ಕೆ ಲಕ್ಷಗಟ್ಟಲೆ ಧೈರ್ಯವಾಗಿ ಸುರಿದಿದ್ದಾರೆ. ತಮ್ಮ ಚಿತ್ರವನ್ನು ಮೊದಲೇ ಪ್ರೇಕ್ಷಕರಿಗೆ ತೋರಿಸಿ ಸಣ್ಣಪುಟ್ಟ ತಪ್ಪುಗಳನ್ನು ಸರಿಪಡಿಸಿ ನಂತರ ಇಡೀ ಕನ್ನಡ ಪ್ರೇಕ್ಷಕರ ಮುಂದೆ ಸಿನಿಮಾ ರಿಲೀಸ್ ಮಾಡುವ ವಿಧಾನವನ್ನು ನಿರ್ದೇಶಕ ಮಧುಚಂದ್ರ ಅವರಿಗೆಲ್ಲಾ ಹೇಳಿದಾಗ ಎಲ್ಲರಿಗೂ ಇದು ಸರಿ ಎನ್ನಿಸಿ ಹೀಗೆ ಮಾಡಿದ್ದಾರೆ. ಸುಮಾರು 200 ಜನರಂತೆ 10 ಶೋಸ್‌ಗಳನ್ನು ಸಣ್ಣ ಪ್ರಮಾಣದ ಥಿಯೇಟರ್‌ನಲ್ಲಿ ಮಾಡಿ ಪರೀಕ್ಷೆ ಮಾಡಿದ್ದಾರೆ. ಇದು ಇಡೀ ಕನ್ನಡ ಚಿತ್ರರಂಗಕ್ಕೆ ಒಂದು ರೀತಿಯಲ್ಲಿ ಹೊಸ ಮಾದರಿ ಮಾರ್ಗವನ್ನು ತೋರಿಸಿಕೊಟ್ಟಿದೆ. ಸಕ್ಸಸ್ ಆಗಿರುವ ಮಿಸ್ಟರ್ ರಾಣಿ ತಂಡದ ಪ್ರಚಾರ ತಂತ್ರಗಳು : 1. ಟೈಟಲ್ ರಿಲೀಸ್ ಮಾಡಲು ಕಮಲ್ ಹಾಸನ್ ಕರೆಸುತ್ತೇವೆ ಎಂದು ಹೇಳಿ ಹಾಸನದಿಂದ ಕಮಲ ಎನ್ನುವ ಹೆಸರಿನ ಮಹಿಳೆಯನ್ನು ಕರೆಸಿ ನಿರ್ದೇಶಕ ಮಧುಚಂದ್ರ ಎಲ್ಲರಿಗೂ ಶಾಕ್ ಕೊಟ್ಟಿದ್ದರು !!!. 2. ಮರ್ಲಿನ್ ಮನ್ರೋ ಗೆಟಪ್ ಹಾಕಿಕೊಂಡ ರಾಣಿ ಒಳಗೆ ಪಟಾಪಟಿ ಚಡ್ಡಿ ಹಾಕಿಕೊಂಡು ನಿಂತ ಪೋಸ್ಟರ್ ಎಲ್ಲಾ ಟ್ರೋಲ್ ಪೇಜುಗಳಲ್ಲೂ ವೈರಲ್ ಆಗಿ ಮೊದಲಿಂದಲೇ ಚಿತ್ರತಂಡದ ಕ್ರಿಯೇಟಿವಿಟಿ ಬಗ್ಗೆ ಜನ ಮೆಚ್ಚುಗೆ ಪಡೆಯಿತು. 3. ಉಪೇಂದ್ರ ಅವರ ಯುಐ ಚಿತ್ರದ ರಿಲೀಸ್ ಮುನ್ನವೇ ಅದರ ರಿವ್ಯೂ ಬಗ್ಗೆ ಒಂದು ವೀಡಿಯೋ ರಿಲೀಸ್ ಆಯಿತು. ಅದನ್ನು ಓಪನ್ ಮಾಡಿದಾಗ ಅದರಲ್ಲಿ ಯುಐ ಬಗ್ಗೆ ಹೇಳಿದಂತೆ ಶುರುಮಾಡಿ ಮಿಸ್ಟರ್ ರಾಣಿ ಟ್ರೈಲರ್ ಲಾಂಚ್ ಬಗ್ಗೆ ಮಾಹಿತಿ ನೀಡಿದ್ದು ವೈರಲ್ ಆಗಿತ್ತು. 4. ಮ್ಯಾಕ್ಸ್ ಚಿತ್ರದ ಹೀರೋಯಿನ್ ಯಾರು ಎಂದು ಇವರು ಬಿಡುಗಡೆ ಮಾಡಿದ ವೀಡಿಯೋ ಕೂಡ ಜನರಿಗೆ ತುಂಬಾ ಮಜ ಕೊಟ್ಟಿದೆ.



## "ಚೇಸರ್" ಚಿತ್ರದ ಚಿತ್ರೀಕರಣ ಮುಕ್ತಾಯ

ಮಾಲತಿ ಶೇಖರ್ ಶಿವಮೊಗ್ಗ ನಿರ್ಮಾಣದ, ಉಪೇಂದ್ರ ಅಭಿನಯದ "ಬುದ್ಧಿವಂತ 2" ಚಿತ್ರದ ಖ್ಯಾತಿಯ ಎಂ.ಜಯ್ಯರ್ರಮಃ ನಿರ್ದೇಶನದ ಹಾಗೂ "ದಿಲ್ವಾಲ" ಚಿತ್ರದ ಮೂಲಕ ನಾಯಕರಾಗಿ ಚಿತ್ರರಂಗ ಪ್ರವೇಶಿಸಿ, ಕನ್ನಡ ಹಾಗೂ ತೆಲುಗು ಚಿತ್ರರಂಗದಲ್ಲಿ ಜನಪ್ರಿಯರಾಗಿರುವ ಸುಮಂತ್ ಶೈಲೇಂದ್ರ ನಾಯಕನಾಗಿ ನಟಿಸಿರುವ "ಚೇಸರ್" ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ಸದ್ಯದಲ್ಲೇ ಟೀಸರ್ ಬಿಡುಗಡೆಯಾಗಲಿದೆ. ಲವ್ ಜಾನರ್ ಜೊತೆಗೆ ಸಸ್ಪೆನ್ಸ್ ವಿತ್ ಆಕ್ಷನ್ ಕಥಾ ಹಂದರವನ್ನೂ ಹೊಂದಿರುವ ಈ ಚಿತ್ರಕ್ಕೆ ನಿರ್ದೇಶಕ ಎಂ.ಜಯ್ಯರ್ರಮಃ ಅವರೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ಕೆ.ಎಸ್ ಚಂದ್ರಶೇಖರ್ ಛಾಯಾಗ್ರಹಣ, ರವಿವರ್ಮ ಸಾಹಸ ನಿರ್ದೇಶನ ಹಾಗೂ ಕೆ.ಎಂ.ಪ್ರಕಾಶ್ ಸಂಕಲನ ಈ ಚಿತ್ರಕ್ಕಿದೆ. ಸುಮಂತ್ ಶೈಲೇಂದ್ರ ಅವರಿಗೆ ನಾಯಕಿಯಾಗಿ ರಕ್ಷ ಮೆನನ್ ನಟಿಸಿದ್ದಾರೆ. ರವಿಶಂಕರ್, ರಂಗಾಯಣ ರಘು, ಸಾಧು ಕೋಕಿಲ, ಚಿಕ್ಕಣ್ಣ, ಕುರಿ ಪ್ರತಾಪ್, ಸುಚೇಂದ್ರ ಪ್ರಸಾದ್, ಕಡಿಪುಡಿ ಚಂದ್ರು, ಸಂಗೀತ ಮುಂತಾದವರು "ಚೇಸರ್" ಚಿತ್ರದ ತಾರಾಬಳಗದಲ್ಲಿದ್ದಾರೆ.



## ಲುಡೋ ಹಾಡುಗಳ ಬಿಡುಗಡೆ

ಪ್ಯಾನ್ ಇಂಡಿಯಾ 'ಲುಡೋ' ಸಿನಿಮಾದ ಹಾಡುಗಳ ಬಿಡುಗಡೆ ಸಮಾರಂಭವು ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು. ನೀಲಕಂಠ ಪ್ರೊಡಕ್ಷನ್ ಹೌಸ್ ಅಡಿಯಲ್ಲಿ ಮಹೇಂದ್ರನ್.ಎಂ. ಬಂಡವಾಳ ಹೂಡಿದ್ದಾರೆ. ಕನ್ನಡಿಗ ಡಿ. ಯೋಗರಾಜ್ ಸಿನಿಮಾಕ್ಕೆ ರಚನೆ, ಛಾಯಾಗ್ರಹಣ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶನ ಮಾಡಿರುವುದು ನಾಲ್ಕನೇ ಅನುಭವ. ಸಚಿವ ದಿನೇಶ್‌ಗುಂಡುರಾವ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಸಚಿವರು ಕನ್ನಡ ಸಿನಿಮಾರಂಗದಲ್ಲಿ ಒಳ್ಳೆಯ ಚಿತ್ರಗಳು ಬರುವ ಅಗತ್ಯತೆ ಬಹಳವಾಗಿದೆ. ಹೊಸ ಯುವ ಪ್ರತಿಭಗಳು ಬರಬೇಕು. ಅವರ ಆಲೋಚನೆಗಳು ವಿನೂತನ ರೀತಿಯಲ್ಲಿ ಪ್ರಯತ್ನ ಮಾಡುವ ಧೈರ್ಯ ಇರುತ್ತದೆ. ಸೃಜನಾತ್ಮಕ ಕ್ಷೇತ್ರದಲ್ಲಿ ಸಿನಿಮಾ ಮುಖಾಂತರ ಜನರ ಮುಂದೆ ಕಾರ್ಯಗತ ಮಾಡಬಹುದು. ಕಲೆ ಎಲ್ಲರಿಗೂ ಒಲಿಯುವುದಿಲ್ಲ. ಆಯ್ಕೆ ಮಂದಿಗೆ ಮಾತ್ರ ಸಿಗುತ್ತದೆ. ಅಂತಿಮವಾಗಿ ಅವಲಂಬಿತವಾಗಿರುವುದು ಪ್ರೇಕ್ಷಕ, ಜನರ ಮೇಲೆ. ಯಾವ ಒತ್ತಡವು ನಡೆಯುವುದಿಲ್ಲ. ಇಚ್ಛಾನುಸಾರ ಯಾರ ಮೇಲೆ ಪ್ರೀತಿ, ಆಕರ್ಷಣೆ ಬರುತ್ತದೋ ಅವರು ಮೇಲೆ ಬರುತ್ತಾರೆ. ಆದರೂ ನಮ್ಮ ಪ್ರಾಮಾಣಿಕ ಪ್ರಯತ್ನಗಳು ನಿಲ್ಲಬಾರದು. ನಿಮ್ಮಗಳ ಶ್ರಮ ತೆರೆ ಮೇಲೆ ಕಾಣಿಸುತ್ತದೆ. ಒಳ್ಳೆಯದಾಗಲಿ ಎಂದರು. ನಿರ್ದೇಶಕರು ಹೇಳುವಂತೆ ಇದೊಂದು ಹೈಪರ್ ಲಿಂಕ್ ಕಥೆ ಎನ್ನಬಹುದು. ನಾಲ್ಕು ಭಿನ್ನ ಮನಸ್ಸುಗಳ ಪಾತ್ರಗಳು ಬೇರೆ ರೀತಿಯಲ್ಲಿ ಇದ್ದರೂ ಒಬ್ಬರಿಗೊಬ್ಬರು ಭೇಟಿಯಾಗುವುದಿಲ್ಲ ಎಂದರು.



## ಗುಬ್ಬಿ ವೀರಣ್ಣ ಪ್ರಶಸ್ತಿ ವೃತ್ತಿ ರಂಗ ಭೂಮಿಗೆ ಮೀಸಲಿರಿಸಲು ಬೇಡಿಕೆ

ಬಾದಾಮಿ:'ರಾಜ್ಯ ಸರ್ಕಾರವು ಗುಬ್ಬಿ ವೀರಣ್ಣ ಪ್ರಶಸ್ತಿಗೆ ಹವ್ಯಾಸಿ ರಂಗಭೂಮಿ ಕಲಾವಿದರನ್ನು ಆಯ್ಕೆ ಮಾಡದೇ ವೃತ್ತಿ ರಂಗಭೂಮಿಗೆ ಈ ಪ್ರಶಸ್ತಿಯನ್ನು ಮೀಸಲಾಗಿರಿಸಬೇಕು' ಎಂದು ವೃತ್ತಿ ರಂಗಭೂಮಿ ಮಾಲೀಕರ ಸಂಘದ ಅಧ್ಯಕ್ಷ ಎಲ್.ಬಿ. ಶೇಖ್ ಒತ್ತಾಯಿಸಿದ್ದಾರೆ. ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ವೃತ್ತಿ ರಂಗಭೂಮಿ ಕಲಾವಿದರಿಗೆ 'ಗುಬ್ಬಿ ವೀರಣ್ಣ ಪ್ರಶಸ್ತಿ' ಮತ್ತು ಹವ್ಯಾಸಿ ರಂಗಭೂಮಿ ಕಲಾವಿದರಿಗೆ 'ಕಾರಂತ ಪ್ರಶಸ್ತಿ' ಕೊಡುತ್ತ ಬರಲಾಗಿದೆ. ಆದರೆ ಈ ಬಾರಿ ಆಯ್ಕೆ ಸಮಿತಿ ಅಧ್ಯಕ್ಷ ಕುಂ. ವೀರಭದ್ರಪ್ಪ ಮತ್ತು ಸಮಿತಿ ಸದಸ್ಯರು 2023ರ ಗುಬ್ಬಿ ವೀರಣ್ಣ ಪ್ರಶಸ್ತಿಗೆ ಹವ್ಯಾಸಿ ರಂಗಭೂಮಿ ಕಲಾವಿದೆಯೊಬ್ಬರನ್ನು ಆಯ್ಕೆ ಮಾಡಿ ವೃತ್ತಿ ರಂಗಭೂಮಿಯನ್ನು ನಿರ್ಲಕ್ಷಿಸಿದ್ದಾರೆ' ಎಂದು ದೂರಿದರು. 'ಪ್ರಶಸ್ತಿ ಆಯ್ಕೆ ಬಗ್ಗೆ ಸರ್ಕಾರಿ ಆದೇಶವಾಗಿದ್ದರೂ ಮುಖ್ಯಮಂತ್ರಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಅದನ್ನು ತಡೆಹಿಡಿದು, ಮರುಪರಿಶೀಲಿಸಿ ವೃತ್ತಿರಂಗಭೂಮಿ ಕಲಾವಿದರಿಗೆ ಪ್ರಶಸ್ತಿ ನೀಡಬೇಕು ಎಂದು ವೃತ್ತಿ ರಂಗಭೂಮಿ ಕಲಾವಿದರ ಸಂಘದ ಪ್ರಧಾನ ಕಾರ್ಯದರ್ಶಿ ಶಂಭುಲಿಂಗಪ್ಪ ಚಿಂದೋಡಿ ಅವರು ಒತ್ತಾಯಿಸಿದ್ದಾರೆ' ಎಂದರು.



## ಟೀಸರ್ ಹಾಗೂ ಹಾಡುಗಳಲ್ಲಿ 'ನೆನಪುಗಳ ಮಾತು ಮಧುರ'

ಪತ್ರಕರ್ತ, ಕಾರ್ಯಕಾರಿ ನಿರ್ಮಾಪಕನಾಗಿ ಚಿತ್ರರಂಗಕ್ಕೆ ಪರಿಚಯವಿರುವ ಅಫ್ಜಲ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನೃತ್ಯ ನಿರ್ದೇಶನದ ಜೊತೆಗೆ ನಿರ್ದೇಶನವನ್ನು ಮಾಡಿರುವ ಹಾಗೂ RED & WHITE ಸೆವೆನ್‌ರಾಜ್ ನಟಿಸಿ, ನಿರ್ಮಿಸಿರುವ "ನೆನಪುಗಳ ಮಾತು ಮಧುರ" ಚಿತ್ರದ ಟೀಸರ್ ಹಾಗೂ ಹಾಡುಗಳು ಇತ್ತೀಚಿಗೆ ಬಿಡುಗಡೆಯಾಯಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಎಂ ನರಸಿಂಹಲು ಟೀಸರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. "ನೆನಪುಗಳ ಮಾತು ಮಧುರ" ಚಿತ್ರದಲ್ಲಿ ಆರು ಕಥೆಗಳ ಸಂಗಮವಿದೆ. ಹಾಗೆ ಆರು ಜೋಡಿಗಳ ಪ್ರೇಮಕಥೆಯೂ ಇದೆ. ಸದ್ಯದಲ್ಲೇ ನಾವು ಎದುರುಸುತ್ತಿರುವ ಹಾಗೂ ಕಣ್ಣಮುಂದೆ ನೋಡುತ್ತಿರುವ ಕೆಲವು ವಿಷಯಗಳೆ ಈ ಚಿತ್ರದ ಕಥೆಗೆ ಸ್ಪೂರ್ತಿ. ಪ್ರಸ್ತುತ ಚಿತ್ರದ ಚಿತ್ರೀಕರಣ ಹಾಗೂ ಉಳಿದ ಕೆಲಸಗಳು ಮುಕ್ತಾಯವಾಗಿದೆ. ಚಿತ್ರ ತೆರೆಗೆ ಬರಲು ಸಿದ್ದವಾಗಿದೆ.



ಇಂದು ಟೀಸರ್ ಹಾಗೂ ಹಾಡುಗಳು ಅನಾವರಣವಾಗಿದೆ. FMD music ಯುಟ್ಯೂಬ್ ಚಾನಲ್‌ನಲ್ಲಿ ಹಾಡುಗಳನ್ನು ನೋಡಬಹುದು ಎಂದು ನಿರ್ದೇಶಕ ಅಫ್ಜಲ್ ತಿಳಿಸಿದರು. ಮಾರ್ಚ್‌ನಲ್ಲಿ ಚಿತ್ರ ತೆರೆಗೆ ತರುವ ಸಿದ್ದತೆ ನಡೆಸುತ್ತಿದ್ದೇನೆ ಎಂದರು.

## 'ಪರಾಕ್'ಗೆ ಚರಣ್ ರಾಜ್ ಸಂಗೀತ ಮೆರುಗು

ಅರ್ಜುನ್ ಜನ್ಯ, ಹರಿಕೃಷ್ಣ ನಂತರ ಕನ್ನಡ ಚಿತ್ರರಂಗದ ಸಂಗೀತ ಲೋಕದಲ್ಲಿ ಹೊಸ ಅಲೆ ಎಬ್ಬಿಸುತ್ತಿರುವವರು ಚರಣ್ ರಾಜ್. ಚರಣ್ ಸಂಗೀತ ನಿರ್ದೇಶಕನಕ್ಕೆ ಪ್ರತ್ಯೇಕ ಪ್ರೇಕ್ಷಕ ವರ್ಗ ಹುಟ್ಟುಕೊಂಡಿದೆ. 'ಟಗರು', 'ಸಲಗ', 'ಸಪ್ತ ಸಾಗರದಾಚೆ ಎಲ್ಲೋ' ಭೀಮ, ಬ್ಯಾಡ್ ಮ್ಯಾನರ್ಸ್, ಹೆಡ್ ಬುಷ್, ಜೇಮ್ಸ್ ಮುಂತಾದ ಸಿನಿಮಾಗಳಿಗೆ ಸಂಗೀತ ಸಂಯೋಜಿಸಿರುವ ಕನ್ನಡ ಚಿತ್ರರಂಗದ ಪ್ರತಿಭಾವಂತ ಗೀತ ಸಂಯೋಜಕ ಚರಣ್ ರಾಜ್ ಈಗ ಪರಾಕ್ ಅಂಗಳಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಕ್ಲಾಸ್ ಹಾಗೂ ಮಾಸ್ ಎರಡು ಜಾನರ್ ಸಿನಿಮಾಗಳಿಗೆ ಅದ್ಭುತ ಸಂಗೀತ ಮೆರುಗು ನೀಡುವ ಈ ಮ್ಯೂಸಿಕ್ ಮಾಂತ್ರಿಕ ರೋರಿಂಗ್ ಸ್ಟಾರ್ ಶ್ರೀಮುರಳಿ ಮುಂದಿನ ಸಿನಿಮಾ ಪರಾಕ್‌ಗೆ ಸಂಗೀತ ಬಲ ನೀಡುತ್ತಿದ್ದಾರೆ. ಯುವ ಪ್ರತಿಭೆ ಹಾಲೇಶ್ ಕೋಗುಂಡಿ ಪರಾಕ್ ಚಿತ್ರವನ್ನ ಡೈರೆಕ್ಷನ್ ಮಾಡುತ್ತಿದ್ದು, ಈ ಚಿತ್ರದ ಮೂಲಕ ನಿರ್ದೇಶಕರಾಗಿ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಶ್ರೀಮುರಳಿ ಈ ಹಿಂದೆನೂ ಹೊಸಬರ ಜೊತೆಗೆ ಕೆಲಸ ಮಾಡಿದ್ದಾರೆ. ಈಗಲೂ ಅದನ್ನ ಫಾಲೋ ಮಾಡುತ್ತಿದ್ದಾರೆ. ದೊಡ್ಡ ಬಜೆಟ್‌ನಲ್ಲಿ ಈ ಚಿತ್ರ ತಯಾರಾಗುತ್ತದೆ. ಬ್ರ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಪರಾಕ್ ಸಿನಿಮಾ ನಿರ್ಮಾಣವಾಗುತ್ತಿದೆ. ತಾರಾಬಳಗವೂ ದೊಡ್ಡದೇ ಇರಲಿದೆ.



## ಮೈಸೂರಿನ ಪ್ರಿಟಿ ಪ್ರಿಯಾಂಕಾ ಈಗ ನಾಯಕಿ

"ಏಳುಮಲೆಯ ಮಡಿಲಲ್ಲಿ ಎದೆ ನಡುಗಿಸಿದ ಪ್ರೇಮಕಥೆ"ಯ ನಾಯಕನಾಗಿ ಕ್ರೇಜಿ ಕ್ವೀನ್ ರಕ್ಷಿತಾ ತಮ್ಮ ರಾಣಾರನ್ನು ಪರಿಚಯಿಸಿದ್ದ ಸ್ಟಾರ್ ಡೈರೆಕ್ಟರ್ ತರುಣ್ ಸುಧೀರ್ ಈಗ ನಾಯಕಿಯನ್ನು ಘೋಷಣೆ ಮಾಡಿದ್ದಾರೆ. ಗುರುಶಿಷ್ಯರು ಸಿನಿಮಾ ನಿರ್ಮಿಸಿ ಯಶಸ್ಸಿನ ಬಳಿಕ ತರುಣ್, ಅಟ್ಲಾಂಟಾ ನಾಗೇಂದ್ರ ಎಂಬುವವರ ಜೊತೆಗೂಡಿ ನಿರ್ಮಿಸುತ್ತಿರುವ ಹೊಸ ಕಥೆಗೆ ಹೊಸ ನಾಯಕಿಯನ್ನು ಕರೆ ತಂದಿದ್ದಾರೆ. ತರುಣ್ ಸುಧೀರ್ ಬಳಗದಲ್ಲಿ ಕೆಲಸ ಮಾಡಿರುವ ಪುನೀತ್ ರಂಗಸ್ವಾಮಿ ಎಂಬುವವರ ಚೊಚ್ಚಲ ನಿರ್ದೇಶನದಲ್ಲಿ ಮೂಡಿ ಬರ್ತಿರುವ ನೈಜ ಘಟನೆಯ ಪ್ರೇಮಕಥೆಯಲ್ಲಿ ಮೈಸೂರಿನ ಪ್ರಿಟಿ ಪ್ರಿಯಾಂಕಾ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಮಹಾನಟಿ ವಿನ್ನರ್ ಪಟ್ಟ ಪಡೆದಿದ್ದ ಪ್ರಿಯಾಂಕಾ ತರುಣ್ ನಿರ್ಮಾಣದ ಚಿತ್ರದಲ್ಲಿ ನಾಯಕಿಯಾಗಿ ಚಿತ್ರರಂಗಕ್ಕೆ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಮಹಾನಟಿ ಶೋ ಜಡ್ಜ್ ಆಗಿದ್ದಾಗ್ಲೇ ಪ್ರಿಯಾಂಕಾ ಅಭಿನಯವನ್ನು ತರುಣ್ ಸುಧೀರ್ ಮೆಚ್ಚಿಕೊಂಡಿದ್ದರು. ಇದೀಗ ಅವರದ್ದೇ ನಿರ್ಮಾಣದ ಚಿತ್ರದಲ್ಲಿ ಹೀರೋಯಿನ್ ಆಗಿ ನಟಿಸುವ ಬೊಂಬಾಟ್ ಚಾನ್ಸ್ ಪ್ರಿಯಾಂಕಾಗೆ ಸಿಕ್ಕಿದೆ. ಮೂಲತಃ ಮೈಸೂರಿನವರಾದ ಪ್ರಿಯಾಂಕಾ ನಟಿಯಬೇಕು ಎಂಬ ಕನಸಿತ್ತು.






# ಚಲನಚಿತ್ರ ನಿರ್ದೇಶಕರ ಸಂಘವನ್ನು ಕಡೆಗಣಿಸಿದರೆ ಅಕಾಡೆಮಿ ಮೇಲೆ ಕಾನೂನು ಕ್ರಮ..

1984ರಲ್ಲಿ ಭಾರತೀಯ ಸಿನಿಮಾ ರಂಗದ ದಿಗ್ಗಜರಾದ ಪುಟ್ಟಣ್ಣ ಕಣಗಾಲರು ಮತ್ತು ಹಿರಿಯ ನಿರ್ದೇಶಕರುಗಳಾದ ಲಕ್ಷ್ಮೀ ನಾರಾಯಣ್, ಸಿದ್ದಲಿಂಗಯ್ಯ ಮುಂತಾದ ಮಹನೀಯರು ಕಟ್ಟಿರುವ ಸಂಸ್ಥೆ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ(ಕಾನ್ಫಡ). ಇದು ಸುಮಾರು 42 ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಸೇವೆ ಸಲ್ಲಿಸುತ್ತಾ ಬರುತ್ತಿದೆ. ನಿರ್ದೇಶಕರಿಗಾಗಿ ರೂಪಿತಗೊಂಡ ಈ ಸಂಘದ ಇತ್ತೀಚಿನ ಆಡಳಿತ ಮಂಡಳಿ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸುತ್ತಿರುವುದು ಶ್ಲಾಘನೀಯ. ಇಂತಹ ಸಂದರ್ಭದಲ್ಲಿ ಸಂಘದ ಅಭಿವೃದ್ಧಿ, ಯೋಜನೆ ಗಳನ್ನು ತಿಳಿಸಲು ಸಂಘವು ಪತ್ರಿಕಾಗೋಷ್ಠಿಯನ್ನು ಕರೆದಿತ್ತು. ಸಂಘಕ್ಕೆ ಸಂಬಂಧಪಟ್ಟಂತೆ ಸಂಘದ ಪದಾಧಿಕಾರಿಗಳು ವಿಷಯ ತಿಳಿಸಿದ ನಂತರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಮಾತಾನಾಡಿ 2009ರಲ್ಲಿ ಚಿತ್ರರಂಗದ ಎಲ್ಲಾ ಅಂಗ ಸಂಸ್ಥೆಗಳನ್ನು ಅಭಿವೃದ್ಧಿ ಪಡಿಸಲು ಸರಕಾರ ಕರ್ನಾಟಕ ಚಲನಚಿತ್ರ ಅಕಾಡೆಮಿಯನ್ನು ಸ್ಥಾಪನೆ ಮಾಡಿದೆ. ಈ ಸಂಸ್ಥೆಯಲ್ಲಿ ನಾಮ ನಿರ್ದೇಶಿತ ಸದಸ್ಯರೊಂದಿಗೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ, ನಿರ್ಮಾಪಕರ ಸಂಘ, ನಿರ್ದೇಶಕರ ಸಂಘ, ಕಲಾವಿದರ ಸಂಘ, ಚಲನಚಿತ್ರ, ಒಕ್ಕೂಟ, ಟಿವಿ ಅಸೋಸಿಯೇಷನ್‌ಗಳು ಪದನಿಮಿತ್ತ ಸದಸ್ಯರಾಗಿ ಕಾರ್ಯನಿರ್ವಹಿಸಬೇಕೆನ್ನುವುದು ಅಕಾಡೆಮಿಯ ನಿಯಮ. ಆದರೆ ಎರಡು ಮೂರು ವರ್ಷಗಳಿಂದ ನಿರ್ದೇಶಕರ ಸಂಘವನ್ನು ಕಡೆಗಣಿಸುತ್ತಲೆ ಬರುತ್ತಿದೆ. ನಾವುಗಳು ಅಕಾಡೆಮಿಗೆ ಬೇಟಿಕೊಟ್ಟು ರಿಜಿಸ್ಟಾರ್‌ಗೆ, ವಾರ್ತಾ ಇಲಾಖೆ ಆಯುಕ್ತರಿಗೆ, ಕಾರ್ಯದರ್ಶಿಗಳಿಗೆ ಅನೇಕ ಬಾರಿ ಮನವಿಕೊಟ್ಟು ಬಂದರೂ ಪ್ರಯೋಜನವಾಗಲಿಲ್ಲ. ಅದರಿಂದ ಬೇಸತ್ತ ನಾವು ನಮಗಾಗುತ್ತಿರುವ ಅನ್ಯಾಯದ ಬಗ್ಗೆ ನ್ಯಾಯ ಸಿಗುವವರೆಗೂ ಹೋರಾಟ ಮಾಡುತ್ತೇವೆ. ನಮಗೆ ಅವಮಾನ ಮಾಡಲಿ. ಆದರೆ



ಸಂಘಕ್ಕೆ ಅವಮಾನ ಮಾಡುವುದನ್ನ ಸಹಿ ಸೋದಿಲ್ಲ. ಅದು ಪುಟ್ಟಣ್ಣ ಕಣಗಾಲರಿಗೆ ಅವಮಾನ. ಅಕಾಡೆಮಿಯ ಪ್ರಧಾನ ಅಂಗ ವಾಗಿರುವ ನಿರ್ದೇಶಕರ ಸಂಘವನ್ನು ಹೊರ ಗಿಟ್ಟು ಅಕಾಡೆಮಿ ಕಾರ್ಯನಿರ್ವಹಿಸುತ್ತಿದೆ. ಇದೇ ರೀತಿ ಮುಂದುವರಿದರೆ ಅಕಾಡೆಮಿಯ ವಿರುದ್ಧ ಕಾನೂನು ಕ್ರಮ ಜರುಗಿಸಲಿದ್ದೇವೆ ಎಂದು ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಜಗದೀಶ್ ಕೊಪ್ಪ, ಕಾರ್ಯದರ್ಶಿಗಳಾದ ಸೆಬೆಸ್ಟಿನ್ ಡೇವಿಡ್, ಜಂಟಿ ಕಾರ್ಯದರ್ಶಿಗಳಾದ ಮಳವಳ್ಳಿ ಸಾಯಿಕೃಷ್ಣ ಖಜಾಂಚಿಗಳಾದ ಆದಿತ್ಯ ಚಿಕ್ಕಣ್ಣ ವಿಚಾರಣ ಸಮಿತಿ ಸಂಚಾಲಕರಾದ ಜೆ ಜಿ ಕೃಷ್ಣ, ಸಂಯೋಜನ ಸಮಿತಿ ಸಂಚಾಲಕ ರಾದ ರಾಮನಾಥ್ ಋಗ್ವೇದಿ, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಉಪಸಮಿತಿಗಳ ಸದಸ್ಯರು ಹಾಜರಿದ್ದರು.

# 'ಅಧಿಪತ್ರ' ಸಿನಿಮಾ ಫೆ.7ಕ್ಕೆ ಬಿಡುಗಡೆ





ರೂಪೇಶ್ ಶೆಟ್ಟಿ ನಾಯಕನಾಗಿ, ಜಾಹ್ನವಿ ನಾಯಕಿಯಾಗಿ ಅಭಿನಯಿಸಿರುವ ಅಧಿಪತ್ರ ಫೆಬ್ರವರಿ 7ಕ್ಕೆ ಬಿಡುಗಡೆಯಾಗುತ್ತಿದೆ. ರಂಗಿ ತರಂಗವನ್ನು ನೆನಪಿಸುವ ಟ್ರೇಲರ್ ರಿಲೀಸ್ ಮಾಡಿ ಕುತೂಹಲ ಹೆಚ್ಚಿಸಿರುವ ಚಿತ್ರತಂಡ ಬೆಂಗಳೂರಿನ ಎಂಎಂಬಿ ಲೆಗಸಿಯಲ್ಲಿ ಪ್ರೀ ರಿಲೀಸ್ ಇವೆಂಟ್ ಆಯೋಜಿಸಿತ್ತು. ಕಾರ್ಯ ಕ್ರಮಕ್ಕೆ ಮುಖ್ಯ ಅತಿಥಿಯಾಗಿ ಲಹರಿ ವೇಲು, ಬೆಳ್ಳುಳ್ಳಿ ಕಬಾಬ್ ಖ್ಯಾತಿಯ ಚಂದ್ರು, ನಿರ್ಮಾ ಪಕ ಆರ್ ಜೆ ಪ್ರದೀಪ್, ಹೀಗೂ ಉಂಟೆ ಖ್ಯಾತಿಯ ಆರ್. ನಾರಾಯಣಸ್ವಾಮಿ ಭಾಗ ವಹಿಸಿದ್ದರು. ಈ ವೇಳೆ ನಟ ರೂಪೇಶ್ ಶೆಟ್ಟಿ ಮಾತನಾಡಿ, ಸಿನಿಮಾಗಾಗಿ ನಾವೆಲ್ಲಾ ಪ್ರಯತ್ನ ಹಾಕಿದ್ದೇವೆ. ಜನರ ಫಲಿತಾಂಶಕ್ಕಾಗಿ ಕಾಯುತ್ತಿ ದ್ದೇವೆ. ಚಯನ್ ಶೆಟ್ಟಿ ಹೇಳಿದ ಕಥೆ ಕೇಳಿ ನಾನು ಸಿನಿಮಾ ಒಪ್ಪಿಕೊಂಡೆ. ತುಂಬಾ ನೀಟಾ ಗಿ ಚಿತ್ರ ಮಾಡಿದ್ದಾರೆ. ನಾನು ಒಬ್ಬ ಪ್ರೇಕ್ಷಕನಾಗಿ ಸಿನಿಮಾಗಾಗಿ ಕಾಯುತ್ತಿದ್ದೇನೆ. ಸೂಪರ್ ಕಥೆ. ಕಂಟೆಂಟ್ ಓರಿಯೆಂಟ್ ಸಿನಿಮಾ. ನಿಮಗೆ ಖಂಡಿತ ಇಷ್ಟವಾಗುತ್ತದೆ ಎಂದರು.

# ಬಲರಾಮನಿಗೆ ವಿಲನ್‌ಲುಕ್ನಲ್ಲಿ ವಿನಯ್ ಗೌಡ..

ಬಿಗ್ ಬಾಸ್ ಮೂಲಕವೇ ಹೆಚ್ಚು ಜನಪ್ರಿಯ ತೆ ಪಡೆದವರು ನಟ ವಿನಯ್ ಗೌಡ. 2012 ರಲ್ಲಿಯೇ ಕಿರುತೆರೆಯ ಧಾರಾವಾಹಿ ಮೂಲ ಕ ಬಣ್ಣದ ಲೋಕಕ್ಕೆ ಬಂದ ವಿನಯ್ ಗೌಡ ಬದುಕು ಬದಲಿಸಿದ್ದು ಮಾತ್ರ ಕನ್ನಡದ ಅತೀ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಕನ್ನಡ ಸೀಸನ್ 10. ಅಲ್ಲಿಂದ ಹೊಸ ಪಥ ದತ್ತ ವಿನಯ್ ಮುಖಮಾಡಿದ್ದಾರೆ. ಸ್ಟಾರ್ ನಟರ ಸಿನಿಮಾಗಳಲ್ಲಿ ಖಡಕ್ ಖಳನಾಗುವ ತಮ್ಮ ಬಹುವರ್ಷಗಳ ಕನಸನ್ನು ಸಾಕಾರ ಮಾಡಿಕೊಂಡಿದ್ದಾರೆ. ಅದರಂತೆ, "ಬಲರಾ ಮನ ದಿನಗಳು" ಸಿನಿಮಾದಲ್ಲಿ, ವಿನೋದ್ ಪ್ರಭಾಕರ್ ಎದುರು ಖಡಕ್‌ಖಳನಾಗಿ ಎಂಟ್ರಿ ಕೊಟ್ಟಿದ್ದಾರೆ ವಿನಯ್ ಗೌಡ. ಕೆ.ಎಂ ಚೈತನ್ಯ, ನಿದೇಶಿಸುತ್ತಿರುವ "ಬಲರಾಮನ ದಿನಗಳು" ಒಂದಷ್ಟು ಭಾಗದ ಶೂಟಿಂಗ್ ಮುಗಿಸಿದ್ದಾರೆ. ಮರಿ ಟೈಗರ್ ವಿನೋದ್ ಪ್ರಭಾಕರ್ ನಾಯ ಕನಾಗಿ ನಟಿಸುತ್ತಿರುವ ಈ ಸಿನಿಮಾದಲ್ಲಿ, ಖಳನ ಪಾತ್ರದಲ್ಲಿ ಬಿಗ್‌ಬಾಸ್ ಖ್ಯಾತಿಯ ವಿನಯ್ ಗೌಡ ವಿಜೃಂಭಿಸುತ್ತಿದ್ದಾರೆ.






Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212